03 ಸೆಪ್ಟೆಂಬರ್ 2025 ಬುಧವಾರ ಬೆಲೆ ₹ 2.00 ಸಂಪುಟ : 19 ಸಂಚಿಕೆ : 174 | ಪುಟ-4 | ಹಾಸನ | E-mail : prajodayahsn@gmail.com | RNI NO: KARKAN/2007/22629

ಜನಮನದ ದನಿ

# ಪ್ರಜೋದಯ

ದಿನಪತ್ರಿಕೆ

ಸಂಪಾದಕ : ಜೆ.ಆರ್. ಕೆಂಚೇಗೌಡ




ಆಸ್ಟ್ರೇಲಿಯಾ ಕ್ರಿಕೆಟ್ ತಂಡದ ವೇಗಿ ಮಿಚಲ್ ಸ್ಟಾರ್ಕ್ ಅಂತರರಾಷ್ಟ್ರೀಯ ಟಿ-20 ಕ್ರಿಕೆಟ್ ಮಾದರಿಗೆ ಬ್ರಿಸ್ಬೇನ್‌ನಲ್ಲಿ ಮಂಗಳವಾರ ನಿವೃತ್ತಿ ಘೋಷಿಸಿದ್ದಾರೆ.



ದಸರಾ ಚಾಲನೆಗೆ ಎಡ-ಬಲ ಗೊಂದಲ » 2


ಕಸ ವಿಲೇವಾರಿ ಘಟಕ ಶೀಘ್ರ ಉದ್ಘಾಟನೆ » 3


ಗ್ರಾ.ಪಂ. ಅಭಿವೃದ್ಧಿಗೆ ಪಟ್ಟಣ ಪಂಚಾಯಿತಿ ಹಣ ಬೇಡ » 4


# ಎನ್‌ಐಎ ತನಿಖೆ ಮೊದಲೇ ಏಕೆ ಕೇಳಲಿಲ್ಲ

## ಸೌಜನ್ಯ ಪ್ರಕರಣದಲ್ಲಿ ಬಿಜೆಪಿ ಯಾರ ಪರ | ಮುಖ್ಯಮಂತ್ರಿ ಸಿದ್ದರಾಮಯ್ಯ ಪ್ರಶ್ನೆ

• ಪ್ರಜೋದಯ ವರದಿ

**ಬೆಂಗಳೂರು:** ಧರ್ಮಸ್ಥಳ ಪ್ರಕರಣಕ್ಕೆ ಸಂಬಂಧಿಸಿದಂತೆ ಎಸ್‌ಐಟಿ ತನಿಖೆ ನಡೆಯುತ್ತಿದೆ. ಬಿಜೆಪಿ ಈಗ ಎನ್‌ಐಎ ತನಿಖೆಗೆ ಒತ್ತಾಯಿಸುತ್ತಿದೆ. ಹಾಗಾದರೆ ನಮ್ಮ ಪೊಲೀಸರ ಮೇಲೆ ಬಿಜೆಪಿ ಯವರಿಗೆ ನಂಬಿಕೆ ಇಲ್ಲವೇ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಪ್ರಶ್ನಿಸಿದರು.

ಮಂಗಳವಾರ ಮೈಸೂರಿನಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಎಸ್‌ಐಟಿ ರಚನೆಯಾದ ಪ್ರಾರಂಭದಲ್ಲಿ ಎನ್‌ಐಎ ತನಿಖೆ ಮಾಡಿ ಎನ್ನಲಿಲ್ಲ. ನಂತರ ಮೃತದೇಹಗಳು ಸಿಗದೇ ಹೋದಾಗ ಒತ್ತಾಯಿಸುತ್ತಿದ್ದಾರೆ. ಧರ್ಮಸ್ಥಳದ ಧರ್ಮಾಧಿಕಾರಿ ವೀರೇಂದ್ರ ಹೆಗ್ಗಡೆ ಅವರೇ ಸ್ವತಃ ಸತ್ಯ ಹೊರಬರಲಿ ಎಂದು ಎಸ್‌ಐಟಿ ರಚನೆಯನ್ನು ಸ್ವಾಗತಿಸಿದ್ದಾರೆ. ನಮ್ಮ ಮೇಲಿನ ಅನುಮಾನದ ತೂಗುಗತ್ತಿ ನಿವಾರಣೆಯಾಗಬೇಕೆಂದಿದ್ದಾರೆ. ಎಸ್‌ಐಟಿ ತನಿಖೆ ಸ್ವತಂತ್ರವಾಗಿ ಮಾಡುತ್ತಿದ್ದು ನಾವ್ಯಾರು ಅದರಲ್ಲಿ ಹಸ್ತಕ್ಷೇಪ ಮಾಡಿಲ್ಲ, ಸತ್ಯ ಹೊರಬರಬೇಕು ಎಂದರು.

ಸೌಜನ್ಯ ಪ್ರಕರಣವನ್ನು ಸಿಬಿಐಗೆ ಹಸ್ತಾಂತರ ಮಾಡಬೇಕೆಂದು ಬಿಜೆಪಿ ಒತ್ತಾಯಿಸುತ್ತಿರುವ ಬಗ್ಗೆ ಪ್ರತಿಕ್ರಿಯಿಸಿ, ಸಿಬಿಐ ಕೇಂದ್ರ ಸರ್ಕಾರದ ಅಧೀನದಲ್ಲಿದ್ದು, ಅವರು ತನಿಖೆ ಮಾಡಿ ವರದಿ ಕೊಟ್ಟಿದ್ದಾರೆ. ಈಗ ಸರ್ವೋಚ್ಚ ನ್ಯಾಯಾಲಯಕ್ಕೆ ಹೋಗಬೇಕೆಂದು ಬಿಜೆಪಿ ಹೇಳುತ್ತಿದೆ. ಸೌಜನ್ಯ ಪ್ರಕರಣದಲ್ಲಿ ವೀರೇಂದ್ರ ಹೆಗ್ಗಡೆ ಅವರ ಮೇಲೆ ಆರೋಪವಿದೆ. ಹಾಗಾದರೆ ಬಿಜೆಪಿ ಯಾರ ಪರ ಇದ್ದಾರೆ ಎಂದು ಪ್ರಶ್ನಿಸಿದ ಅವರು, ಒಂದು ಕಡೆ ವೀರೇಂದ್ರ ಹೆಗಡೆ ಅವರ ಪರ ಎನ್ನುತ್ತಾರೆ ಮತ್ತೊಂದಡೆ ಸೌಜನ್ಯ ಪರ ಎನ್ನುತ್ತಾರೆ. ಒಂದು ಕಡೆ ವೀರೇಂದ್ರ ಹೆಗ್ಗಡೆ ಅವರಿಗೆ ಜೈಕಾರ ಹಾಕುತ್ತಾರೆ, ಮತ್ತೊಂದು ಕಡೆ ಸೌಜನ್ಯ ಪರ ಇರುವುದಾಗಿ ಹೇಳುತ್ತಾರೆ. ನಿಜವಾಗಿಯೂ ಇವರು ಯಾರ ಪರ ಇದ್ದಾರೆ ಎಂದು ಪ್ರಶ್ನಿಸಿದರು.



**ರಾಜಕೀಯ ಬಳಸಬಾರದು**

ಧರ್ಮಸ್ಥಳದ ವಿರುದ್ಧ ಅಪಪ್ರಚಾರಕ್ಕೆ ಹೊರದೇಶಗಳಿಂದ ಹಣ ಬಂದಿದೆ ಎಂಬ ಬಿಜೆಪಿ ಆರೋಪಕ್ಕೆ ಪ್ರತಿಕ್ರಿಯಿಸಿ, ಹೊರರಾಜ್ಯಗಳಿಂದ ಅನ್ಯ ಮೂಲಗಳಿಂದ ಧರ್ಮಸ್ಥಳ ಪ್ರಕರಣದಲ್ಲಿ ಬಿಜೆಪಿ ಯವರಿಗೇ ಹಣ ಬಂದಿದೆ. ಹೀಗಾಗಿ ಅವರು ಪ್ರತಿಭಟನೆ, ಹೋರಾಟ ಮಾಡುತ್ತಿದ್ದಾರೆ. ಇಲ್ಲದಿದ್ದರೆ ಇಷ್ಟು ವಿರೋಧ ಮಾಡುತ್ತಿರಲಿಲ್ಲ.ವಿರೋಧಗಳು ಟೀಕೆಯನ್ನು ಮಾಡಲಿ. ಆದರೆ ಎಲ್ಲಾ ವಿಷಯಗಳನ್ನೂ ರಾಜಕೀಯವಾಗಿ ಬಳಸಲು ಹೋಗಬಾರದು. ಇದರಲ್ಲಿ ಸತ್ಯವಿಲ್ಲ ಎಂದರು.

> **ಹಿಂದುಗಳಾಗಿ ಎನ್ನುವುದು ತರವಲ್ಲ**
>
> **ದಸರಾ ಉದ್ಘಾಟನೆಗೆ ಆಯ್ಕೆಯಾಗಿರುವ ಬಾನು ಮುಷ್ತಾಕ್ ಒಬ್ಬ ಮುಸ್ಲಿಂ ಮಹಿಳೆಯಾಗಿದ್ದು, ಕುಂಕುಮ ಹಚ್ಚಿಕೊಂಡು ದಸರಾ ಉದ್ಘಾಟಸಲಿ ಎಂದು ಬಿಜೆಪಿಯವರು ಒತ್ತಾಯಿಸುವುದು ಸರಿಯಲ್ಲ ಎಂದು ಸಿದ್ದರಾಮಯ್ಯ ಅವರು ಹೇಳಿದರು. ಕುಂಕುಮ ಹಚ್ಚಿಕೊಳ್ಳುವುದು ಅವರ ಧರ್ಮದಲ್ಲಿಲ್ಲ. ದಸರಾ ಹಬ್ಬವನ್ನು ನಾಡ ಹಬ್ಬ ಎಂದು ಆಚರಿಸುತ್ತೇವೆ. ಬೇರೆ ಧರ್ಮದವರನ್ನು ಉದ್ಘಾಟಕರನ್ನಾಗಿ ಆಹ್ವಾನಿಸಿದರೆ ಕುಂಕುಮ ಹಚ್ಚಿಕೊಂಡು ಬನ್ನಿ, ಹಿಂದೂಗಳಾಗಿ ಎನ್ನುವುದು ತರವಲ್ಲ. ಮುಸ್ಲಿಂ ಗುರುಗಳು ಬಾನು ಮುಷ್ತಾಕ್ ವಿರುದ್ಧ ಫತ್ವಾ ಹೊರಡಿಸಿಲ್ಲ ಎಂದು ಈಗಾಗಲೇ ಸ್ಪಷ್ಟಪಡಿಸಿದ್ದಾರೆಂದು ಹೇಳಿದರು.**

**ಸದನದಲ್ಲಿ ಬೇರೆ ಚರ್ಚೆ ಮಾಡಿದ್ದರು**

ಚಿನ್ನಯ್ಯ ಎಂಬ ವ್ಯಕ್ತಿಯನ್ನು ಕರೆತಂದಿರುವುದೇ ಕಾಂಗ್ರೆಸ್ ಎಂದು ಬಿಜೆಪಿ ಆರೋಪಕ್ಕೆ ಉತ್ತರಿಸಿ, ಸದನದಲ್ಲಿ ಈ ಬಗ್ಗೆ ಚರ್ಚೆಯಾದಾಗ ಬೇರೆ ಮಾತನಾಡಿದ ವಿರೋಧ ಪಕ್ಷದ ನಾಯಕ ಆರ್.ಅಶೋಕ್ ಹಾಗು ಶಾಸಕ ಸುನೀಲ್ ಕುಮಾರ್, ಈಗ ಬೇರೆ ಹೇಳುತ್ತಿದ್ದಾರೆ. ದಿನಕ್ಕೊಂದು ಹೇಳಿಕೆ ಕೊಡಬಾರದು. ಅಸತ್ಯದ ಮೇಲೆ ಚರ್ಚೆ ಮಾಡಿದರೆ ಹೀಗೆ ಆಗುವುದು ಎಂದರು.

**ಮರು ತನಿಖೆ ಸೌಜನ್ಯ ತಾಯಿ ತೀರ್ಮಾನಿಸಬೇಕು**

ಸೌಜನ್ಯ ಪ್ರಕರಣದ ಮರು ತನಿಖೆ ಅಗತ್ಯವಿದ್ದರೆ ನ್ಯಾಯಾಲಯಕ್ಕೆ ಹೋಗಲಿ. ನಾನು ಅದರ ತೀರ್ಪನ್ನು ನೋಡಿಲ್ಲ. ಈ ಬಗ್ಗೆ ಸೌಜನ್ಯ ತಾಯಿ ಅಂತಿಮತೀರ್ಮಾನತೆಗೆದುಕೊಳ್ಳಬೇಕು ಎಂದರು. ಈ ವೇಳೆ 12 ವರ್ಷಗಳ ಅಪಹರಣ ವಾಗಿರುವುದನ್ನು ಕಣ್ಣಾರೆ ನೋಡಿದ್ದೇನೆಂದು ಎಸ್‌ಐಟಿಗೆ ಮಹಿಳೆಯೊಬ್ಬರು ದೂರ ನೀಡಿರುವ ಬಗ್ಗೆ ಪ್ರತಿಕ್ರಿಯಿಸಿ, ಇದನ್ನು ಸಿಬಿಐ ತನಿಖೆ ನಡೆದಾಗ ಏಕೆ ಹೇಳಲಿಲ್ಲ. ಸತ್ಯ ಗೊತ್ತಿದ್ದ ಮೇಲೆ, ಅದನ್ನು ಮುಚ್ಚಿಡುವುದು ಅಪರಾಧ ಎಂದು ಹೇಳಿದರು.

# ಮದ್ಯ ಮಾರಾಟದಿಂದ 16,358 ಕೋಟಿ ರೂ.

• ಪ್ರಜೋದಯ ವರದಿ

**ಬೆಂಗಳೂರು:** ಮದ್ಯ ಮಾರಾಟದಿಂದ 202526ನೇ ಸಾಲಿನಲ್ಲಿ 40,000 ಕೋಟಿ ರೂ. ಆದಾಯ ನಿರೀಕ್ಷೆ ಇದ್ದು, ಆಗಸ್ಟ್ ವೇಳೆಗೆ 16,358.76 ಕೋಟಿ ರೂ. ಸಂಗ್ರಹಿಸುವ ಮೂಲಕ ಶೇ. 40ರಷ್ಟು ಪ್ರಗತಿ ಸಾಧಿಸಲಾಗಿದೆಯೆಂದು ಅಬಕಾರಿ ಸಚಿವ ಆರ್.ಬಿ.ತಿಮ್ಮಾಪುರ ಅವರು ಹೇಳಿದರು.

ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಮೊದಲ ಎರಡು ತ್ರೈಮಾಸಿಕದಲ್ಲಿ 16,290 ಕೋಟಿ ರೂ. ಆದಾಯದ ನಿರೀಕ್ಷೆ ಇತ್ತು. 16,358 ಕೋಟಿ ರೂ. ಆದಾಯ ಬಂದಿದ್ದು, ನಿರೀಕ್ಷೆಗಿಂತ 68.78 ಕೋಟಿ ರೂ. ಹೆಚ್ಚುವರಿ ಸಂಗ್ರಹವಾಗಿದೆ. ಡಿಜಿಟಲ್ ವ್ಯವಸ್ಥೆ ಜಾರಿಗೆ ತಂದಿದ್ದು, 5 ವರ್ಷಗಳಿಗೆ ಒಮ್ಮೆ ಆನ್‌ಲೈನ್ ಮೂಲಕ ಪರವಾನಗಿ ನವೀಕರಣಕ್ಕೆ ಅವಕಾಶ ಕಲ್ಪಿಸಲಾಗಿದೆ. ಅದರಿಂದ ಭ್ರಷ್ಟಾಚಾರಕ್ಕೆ ಕಡಿವಾಣ ಬೀಳಲಿದೆ. ಸಿಎಲ್7 ಪರವಾನಗಿ ನೀಡುವ ಹಂತ ಕಡಿತಗೊಳಿಸಲಾಗಿದೆಯೆಂದರು.

ತೆರಿಗೆ ಸಂಗ್ರಹ, ಇಲಾಖೆಯ ಕೆಲಸಗಳಲ್ಲಿ ನಿರ್ಲಕ್ಷ್ಯ ತೋರಿದ ಎ ವೃಂದದ 31, ಬಿ ವೃಂದದ 20 ಹಾಗು 43 ಅಬಕಾರಿ ಸಬ್‌ಇನ್‌ಸ್ಪೆಕ್ಟರ್‌ಗಳ ಮೇಲೆ ಶಿಸ್ತು ಕ್ರಮ ಕೈಗೊಳ್ಳಲಾಗಿದೆ. ಆಡಳಿತ ಸುಧಾರಣಾ ಆಯೋಗ ನೀಡಿದ ಶಿಫಾರಸುಗಳನ್ನು ಸಮರ್ಪಕವಾಗಿ ಜಾರಿಗೊಳಿಸಲಾಗುತ್ತಿದೆ. 62 ಶಿಫಾರಸುಗಳಲ್ಲಿ ಶೇ.95 ಶಿಫಾರಸುಗಳನ್ನು ಕಾರ್ಯ ರೂಪಕ್ಕೆ ತರಲು ಆದೇಶ ನೀಡಲಾಗಿದೆಯೆಂದು ಮಾಹಿತಿ ನೀಡಿದರು.



ಮಾದಕ ದ್ರವ್ಯ ಪದಾರ್ಥಗಳ ನಿಯಂತ್ರಣದ ಬಗ್ಗೆ ಸಾಕಷ್ಟು ಕ್ರಮವಹಿಸಬೇಕು. ಸಣ್ಣ ಪ್ಯಾಕೇಟ್‌ನಲ್ಲಿ ಸಿಹೆಚ್ ಪೌಡರ್ ತಂದು, ನೂರಾರು ಲೀಟರ್ ಮದ್ಯ ತಯಾರಿಸುವವರನ್ನು ಪತ್ತೆ ಹಚ್ಚಿ, ಕಠಿಣ ಕ್ರಮ ಕೈಗೊಳ್ಳಬೇಕು. ಎನ್‌ಡಿಪಿಎಸ್ ಕಾಯ್ದೆಯನ್ನು ಪರಿಣಾಮವಾಗಿ ಜಾರಿಗೊಳಿಸಬೇಕೆಂದು ಅಧಿಕಾರಿ ಗಳಿಗೆ ಸೂಚಿಸಲಾಗಿದೆ ಎಂದು ಮಾಹಿತಿ ನೀಡಿದರು.

ಅಕ್ರಮ ಮಾರಾಟ, ತಯಾರಿಕಾ ಘಟಕಗಳ ಮೇಲೆ ದಾಳಿ ನಡೆಸಿ 93,751 ಲೀ. ಮದ್ಯ, 13,453 ಲೀ. ಸೇಂದಿ, 4,257 ಲೀ. ಕಳ್ಳಬಟ್ಟಿ, 7,503 ಲೀ. ಬೆಲ್ಲದ ಕೊಳೆ ವಶಕ್ಕೆ ಪಡೆಯ ಲಾಗಿದೆ. ಮಹಾರಾಷ್ಟ್ರ ಗೋವಾದಿಂದ ಅಕ್ರಮ ಮದ್ಯ ಸಾಗಣೆ ಮೇಲೆ ನಿಗಾವಹಿಸಲು ಗಡಿ ಚೆಕ್ ಪೋಸ್ಟ್ ಸಿಬ್ಬಂದಿಯನ್ನು 15 ದಿನಗಳಿಗೊಮ್ಮೆ ಬದಲಿಸುತ್ತಿರುವಂತೆ ಆಯುಕ್ತರಿಗೆ ಸೂಚಿ ಸಲಾಗಿದೆ ಯೆಂದರು.

**ಎಂಎಸ್‌ಐಎಲ್‌ಗಿಲ್ಲ ಪರವಾನಗಿ**

ಎಂಎಸ್‌ಐಎಲ್‌ಗೆ ಇನ್ನು ಮುಂದೆ ಮದ್ಯದ ಮಳಿಗೆ ತೆರೆಯಲು ಹೊಸ ಪರವಾನಗಿ ನೀಡು ವುದಿಲ್ಲ. ಎಂಎಸ್ ಐಎಲ್ ಸೇರಿದಂತೆ ನಿಷ್ಕ್ರಿಯವಾ ಗಿರುವ ಪರವಾನಗಿಗಳನ್ನು ಹರಾಜು ಹಾಕಲಾಗುವುದೆಂದು ತಿಮ್ಮಾಪುರ ಹೇಳಿದರು.

ಕಳೆದ ಐದು ತಿಂಗಳಲ್ಲಿ ಬಿಯರ್ ಮಾರಾಟದಲ್ಲಿ ಕುಸಿತವಾಗಿದೆ. ಐಎಂಎಲ್ ಮಾರಾಟದಲ್ಲಿ ಏರಿಕೆಯಾಗಿದೆ. 285 ಲಕ್ಷ ಲೀಟರ್ ಐಎಂಎಲ್ ಮಾರಾಟವಾದರೆ 164 ಲಕ್ಷ ಲೀಟರ್ ಬಿಯರ್ ಮಾರಾಟವಾಗಿದೆ. ಕಳೆದ ಸಾಲಿಗಿಂತ 43 ಲಕ್ಷ ಲೀಟರ್ ಬಿಯರ್ ಕಡಿಮೆ 4 ಲಕ್ಷ ಲೀಟರ್ ಹೆಚ್ಚು ಐಎಂಎಲ್ ಮಾರಾಟವಾಗಿದೆ. ಪ್ರೀಮಿಯಂ ಮದ್ಯ ಮಾರಾಟ ದರ ತುಸು ಹೆಚ್ಚಿದ್ದು ದರ ಪರಿಷ್ಕರಣೆ ಕುರಿತು ಚಿಂತನೆ ನಡೆಸಲಾಗುವುದೆಂದರು.

## ಕಡಜ ಕಚ್ಚಿ ರೈತ ಸಾವು

• ಪ್ರಜೋದಯ ವರದಿ



**ಹಾಸನ:** ತೆಂಗಿನ ಗರಿ (ಎಡಮಟ್ಟೆ) ಪಕ್ಕಕ್ಕೆ ಹಾಕಲು ಹೋಗಿದ್ದ ರೈತನೊಬ್ಬ ಕಡಜಗಳು ಕಚ್ಚಿ ಮೃತಪಟ್ಟಿರುವ ಘಟನೆ ತಾಲ್ಲೂಕಿನ ಜೋಗಿಪುರ ಗ್ರಾಮ ದಲ್ಲಿ ಮಂಗಳವಾರ ನಡೆದಿದೆ.

ಗ್ರಾಮದ ಕಾಂತರಾಜು ಮೃತರು. ಸೈಕಲ್‌ನಲ್ಲಿ ಮನೆಗೆ ತೆರಳುತ್ತಿದ್ದಾಗ ರಸ್ತೆಗೆ ಬಿದ್ದಿದ್ದ ಎಡಮಟ್ಟೆಯನ್ನು ಪಕ್ಕಕ್ಕೆ ಹಾಕಲು ಹೋದಾಗ ಗೂಡು ಕಟ್ಟಿದ್ದ ಕಡಜಗಳು ಏಕಾಏಕಿ ದಾಳಿ ನಡೆಸಿವೆ. ಗಂಭೀರ ಗಾಯಗೊಂಡಿದ್ದ ಕಾಂತ ರಾಜು ಅವರನ್ನು ಬೆಳ್ಳೂರು ಕ್ರಾಸ್ ಆಸ್ಪತ್ರೆಗೆ ಕರೆದೊಯ್ಯುತ್ತಿದ್ದಾಗ ಮಾರ್ಗ ಮಧ್ಯೆ ಮೃತಪಟ್ಟಿದ್ದಾರೆ.

ಪಟ್ಟಣ ಠಾಣೆ ವ್ಯಾಪ್ತಿಯಲ್ಲಿ ಘಟನೆ ನಡೆದಿದೆ.

## ಸಾಲಬಾಧೆ: ರೈತ ಆತ್ಮಹತ್ಯೆ

• ಪ್ರಜೋದಯ ವರದಿ

**ಅರಕಲಗೂಡು:** ಸಾಲಬಾಧೆ ತಾಳಲಾರದೆ ರೈತ ಕೀಟನಾಶಕ ಸೇವಿಸಿ ಆತ್ಮಹತ್ಯೆಗೆ ಶರಣಾಗಿರುವ ಘಟನೆ ತಾಲ್ಲೂಕಿನ ಹಂಪಾಪುರ ಗ್ರಾಮದಲ್ಲಿ ಸೋಮವಾರ ರಾತ್ರಿ ನಡೆದಿದೆ.

ರೈತ ಜಯಣ್ಣ (48) ಮೃತರು. ರೈತನಿಗೆ ಒಂದು ಎಕರೆ ಜಮೀನು ಇದ್ದು, ಮೆಕ್ಕೆಜೋಳ ಬೇಸಾಯ ಕೈಗೊಂಡಿದ್ದರು. ಅತಿ ಮಳೆ ಪರಿ ಣಾಮ ಬೆಳೆ ಸಂಪೂರ್ಣವಾಗಿ ನಾಶಹೊಂದಿದೆ. ಖಾಸಗಿ ಫೈನಾನ್ಸ್ ಗಳಿಂದ ಒಟ್ಟು 1.45 ಲಕ್ಷ ರೂ. ಮತ್ತು ಕೈಸಾಲ ಮಾಡಿದ್ದರು ಎನ್ನಲಾಗಿದೆ. ಕಂದಾಯ ಇಲಾಖೆ ಅಧಿಕಾರಿಗಳು ಮೃತ ರೈತನ ಮನೆಗೆ ಭೇಟಿ ನೀಡಿ ಪರಿಶೀಲನೆ ನಡೆಸಿದ್ದಾರೆ. ಕೊಣನೂರು ಠಾಣೆಯಲ್ಲಿ ದೂರು ದಾಖಲಾಗಿದೆ.

## ಇಂದು ಆದಿಚುಂಚನಗಿರಿಶ್ರೀ ನೇತೃತ್ವದಲ್ಲಿ ಸಭೆ

• ಪ್ರಜೋದಯ ವರದಿ



**ಹಾಸನ:** ಒಕ್ಕಲಿಗ ಸಮುದಾಯದ ಜಾತಿ ಗಣತಿ ಕುರಿತು ಮಾಹಿತಿ ನೀಡುವ ಸಲುವಾಗಿ ಆದಿಚುಂಚನಗಿರಿ ಮಹಾಸಂಸ್ಥಾನ ಮಠದ ಪೀಠಾಧ್ಯಕ್ಷ ರಾದ ಶ್ರೀ ನಿರ್ಮಲಾನಂದನಾಥ ಸ್ವಾಮೀಜಿ ಅವರ ನೇತೃತ್ವದಲ್ಲಿ ಬುಧವಾರ ಮಧ್ಯಾಹ್ನ 3 ಗಂಟೆಗೆ ನಗರದ ಆದಿ ಚುಂಚನಗಿರಿ ಸಮುದಾಯ ಭವನದಲ್ಲಿ ಸಭೆ ನಡೆಯಲಿದೆ.

ಸಭೆಯಲ್ಲಿ ಹಾಸನ ಶಾಖಾ ಮಠದ ಶ್ರೀ ಶಂಭುನಾಥ ಸ್ವಾಮೀಜಿ, ಒಕ್ಕಲಿಗ ಸಂಘದ ನಿರ್ದೇಶಕರು, ಜನ ಪ್ರತಿನಿಧಿಗಳು, ಸಂಘ-ಸಂಸ್ಥೆಗಳ ಮುಖಂಡರು ಭಾಗವಹಿಸಲಿದ್ದಾರೆ.

# ಎಲ್‌ಎಸಿ ಮೇಲ್ಮನವಿ: ಕಾವೇರಿ ನಿಗಮಕ್ಕೆ ಸಾವಿರ ಕೋಟಿ ರೂ. ನಷ್ಟ

## ಭೂ ಸಂತ್ರಸ್ತರು ಕೋರ್ಟ್ ಮೆಟ್ಟಿಲೇರಿದ್ದರಿಂದ ಸಂಕಷ್ಟ | ಉನ್ನತ ಮಟ್ಟದ ತನಿಖೆಗೆ ರೇವಣ್ಣ ಆಗ್ರಹ

• ಪ್ರಜೋದಯ ವರದಿ

**ಹಾಸನ:** ಹೇಮಾವತಿ ಜಲಾಶಯ ಯೋಜನೆ ಭೂ ಸಂತ್ರಸ್ತರು ಹೆಚ್ಚಿನ ಪರಿಹಾರಕ್ಕಾಗಿ ನ್ಯಾಯಾಲಯ ಮೆಟ್ಟಿಲೇ ರುತ್ತಿರುವುದರಿಂದ ಪ್ರತಿ ಎಕರೆಗೆ 3 ಸಾವಿರ ರೂ. ಇದ್ದ ದರ ಈಗ 80 ಲಕ್ಷದಿಂದ ರಿಂದ 1 ಕೋಟಿ ರೂ. ವರೆಗೆ ಏರಿಕೆಯಾಗಿದ್ದು ಕಾವೇರಿ ನೀರಾವರಿ ನಿಗಮಕ್ಕೆ ಸಾವಿರಾರು ಕೋಟಿ ರೂ. ನಷ್ಟವಾಗುತ್ತಿದೆಯೆಂದು ಮಾಜಿ ಸಚಿವ ಹೆಚ್.ಡಿ.ರೇವಣ್ಣ ಅವರು ಗಂಭೀರ ಆರೋಪ ಮಾಡಿದರು.



ಸುದ್ದಿಗೋಷ್ಠಿಯಲ್ಲಿ ಮಂಗಳವಾರ ಮಾತನಾಡಿ, 1986ರಲ್ಲಿ 4(1)ರ ಅಧಿಸೂಚನೆ ಹೊರಡಿಸಿ ಭೂಸ್ವಾಧೀನಪಡಿಸಿಕೊಳ್ಳಲಾಗಿತ್ತು. ಅಂದಿನ ಮಾರುಕಟ್ಟೆ ದರದಂತೆ ಭೂಸ್ವಾಧೀನಾಧಿ ಕಾರಿಗಳು ಎಕರೆಗೆ 3 ರಿಂದ 5 ಸಾವಿರ ರೂ. ಬೆಲೆ ನಿಗದಿಪಡಿಸಿದ್ದರು. ಆ ದರವನ್ನು ಒಪ್ಪಿಕೊಳ್ಳದ ಅರ್ಜಿದಾರರು ಭೂಸ್ವಾಧೀನ ಕಾಯ್ದೆ ಕಲಂ 18(1)ರ ಅಡಿ ಮೇಲ್ಮನವಿ ಸಲ್ಲಿಸಿದ್ದರಿಂದ ಹೊಳೆನರಸೀಪುರ ಸಿವಿಲ್ ನ್ಯಾಯಾಲಯ 2005ರ ನ.30 ರಂದು ಪ್ರತಿ ಎಕರೆಗೆ 29 ರಿಂದ 30 ಸಾವಿರ ರೂ. ಪರಿಹಾರ ನೀಡುವಂತೆ ಆದೇಶಿಸಿತು. ನಂತರ ಅರ್ಜಿದಾರರು 40 ವರ್ಷಗಳ ಹಳೆಯ 4(1)ರ ಅಧಿಸೂಚನೆ ಅಡಿ ಭೂಸ್ವಾಧೀನವಾದ ಹಾಗು ಸುಮಾರು 20 ವರ್ಷಗಳ ಹಿಂದೆ ನ್ಯಾಯಾಲಯದಲ್ಲಿ ತೀರ್ಮಾನವಾದ ಎಲ್‌ಎಸಿ ಪ್ರಕರಣಗಳ ಮೇಲ್ಮನವಿಯನ್ನು 18 ರಿಂದ 20 ವರ್ಷಗಳ ಕಾಲ ವಿಳಂಬದೊಂದಿಗೆ ಜಿಲ್ಲಾ ನ್ಯಾಯಾಲಯದಲ್ಲಿ ದಾಖಲಿಸಿದ್ದರು. ಈಗ ಅರ್ಜಿದಾರರ ವಿಳಂಬ ಧೋರಣೆಯನ್ನು ಮನ್ನಾ ಮಾಡಿ ಪ್ರತಿ ಎಕರೆಗೆ 80 ಲಕ್ಷದಿಂದ ರಿಂದ 1 ಕೋಟಿ ರೂ. ವರೆಗೆ ಪರಿಹಾರ ಹಣ ಭರಿಸಬೇಕಾಗಿದೆ. ಸುಮಾರು 600 ರಿಂದ 800 ಅರ್ಜಿಗಳು ಈ ವಿಚಾರಕ್ಕೆ ಸಂಬಂಧಿಸಿದಂತೆ ಇದ್ದು ಕಾವೇರಿ ನಿಗಮಕ್ಕೆ ಒಂದು ಸಾವಿರ ಕೋಟಿ ರೂ. ವರೆಗೆ ನಷ್ಟವಾಗುವ ಸಾಧ್ಯತೆಯಿದೆ. ಕೂಡಲೇ ಹೈಕೋರ್ಟ್‌ಗೆ ಅರ್ಜಿ ಸಲ್ಲಿಸಬೇಕೆಂದು ಒತ್ತಾಯಿಸಿದರು.

**ಉನ್ನತ ಮಟ್ಟದ ತನಿಖೆಗೆ ಆಗ್ರಹ**

ಅಂದಿನ ಮಾರುಕಟ್ಟೆ ದರದಂತೆ ಭೂ ಸಂತ್ರಸ್ತರಿಗೆ ಪರಿಹಾರ ನಿಗದಿಪಡಿಸಿದ್ದರೂ ರೈತರಿಂದ ನ್ಯಾಯಾಲಯಕ್ಕೆ ಅರ್ಜಿ ಸಲ್ಲಿಸಿದ್ದು ಯಾರು, ಈ ಹಂತದಲ್ಲಿ ವಿಳಂಬ ಮಾಡಲು ಕಾರಣ ಯಾರೆಂಬುದನ್ನು ಅರಿಯಲು ಸರ್ಕಾರ ಉನ್ನತ ಮಟ್ಟದ ತನಿಖೆ ಮಾಡಬೇಕೆಂದು ಹೆಚ್.ಡಿ. ರೇವಣ್ಣ ಅವರು ಒತ್ತಾಯಿಸಿದರು.

ಈ ಬಗ್ಗೆ ಚರ್ಚಿಸಿ ಸೂಕ್ತ ತೀರ್ಮಾನಕ್ಕೆ ಬರದಿದ್ದರೆ ನಿಗಮವು ಸಾವಿರಾರು ಕೋಟಿ ರೂ. ನಷ್ಟ ಅನುಭವಿಸಬೇಕಾಗುತ್ತದೆಂದು ಹಿಂದಿನ ಜಿಲ್ಲಾಧಿಕಾರಿ ಸಿ. ಸತ್ಯಭಾಮ ಅವರು, ಮುಖ್ಯಮಂತ್ರಿ ಕಾರ್ಯದರ್ಶಿ ಬಿ.ಬಿ.ಕಾವೇರಿ, ಅಪರ ಮುಖ್ಯಕಾರ್ಯದರ್ಶಿ ಎಲ್.ಕೆ. ಅತೀಖ್, ಕಾನೂನು ನ್ಯಾಯ ಮತ್ತು ಮಾನವ ಹಕ್ಕುಗಳ ಇಲಾಖೆ ಪ್ರಧಾನ ಕಾರ್ಯದರ್ಶಿ ಕೆ.ಎಲ್.ಅಶೋಕ್, ಜಲ ಸಂಪನ್ಮೂಲ ಇಲಾಖೆ ಕಾರ್ಯದರ್ಶಿ ಗೌರವ್ ಗುಪ್ತಾ, ಆರ್ಥಿಕ ಇಲಾಖೆ ಪ್ರಧಾನ ಕಾರ್ಯದರ್ಶಿ ರಿತೇಶ್ ಕುಮಾರ್ ಸಿಂಗ್ ಅವರಿಗೆ ಅಂದಿನ ಜಿಲ್ಲಾಧಿಕಾರಿ ಸತ್ಯಭಾಮ 2025ರ ನ.11ರಂದು ಪತ್ರ ಬರೆದಿದ್ದಾರೆ. ಆದರೆ ಯಾವ ಕ್ರಮವನ್ನು ಅಧಿಕಾರಿಗಳು ಕೈಗೊಂಡಿಲ್ಲವೆಂದು ಆರೋಪಿಸಿದರು. ಜಿಲ್ಲಾ ಉಸ್ತುವಾರಿ ಸಚಿವ ಕೃಷ್ಣಬೈರೇಗೌಡ ಪ್ರಾಮಾಣಿಕರಾಗಿದ್ದು ಅವರ ಕುರಿತು ಲಘುವಾಗಿ ಮಾತನಾಡುವುದಿಲ್ಲ. ಪ್ರಕರಣದ ಪರಿಶೀಲನೆ ನಡೆಸಿ ನಷ್ಟವನ್ನು ತಡೆಯಬೇಕು. ಇಲ್ಲವಾದರೆ ಕಾವೇರಿ ನೀರಾವರಿ ನಿಗಮ ಬಾಗಿಲು ಹಾಕಬೇಕಾಗುತ್ತದೆಂದು ಎಚ್ಚರಿಕೆ ನೀಡಿದರು.

ಹೆಚ್‌ಡಿಸಿಸಿ ಬ್ಯಾಂಕ್ ಅಧ್ಯಕ್ಷ ಸೋಮನಹಳ್ಳಿ ನಾಗರಾಜ್, ಮುಖಂಡರಾದ ಹನುಮೇಗೌಡ, ನಾಗರಾಜ್ ಇದ್ದರು.

> **ಶಾಸಕರ ಹಕ್ಕುಕಿತ್ತುಕೊಳ್ಳಬೇಡಿ**
>
> **ಜಿಲ್ಲಾಧಿಕಾರಿ ಸೇರಿ ವಿವಿಧ ಅಧಿಕಾರಿಗಳು ಯಾವುದೇ ಸಮಸ್ಯೆ ಹೇಳಿಕೊಂಡು ಶಾಸಕರು ಕರೆ ಮಾಡಿದಾಗ ಸ್ವೀಕರಿಸುವ ಮನೋಭಾವ ಬೆಳೆಸಿಕೊಳ್ಳಬೇಕೆಂದು ಸಲಹೆ ನೀಡಿದರು. ನಾವು ಕರೆ ಮಾಡಿದಾಗ ಸೌಜನ್ಯ ಕ್ಕಾದರೂ ಸ್ವೀಕರಿಸಿ. ಜನರ ಸಮಸ್ಯೆ ಗಳನ್ನು ನಿಮ್ಮ ಗಮನಕ್ಕೆ ತರಲು ಪ್ರಯತ್ನಿಸುತ್ತೇವೆ. ನಿಮ್ಮಿಂದ ಆಗುವುದಿದ್ದರೆ ಕೆಲಸ ಮಾಡಿಕೊಡಿ ಇಲ್ಲವಾದರೆ ಆಗು ವುದಿಲ್ಲವೆಂದು ಸ್ಪಷ್ಟವಾಗಿ ಹೇಳಿಬಿಡಿ. ಕರೆ ಸ್ವೀಕರಿಸದಷ್ಟು ಉಡಾಫೆ ಪ್ರದರ್ಶಿಸಬೇಡಿ. ಶಾಸಕರ ಹಕ್ಕನ್ನು ಕಿತ್ತುಕೊಳ್ಳಬೇಡಿ ಎಂದು ಹರಿಹಾಯ್ದರು.**

## ಇಂದು ಕಾಂಗ್ರೆಸ್ ಕಾರ್ಯಕರ್ತರ ಸಭೆ

• ಪ್ರಜೋದಯ ವರದಿ



**ಹಾಸನ:** ಕಾಂಗ್ರೆಸ್ ಪ್ರಚಾರ ಸಮಿತಿ ರಾಜ್ಯಾಧ್ಯಕ್ಷ, ಮಾಜಿ ಸಚಿವ ವಿನಯ ಕುಮಾರ್ ಸೊರಕೆ ಅವರು ಬುಧವಾರ ಮಧ್ಯಾಹ್ನ 3.30ಕ್ಕೆ ನಗರದ ಜಿಲ್ಲಾ ಕಾಂಗ್ರೆಸ್ ಕಚೇರಿಯಲ್ಲಿ ಪಕ್ಷದ ಕಾರ್ಯಕರ್ತರ ಸಭೆ ನಡೆಸಲಿದ್ದಾರೆ. ಸಭೆಯಲ್ಲಿ ಪಕ್ಷ ಸಂಘಟನೆ ಮತ್ತು ವಿವಿಧ ಸಮಿತಿಗಳ ರಚನೆ ಬಗ್ಗೆ ಚರ್ಚೆ ನಡೆಸುವರು. ಪಕ್ಷದ ಮುಖಂಡರು, ಮುಂಚೂಣಿ ಘಟಕಗಳ ಅಧ್ಯಕ್ಷರು, ಕಾರ್ಯಕರ್ತರು ಭಾಗವಹಿಸಲಿದ್ದಾರೆಂದು ಕಾಂಗ್ರೆಸ್ ಪ್ರಚಾರ ಸಮಿತಿ ಜಿಲ್ಲಾಧ್ಯಕ್ಷ ದೇವರಾಜೇಗೌಡ ಅವರು ತಿಳಿಸಿದ್ದಾರೆ.

# ಭುವನೇಶ್ವರಿ ಒಪ್ಪದವರು ಚಾಮುಂಡೇಶ್ವರಿಯನ್ನು ಹೇಗೆ ಒಪ್ಪುತ್ತೀರಿ

• ಪ್ರಜೋದಯ ವರದಿ

**ಹಾಸನ:** ಕನ್ನಡಾಂಬೆ ಭುವನೇಶ್ವರಿಯನ್ನು ಧರ್ಮದ ಹಿನ್ನಲೆಯಲ್ಲಿ ನೋಡುವವರು ದಸರಾ ಕಾರ್ಯಕ್ರಮದ ಆರಾಧ್ಯ ದೇವತೆ ಚಾಮುಂಡೇಶ್ವರಿಯನ್ನು ಹೇಗೆ ಒಪ್ಪುತ್ತೀರಿಯೆಂದು ದಸರಾ ಉದ್ಘಾಟನೆಗೆ ಆಯ್ಕೆಯಾಗಿರುವ ಸಾಹಿತಿ ಬಾನು ಮುಷ್ತಾಕ್ ಅವರನ್ನು ಕರ್ನಾಟಕ ರಕ್ಷಣಾ ವೇದಿಕೆ ರಾಜ್ಯಾಧ್ಯಕ್ಷ ಟಿ.ಎ.ನಾರಾಯಣಗೌಡ ಅವರು ಪ್ರಶ್ನಿಸಿದರು.

ಮಂಗಳವಾರ ನಗರದಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿ, ಬಾನು ಮುಷ್ತಾಕ್ ಅವರಿಂದ ದಸರಾ ಉದ್ಘಾಟನೆಗೆ ನಮ್ಮ ಅಭ್ಯಂತರವಿಲ್ಲ. ಸಂಪ್ರದಾಯದಂತೆ ದಸರಾ ಉದ್ಘಾಟನೆ ಆಗಬೇಕು. ರಾಜಕೀಯ ತೆವಲಿಗಾಗಲಿ, ನಿಮ್ಮ ಸ್ವಂತ ಆಲೋಚನೆಗಳಿಗಾಗಲಿ ಹೀಗೆ ದಸರಾ ಉದ್ಘಾಟನೆ ಮಾಡುತ್ತೇನೆ, ಹೀಗೆ ನಡೆದುಕೊಳ್ಳುತ್ತೇನೆ ಎನ್ನುವುದು ಸರಿಯಾದ ಕ್ರಮವಲ್ಲವೆಂದರು.



ಸಾಹಿತಿ ಬಾನು ಮುಷ್ತಾಕ್ ಅವರು ಭುವನೇಶ್ವರಿಗೆ ಅರಿಶಿನ, ಕುಂಕುಮ ಹಚ್ಚಿ ಕೂರಿಸಿದರೆ ನಾನೇನು ಮಾಡಬೇಕೆಂದು ಪ್ರಶ್ನಿಸುತ್ತಾರೆ. ಭುವನೇಶ್ವರಿಯನ್ನು ಎಲ್ಲಾ ಧರ್ಮಿಯರು ಆರಾಧಿಸುತ್ತಾರೆಂಬುದು ಗೊತ್ತಿರಬೇಕು. ಬನವಾಸೆ ರಾಜಮನೆತನದಿಂದ ಆರಾಧನೆ ಪ್ರಾರಂಭವಾಗಿದೆ. ಕನ್ನಡಾಂಬೆ ಬಗ್ಗೆ ಮಾತನಾಡಿರುವವರು ಮುಂದೊಂದು ದಿನ ಚಾಮುಂಡೇಶ್ವರಿ ಬಗ್ಗೆ ಮಾತನಾಡುವುದಿಲ್ಲವೆಂದು ಹೇಗೆ ನಂಬುವುದು. ದಸರಾ ಉದ್ಘಾಟನೆ ಮಾಡುವವರು ಕುಂಕುಮ, ಬಳೆ ಹಾಕಿಕೊಂಡು ಹೋಗಬೇಕೆಂದು ನಾನು ಬಯಸುವುದಿಲ್ಲವೆಂದರು.

> **ಬಾನು ಮುಷ್ತಾಕ್ ಅವರ ಹೇಳಿಕೆಗಳಿಂದ ಕನ್ನಡಿಗರಿಗೆ ಅವಮಾನವಾಗಿದೆ. ಅರ್ಥ ರಹಿತ ಮಾತುಗಳಿಂದ ದೂರವಿದ್ದು ದಸರಾ ಉದ್ಘಾಟನೆ ಮಾಡಿದರೆ ನಮ್ಮ ಅಭ್ಯಂತರವಿಲ್ಲ. ಭುವನೇಶ್ವರಿ ಕುರಿತು ಮಾತನಾಡಿದವರು ಚಾಮುಂಡೇಶ್ವರಿ ಬಗ್ಗೆಯೂ ಮಾತನಾಡಬಹುದಲ್ಲವೇ.**
>
> **-ಟಿ.ಎ. ನಾರಾಯಣಗೌಡ,** ಕರವೇ ರಾಜ್ಯಾಧ್ಯಕ್ಷ

**ರಾಜಕೀಯ ನಿಲುವು-ತೆವಲು**

ಚಾಮುಂಡೇಶ್ವರಿ ಹಿಂದೂಗಳಿಗೆ ಮಾತ್ರ ಸೇರಿದ್ದಲ್ಲವೆಂದು ಡಿ.ಕೆ. ಶಿವಕುಮಾರ್ ಹೇಳಿದ್ದು ರಾಜಕೀಯ ನಿಲುವು-ತೆವಲು ಹೊರತು ದೇಶದ ನಿಲುವಲ್ಲ. ರಾಜಕೀಯ ಲಾಭಕ್ಕಾಗಿ ಏನು ಬೇಕಾದರೂ ಮಾತನಾಡುತ್ತಾರೆ. ನಿತ್ಯ ದೇವಸ್ಥಾನ, ಹೋಮ ಮಾಡುವವರ ಬಾಯಲ್ಲಿ ಇಂತಹ ಮಾತು ಬರಬಾರದು. ಬಸವ, ಶರಣರ ಆಚಾರ, ವಿಚಾರಗಳನ್ನು ಅಳವಡಿಸಿಕೊಂಡಿ ರುವುದೇ ನಿಜವಾಗಿದ್ದರೆ ಶಿವಕುಮಾರ್ ದೇವಸ್ಥಾನಕ್ಕೆ ಹೋಗಬಾರದು. ರಾಜಕೀಯಕ್ಕಾಗಿ,

» ನಾಲ್ಕನೇ ಪುಟದಲ್ಲಿ

# ಕಳಪೆ ಕಾಮಗಾರಿ: ಕುಸಿದು ಬಿದ್ದ ಶೆಡ್

• ಪ್ರಜೋದಯ ವರದಿ

**ಹಾಸನ:** ಕಳಪೆ ಕಾಮಗಾರಿಯಿಂದ ಮಹಾನಗರ ಪಾಲಿಕೆಯಿಂದ ಕೋಟ್ಯಾಂತರ ರೂ. ವೆಚ್ಚದಲ್ಲಿ ನಿರ್ಮಿಸುತ್ತಿದ್ದ ತ್ಯಾಜ್ಯ ವಿಲೇವಾರಿ ಘಟಕದ ಶೆಡ್ ಏಕಾಏಕಿ ಕುಸಿದುಬಿದ್ದು ಅದೃಷ್ಟ ವಶಾತ್ ಕಾರ್ಮಿಕರು ಪ್ರಾಣಾಪಾಯದಿಂದ ಪಾರಾಗಿರುವ ಘಟನೆ ತಾಲ್ಲೂಕಿನ ಅಗಿಲೆ ಗ್ರಾಮದ ಬಳಿ ನಡೆದಿದೆ.

ಪಾಲಿಕೆಯ ತ್ಯಾಜ್ಯ ವಿಲೇವಾರಿ ಘಟಕದ ಶೆಡ್ ನಿರ್ಮಾಣ ಕಾಮಗಾರಿಯಲ್ಲಿ ಗುಣಮಟ್ಟದ ಪಿಲ್ಲರ್ ಹಾಕದೆ ಇರುವುದರಿಂದ ಶೆಡ್ ಕುಸಿದು ಬಿದ್ದು ಕಳಪೆ ಕಾಮಗಾರಿಯ ಬಣ್ಣ ಬಯಲಾಗಿದೆ. ಕಾರ್ಮಿಕರು ಕೆಲಸ ಮಾಡುತ್ತಿದ್ದ ವೇಳೆಯೇ ಬೃಹತ್ ಶೆಡ್ ದಿಢೀರ್ ಕುಸಿದುಬಿದ್ದಿದೆ. ಅದೃಷ್ಟವಶಾತ್ ಕಾರ್ಮಿಕರು ಅಪಾಯ ದಿಂದ ಪಾರಾಗಿದ್ದಾರೆ. ಒಂದು ವೇಳೆ ಕಾರ್ಮಿಕರ ಮೇಲೆ ಬಿದ್ದಿದ್ದರೆ ಅನಾಹುತವೇ ಸೃಷ್ಟಿಯಾಗುತ್ತಿತ್ತು.

ಮಹಾನಗರ ಪಾಲಿಕೆಯಿಂದ ಕೋಟ್ಯಾಂತರ ರೂ. ವೆಚ್ಚ ಮಾಡಿ ಮರು ಬಳಕೆಯ ಕಸ ವಿಂಗಡಣೆಗಾಗಿ ಶೆಡ್ ನಿರ್ಮಾಣ ಕಾಮಗಾರಿ ನಡೆಯುತ್ತಿದೆ. ಅದಕ್ಕಾಗಿ ಸಿಮೆಂಟ್ ಪಿಲ್ಲರ್ ಮೇಲೆ ಬೃಹತ್ ಕಬ್ಬಿಣದ ಕಂಬ ಅಳವಡಿಸಲಾಗಿತ್ತು. ಗುಣಮಟ್ಟದ ಪಿಲ್ಲರ್ ನಿರ್ಮಾಣ ಮಾಡದೆ ಇರುವುದರಿಂದ ಶೆಡ್ ಒತ್ತಡ ತಡೆದುಕೊಳ್ಳಲಾಗದೆ ಇದ್ದಕ್ಕಿದ್ದಂತೆ ಕಂಬ ಬಿದ್ದು, ಶೆಡ್ ನೆಲಕ್ಕುರುಳಿದೆ. ಕಳಪೆ ಕಾಮಗಾರಿಯಿಂದ ಶೆಡ್ ಕುಸಿದು ಬಿದ್ದಿದೆ ಎಂದು ಸಾರ್ವಜನಿಕರು ಆರೋಪಿಸಿದ್ದಾರೆ.



# ಪೋಕ್ಸೋ: 14 ಪ್ರಕರಣದಲ್ಲಿ ಅಪರಾಧಿಗಳಿಗೆ ಶಿಕ್ಷೆ

• ಪ್ರಜೋದಯ ವರದಿ



**ಹಾಸನ:** ಜಿಲ್ಲೆಯಲ್ಲಿ ಕಳೆದ 3 ವರ್ಷದಲ್ಲಿ ಅಪ್ರಾಪ್ತ ಮಕ್ಕಳ ಮೇಲೆ ನಡೆದ ಲೈಂಗಿಕ ದೌರ್ಜನ್ಯ, ಅತ್ಯಾಚಾರಕ್ಕೆ ಸಂಬಂಧಿಸಿದಂತೆ 14 ಪ್ರಕರಣಗಳಲ್ಲಿ ವಿಶೇಷ ನ್ಯಾಯಾಲಯವು ಅಪರಾಧಿಗಳಿಗೆ ಜೈಲು ಶಿಕ್ಷೆ ಮತ್ತು ದಂಡ ವಿಧಿಸಿದೆ ಎಂದು ಪೋಕ್ಸೋ ನ್ಯಾಯಾಲಯದ ವಿಶೇಷ ಅಭಿಯೋಜಕ ಶ್ರೀನಿವಾಸಗೌಡ ಅವರು ತಿಳಿಸಿದರು.

ಮಂಗಳವಾರ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಜಿಲ್ಲಾ ಪೋಕ್ಸೋ ವಿಶೇಷ ನ್ಯಾಯಾಲಯದಲ್ಲಿ 2022 ಜೂನ್ 22 ರಿಂದ 2025 ಆಗಸ್ಟ್‌ವರೆಗೂ ಒಟ್ಟು 14 ಪ್ರಕರಣಗಳಲ್ಲಿ ಅಪರಾಧಿಗಳಿಗೆ ಶಿಕ್ಷೆಯಾಗಿದೆ. ಅಪ್ರಾಪ್ತ ಬಾಲಕಿಯರ ಮೇಲೆ ಅತ್ಯಾಚಾರ, ಲೈಂಗಿಕ ದೌರ್ಜನ್ಯ ಎಸಗಿದ ಅಪರಾಧಿಗಳಿಗೆ ವಿಶೇಷ ನ್ಯಾಯಾಲಯದಲ್ಲಿ ಪೋಕ್ಸೋ ಕಾಯ್ದೆಯಡಿ ಶಿಕ್ಷೆ ಕಟ್ಟಿಟ್ಟ ಬುತ್ತಿ ಎಂದು ಹೇಳಿದರು.

ಅತ್ಯಾಚಾರ, ಲೈಂಗಿಕ ದೌರ್ಜನ್ಯ ಪ್ರಕರಣಗಳ ಜೊತೆಗೆ ಬಾಲ್ಯ ವಿವಾಹ ಕೂಡ ನಡೆಯುತ್ತಿದೆ. ಈಗಾಗಲೇ ವಿಶೇಷ

» ನಾಲ್ಕನೇ ಪುಟದಲ್ಲಿ

> **ಮಕ್ಕಳ ಸ್ನೇಹಿ ನ್ಯಾಯಾಲಯ**
>
> **ಮಕ್ಕಳಿಗೆ ನ್ಯಾಯಾಲಯದ ವಾತಾವರಣದಲ್ಲಿ ಭಯ ಕಡಿಮೆ ಮಾಡುವ ಉದ್ದೇಶದಿಂದ ಮಕ್ಕಳ ಸ್ನೇಹಿ ನ್ಯಾಯಾಲಯ ಎಂಬ ಹೆಸರಿನಲ್ಲಿ ವಿಶೇಷ ಸೌಲಭ್ಯಗಳನ್ನು ಕಲ್ಪಿಸಲಾಗಿದೆ. ಪೋಕ್ಸೋ ಸಂತ್ರಸ್ತರಿಗೆ ವಿಶ್ರಾಂತಿ ಕೊಠಡಿ, ಮಕ್ಕಳಿಗಾಗಿ ಆಟಿಕೆಗಳಿರುವ ಪ್ರತ್ಯೇಕ ಕೊಠಡಿ ನಿರ್ಮಿಸಲಾಗಿದೆ. ಜಿಲ್ಲೆಯಲ್ಲಿ ವಿಶೇಷ ಪೋಕ್ಸೋ ನ್ಯಾಯಾಲಯವು ಕಳೆದ 3 ವರ್ಷಗಳಲ್ಲಿ ಮಕ್ಕಳ ಮೇಲಿನ ದೌರ್ಜನ್ಯ ಪ್ರಕರಣಗಳಲ್ಲಿ ಕಾನೂನು ಪ್ರಕಾರ ಗಂಭೀರ ಶಿಕ್ಷೆ ವಿಧಿಸುವ ಮೂಲಕ ಸಮಾಜಕ್ಕೆ ಎಚ್ಚರಿಕೆಯ ಸಂದೇಶ ನೀಡುತ್ತಿದೆಂದು ಹೇಳಿದರು.**

## 9 ತಿಂಗಳ ಆಡಳಿತ ಮೊಟಕು, ಕೋವಿಡ್‌ನಿಂದ ಕೆಲಸಗಳಾಗಿಲ್ಲ | ಪಾಲಿಕೆ ಸದಸ್ಯರಿಂದ ಶೀಘ್ರ ನ್ಯಾಯಾಲಯಕ್ಕೆ ಅರ್ಜಿ

# ಅವಧಿ ವಿಸ್ತರಣೆಗಾಗಿ ಕೋರ್ಟ್ ಮೆಟ್ಟಿಲೇರಲು ಸದಸ್ಯರ ನಿರ್ಧಾರ

• ಪ್ರಜೋದಯ ವರದಿ

**ಹಾಸನ:** ಹಾಲಿ ಮಹಾನಗರ ಪಾಲಿಕೆ ಚುನಾಯಿತ ಪ್ರತಿನಿಧಿಗಳ ಅಧಿಕಾರಾವಧಿ 2025ರ ಅಕ್ಟೋಬರ್ ವೇಳೆಗೆ ಮುಕ್ತಾಯ ವಾಗಲಿದ್ದು ಮುಂದಿನ ಒಂಬತ್ತು ತಿಂಗಳು ಅವಧಿ ವಿಸ್ತರಿಸುವಂತೆ ಸದಸ್ಯರು ನ್ಯಾಯಾ ಲಯ ಮೆಟ್ಟಿಲೇರಲು ನಿರ್ಧರಿಸಿದ್ದಾರೆ.

ಜೆಡಿಎಸ್, ಕಾಂಗ್ರೆಸ್ ಹಾಗು ಬಿಜೆಪಿ ಸದಸ್ಯರು ಈ ಬಗ್ಗೆ ಚರ್ಚಿಸಿದ್ದು ಇನ್ನೆರಡು ದಿನಗಳಲ್ಲಿ ನ್ಯಾಯಾಲಯಕ್ಕೆ ಅರ್ಜಿ ಸಲ್ಲಿಸಲಿದ್ದಾರೆ. ಹಾಸನ ಮಾತ್ರವಲ್ಲದೆ ಇತರೆ ಜಿಲ್ಲೆಯ ನಗರಸಭೆ, ಮಹಾನಗರ ಪಾಲಿಕೆಗಳು ಇದೇ ಹೆಜ್ಜೆ ಇರಿಸಿವೆ ಎನ್ನಲಾಗಿದೆ.

**ಐದು ವರ್ಷ ಆಡಳಿತ ನಡೆಸಿಲ್ಲ**

2021ರ ಏಪ್ರಿಲ್‌ನಿಂದ 2025ಕ್ಕೆ ಐದು ವರ್ಷ ಪೂರ್ಣಗೊಂಡಿದ್ದು 2026ರ ವೇಳೆಗೆ ಚುನಾವಣೆ ನಡೆದು ಹೊಸ ಆಡಳಿತ ಜಾರಿಗೆ ಬರುವುದು ನಿಯಮ. ಆ ನಿಟ್ಟಿನಲ್ಲಿ ಸದಸ್ಯರು ಮಾನಸಿಕವಾಗಿ ಸಿದ್ಧತೆ ನಡೆಸಿದ್ದರಾದರೂ ಯಾದಗಿರಿ ನಗರಸಭೆಯು ಕಲಬುರಗಿ ಸಂಚಾರಿ ಪೀಠಕ್ಕೆ ಅರ್ಜಿ ಸಲ್ಲಿಸಿ ಹಾಲಿ ಜನಪ್ರತಿ ನಿಧಿಗಳೇ ಮತ್ತೆ 18 ತಿಂಗಳು ಅಧಿಕಾರ ಮುಂದುವರಿಸುವ ಅವಕಾಶ ಪಡೆದಿದ್ದರಿಂದ ಅದೇ ದಾರಿಯಲ್ಲಿ ಇಲ್ಲಿನ ಸದಸ್ಯರು ಸಹ ಮುಂದಡಿ ಇಟ್ಟಿದ್ದಾರೆ. 2021ರಲ್ಲಿ ನಡೆದ ಚುನಾವಣೆಯಲ್ಲಿ ಜೆಡಿಎಸ್ 17, ಬಿಜೆಪಿ 13, ಕಾಂಗ್ರೆಸ್‌ನ ಇಬ್ಬರು ಹಾಗು ಮೂವರು ಪಕ್ಷೇತರರು ಜಯ ಗಳಿಸಿದ್ದರು. ಸಂಖ್ಯಾಬಲ ಹೊಂದಿದ್ದರೂ ಮೀಸಲಾತಿ ಕೈಕೊಟ್ಟಿದ್ದರಿಂದ ಜೆಡಿಎಸ್ ಲೆಕ್ಕಾಚಾರ ತಲೆಕೆಳಗಾಗಿ ಬಿಜೆಪಿಯ ಆರ್.ಮೋಹನ್ ಅಧ್ಯಕ್ಷರಾಗಿ 2021ರ ಏಪ್ರಿಲ್ 23 ರಂದು ಅಧಿಕಾರ ಸ್ವೀಕರಿಸಿದ್ದರು. 30 ತಿಂಗಳ ಬಳಿಕ ಮೀಸಲಾತಿ ಬದಲಾವಣೆಯಾಗಿ ಬೇರೊಬ್ಬ ಅಧ್ಯಕ್ಷರ ನೇಮಕ ಮಾಡ ಬೇಕಿತ್ತಾದರೂ ಬಿಜೆಪಿ ಸರ್ಕಾರದಲ್ಲಿ ಮುಖ್ಯ ಮಂತ್ರಿ ಬದಲಾವಣೆ ಪ್ರಹಸನ, ಕೋವಿಡ್ ಪರಿಣಾಮದಿಂದ ಮೀಸಲಾತಿ ಘೋಷಣೆಯಾಗಲಿಲ್ಲ. ಹೀಗಾಗಿ 9 ತಿಂಗಳು ಕಾಲ ಜಿಲ್ಲಾಧಿ ಕಾರಿಯಾಗಿದ್ದ ಸಿ.ಸತ್ಯಭಾಮ ಅವರೇ ನಗರಸಭೆ ಆಡಳಿತಾಧಿಕಾರಿಯಾಗಿ ಕಾರ್ಯ ನಿರ್ವಹಿಸಿದ್ದರು. ಮೀಸಲಾತಿ ಘೋಷಣೆ ಯಾಗದೆ ಆಡಳಿತ ನಡೆಸಲು ತಮಗೆ ಸಾಧ್ಯವಾಗದೆ ಇರುವುದರಿಂದ ಒಂಬತ್ತು ತಿಂಗಳ ಅವಧಿ ವಿಸ್ತರಿಸಬೇಕೆಂದು ಸದಸ್ಯರು ಮನವಿ ಇಟ್ಟಿದ್ದಾರೆ.




> **30 ತಿಂಗಳ ಬಳಿಕ ಹೊಸ ಅಧ್ಯಕ್ಷರ ನೇಮಕಕ್ಕೆ ಮೀಸಲಾತಿ ಪ್ರಕಟಿಸಬೇಕಿತ್ತಾದರೂ ಅದು ಸಾಧ್ಯವಾಗಲಿಲ್ಲ. ಜಿಲ್ಲಾಧಿಕಾರಿಯೇ ನಗರಸಭೆ ಆಡಳಿತಾಧಿಕಾರಿಯಾದ್ದರಿಂದ ಪ್ರತಿನಿಧಿಗಳು ಇದ್ದೂ ಇಲ್ಲದಂತಿರಬೇಕಿತ್ತು. ಹೀಗಾಗಿ ಅವಧಿ ಮುಂದುವರೆಸುವಂತೆ ನ್ಯಾಯಾಲಯ ಮೆಟ್ಟಿಲೇರಲು ನಿರ್ಧರಿಸಿದ್ದೇವೆ.**
>
> **-ಕ್ರಾಂತಿ ಪ್ರಸಾದ್ ತ್ಯಾಗಿ, ಜೆಡಿಎಸ್ ಸದಸ್ಯ**

**ಕೋವಿಡ್‌ನಿಂದ ಕೆಲಸಗಳಾಗಿಲ್ಲ**

ಒಂಬತ್ತು ತಿಂಗಳು ಆಡಳಿತಾಧಿಕಾರಿ ನೇಮಕ ಮಾತ್ರವಲ್ಲದೆ ಎರಡು ವರ್ಷ ಮಹಾಮಾರಿ ಕೋವಿಡ್ ಕಾರಣದಿಂದ ಅಭಿವೃದ್ಧಿ ಕೆಲಸ ಸಾಧ್ಯವಾಗಲಿಲ್ಲ. ದೇಶಾದ್ಯಂತ ಲಾಕ್‌ಡೌನ್ ಘೋಷಿಸಿದ್ದರಿಂದ ಹಲವು ತಿಂಗಳು ಯಾವ ಚಟುವಟಿಕೆಯೂ ನಡೆಯಲಿಲ್ಲ. ಕಚೇರಿಗಳು ಬಂದ್ ಆಗಿದ್ದರಿಂದ ಜನಪ್ರತಿನಿಧಿಗಳು ನಿರುದ್ಯೋಗಿಗಳಾಗಿದ್ದರು. ಅದನ್ನು ನ್ಯಾಯಾಲಯದ ಗಮನಕ್ಕೆ ತರಲು ನಿರ್ಧರಿಸಿದ್ದಾರೆ.

**ಚುನಾವಣೆ ಯಾರಿಗೂ ಇಷ್ಟವಿಲ್ಲ**

ಮಹಾನಗರ ಪಾಲಿಕೆ ಚುನಾವಣೆ ಈಗಲೇ ನಡೆಯುವ ಬದಲು ಮುಂದೂಡಿದರೆ ಅನುಕೂಲ ಎಂಬುದು ಜನಪ್ರತಿನಿಧಿಗಳ ಅಭಿಪ್ರಾಯವಾಗಿದೆ. ನಗರಸಭೆಯಾಗಿದ್ದ ಹಾಸನ ಇತ್ತೀಚೆಗಷ್ಟೇ ಮಹಾನಗರ ಪಾಲಿಕೆಯಾಗಿ ಮೇಲ್ದರ್ಜೆಗೇರಿದೆ. ಆದರೆ ಸರ್ಕಾರದಿಂದ ನಿರೀಕ್ಷಿತ ಅನುದಾನ ಬಿಡುಗಡೆಯಾಗಿಲ್ಲ. ನೂತನವಾಗಿ ಘೋಷಣೆಯಾದ ಪಾಲಿಕೆಗೆ 200 ಕೋಟಿ ರೂ. ಅನುದಾನ ನೀಡುವುದಾಗಿ ಸರ್ಕಾರ ಬಜೆಟ್‌ನಲ್ಲಿ ಹೇಳಿತ್ತಾದರೂ ನಂತರ ಹಣ ನೀಡುವುದಿಲ್ಲ ವೆಂದು ಸ್ಪಷ್ಟಪಡಿಸಿದೆ. 2023ರಲ್ಲಿ ಕಾಂಗ್ರೆಸ್ ಸರ್ಕಾರ ಅಧಿಕಾರಕ್ಕೆ ಬಂದ ಬಳಿಕ ಗ್ಯಾರಂಟಿ ಯೋಜನೆಗಳಿಂದ ಹೆಚ್ಚುವರಿ ಅನುದಾನ ಲಭ್ಯವಾಗಿಲ್ಲ. ಸ್ಥಳೀಯ ಸಂಪನ್ಮೂಲ ನೆಚ್ಚಿಕೊಂಡು ಕಾಮಗಾರಿ ಕೈಗೊಳ್ಳಲಾಗುತ್ತಿದ್ದು ವಾರ್ಡ್‌ಗಳಲ್ಲಿ ನಿರೀಕ್ಷಿತ ಮಟ್ಟದಲ್ಲಿ ಕೆಲಸ ನಡೆದಿಲ್ಲ. ಹೀಗಾಗಿ ತಕ್ಷಣ ಚುನಾವಣೆ ಘೋಷಿಸಿದರೆ ಅನುಕೂಲಕ್ಕಿಂತ ಅನಾನುಕೂಲವೇ ಹೆಚ್ಚು ಎಂಬ ಭಾವನೆ ಯಿದೆ. 2026ರ ಏಪ್ರಿಲ್ ವರೆಗೆ ಇದೇ ಆಡ ಳಿತ ಮುಂದುವರೆಸಬೇಕೆಂಬ ಇರಾದೆ ಕೆಲವ ರದ್ದಾಗಿದೆ.

C M Y K

# ದಸರಾ ಚಾಲನೆಗೆ ಎಡ-ಬಲ ಗೊಂದಲ

ದಸರಾ ಮಹೋತ್ಸವ ಉದ್ಘಾಟಕರ ಬಗ್ಗೆ ಆಳುವ ಸರಕಾರ ಸ್ಪಷ್ಟ ಮಾತುಗಳಲ್ಲಿ ತನ್ನ ನಿಲುವು ಪ್ರಕಟಿಸಿದರೂ, ಸದರಿ ವಿಚಾರ ವಿಪಕ್ಷಗಳು ಹಾಗೂ ಹಿಂದೂ ಪರ ಸಂಘಟನೆಗಳ ಪಾಲಿಗೆ ಈವರೆಗೆ ಗೊಂದಲದ ಗೂಡಾಗಿಯೇ ಕಾಡತೊಡಗಿದೆ. ಈ ಹಿಂದಿನ ಯಾವ ದಸರಾ ವೇಳೆಯೂ ಕಂಡು ಬಾರದ ಈ ಮಟ್ಟಿನ ವಿರೋಧಾಭಾಸ ಈ ವರ್ಷದ ದಸರೆಗೆ ಕಂಡುಬರುತ್ತಿರುವುದು ಸಾಂಸ್ಕೃತಿಕ ನಗರಿ ಮೈಸೂರಿನಲ್ಲಿ ಒಂದು ಬಗೆಯ ಕಸಿವಿಸಿ ಸೃಷ್ಟಿಸಿದೆ.

ಒಂದೆಡೆ ಆಳುವ ಸರಕಾರದ ಪರ ಎಡವರ್ಗದವರಿದ್ದರೆ, ವಿಪಕ್ಷ ಹಾಗೂ ಹಿಂದೂ ಸಂಘಟನೆಗಳ ಪರ ಬಲವರ್ಗದ ಮಂದಿ ನಿಂತಿರುವುದು ಸ್ಪಷ್ಟವಾಗಿ ಗೋಚರಿಸುತ್ತಿದೆ. ದಸರಾ ಉದ್ಘಾಟಕರಾಗಿ ಆಯ್ಕೆಯಾಗಿರುವ ಅಂತಾರಾಷ್ಟ್ರೀಯ ಬುಕರ್ ಪ್ರಶಸ್ತಿ ಪುರಸ್ಕೃತ ಲೇಖಕಿ ಬಾನು ಮುಷ್ತಾಕ್ ಅವರ ಬಗ್ಗೆ ಒಬ್ಬೊಬ್ಬರದ್ದೂ ಒಂದೊಂದು ಬಗೆಯ ವ್ಯಾಖ್ಯಾನ, ಅಭಿಪ್ರಾಯ ಕೇಳಿಬರುತ್ತಿವೆ.

ಕೆಲವರು ಹೇಳಿಕೆಗಳನ್ನು ನೀಡಿರುವ ಭರದಲ್ಲಿ ನೈತಿಕತೆ ಮರೆತಿರುವುದು ಕೂಡ ಸ್ಪಷ್ಟವಾಗಿ ಕಾಣುತ್ತಿದೆ. ಅವರವರ ಆಹಾರ ಪದ್ಧತಿ ಅವರವರಿಗೆ ಬಿಟ್ಟದ್ದು ಎಂಬ ಕನಿಷ್ಠ ವಿವೇಚನೆಯೂ ಇಲ್ಲದಂತೆ ನೀಡುತ್ತಿರುವ ಹೇಳಿಕೆಗಳು ಸಾಮಾಜಿಕ ಶಾಂತಿಯನ್ನು ಕದಡಿರುವುದಂತೂ ನಿಜ.

ದಸರಾ ಉದ್ಘಾಟಕರ ವಿಚಾರದಲ್ಲಿ ನನ್ನ ಅಭಿಪ್ರಾಯ ಏನೂ ಇಲ್ಲ. ಕರೆದವರು, ಕರೆಸಿಕೊಂಡವರಿಗಷ್ಟೇ ಅದು ಗೊತ್ತು. ಸರಕಾರದ ದಸರಾ ನಮ್ಮ ಪರಂಪರೆಯ ಭಾಗವಲ್ಲ. ನಮ್ಮ ದಸರಾ ಖಾಸಗಿಯಾಗಿಯೇ ನಡೆಯುತ್ತದೆ. ಅವರಿಗೆ ಬೇಕಾದ ರೀತಿ ದಸರೆ ಮಾಡುತ್ತಾರೆ. ಅದಕ್ಕೂ ನಮಗೂ ಸಂಬಂಧ ಇಲ್ಲ.

– **ಪ್ರಮೋದಾದೇವಿ ಒಡೆಯರ್,** ರಾಜವಂಶಸ್ಥೆ

ಬಾನು ಮುಷ್ತಾಕ್ ಅವರು ಕನ್ನಡವನ್ನು ಅಂತಾರಾಷ್ಟ್ರೀಯ ಮಟ್ಟಕ್ಕೆ ಕೊಂಡೊಯ್ದಿದ್ದಾರೆ. ಇಂಗ್ಲಿಷ್‌ಗೆ ಭಾಷಾಂತರ ಮಾಡಿದ ದೀಪಾ ಬಾಸ್ತಿಯವರಿಗೂ ಪ್ರಶಸ್ತಿ ನೀಡಲಾಗಿದೆ. ಬಾನು ಮುಷ್ತಾಕ್ ರೈತ ಚಳವಳಿ, ಭಾಷಾ ಚಳವಳಿ, ವಕೀಲ ವೃತ್ತಿ, ಹೀಗೆ ಹೋರಾಟದ ಹಿನೆಲೆಯಿಂದ ಬಂದವರು. ಆದರೆ, ಕೆಲವರು ವಿರೋಧ ವ್ಯಕ್ತಪಡಿಸಿದ್ದಾರೆ. ನಮ್ಮದು ಬಹುತ್ವದ ದೇಶ. ಮಂತ್ರಿಗಳಾಗಿದ್ದವರೂ ಒಬ್ಬ ಮಹಿಳಾ ಸಾಧಕಿ ವಿರುದ್ಧ ಮಾತನಾಡಿರುವುದು ಸರಿಯಲ್ಲ.

– **ಎಚ್. ವಿಶ್ವನಾಥ್,** ವಿಧಾನ ಪರಿಷತ್ ಸದಸ್ಯ

ಮುಸ್ಲಿಮರನ್ನು ಕರೆಯಬಾರದು ಅಂತ ಸಂವಿಧಾನದಲ್ಲಿ ಹೇಳಿಲ್ಲ. ಇವರು ರಾಮ ಮಂದಿರ ಉದ್ಘಾಟನೆ ವೇಳೆ ಪ್ರೊಟೋಕಾಲ್ ಉಲ್ಲಂಘನೆ ಆಗಿಲ್ವಾ?. ವೈದಿಕ ವ್ಯವಸ್ಥೆ ಬಿಟ್ಟು ನಾವೇ ಮಾಡಲಿಕ್ಕೆ ಸಾಧ್ಯನಾ? ನಾನು ಕೂಡ ಒಬ್ಬ ಹಿಂದೂ. ಯಾವುದೇ ಪೂಜೆ ನಡೆದರೆ ಯಾರು ಮಾಡುತ್ತಾರೆ ಹೇಳಿ.

– **ಸಂತೋಷ್ ಲಾಡ್,** ಸಚಿವ





ಒಂದೆಡೆ ಆಳುವ ಸರಕಾರದ ಪರ ಎಡವರ್ಗದವರಿದ್ದರೆ, ವಿಪಕ್ಷ ಹಾಗೂ ಹಿಂದೂ ಸಂಘಟನೆಗಳ ಪರ ಬಲವರ್ಗದ ಮಂದಿ ನಿಂತಿರುವುದು ಸ್ಪಷ್ಟವಾಗಿ ಗೋಚರಿಸುತ್ತಿದೆ. ದಸರಾ ಉದ್ಘಾಟಕರಾಗಿ ಆಯ್ಕೆಯಾಗಿರುವ ಅಂತಾರಾಷ್ಟ್ರೀಯ ಬುಕರ್ ಪ್ರಶಸ್ತಿ ಪುರಸ್ಕೃತ ಲೇಖಕಿ ಬಾನು ಮುಷ್ತಾಕ್ ಅವರ ಬಗ್ಗೆ ಒಬ್ಬೊಬ್ಬರದ್ದೂ ಒಂದೊಂದು ಬಗೆಯ ವ್ಯಾಖ್ಯಾನ, ಅಭಿಪ್ರಾಯ ಕೇಳಿಬರುತ್ತಿವೆ.

## ಸಿಎಂ ಸಮರ್ಥನೆ:

- ಇದರ ನಡುವೆ ತನ್ನ ಆಯ್ಕೆಯೇ ಅಂತಿಮ ಎಂಬ ನಿಲುವಿಗೆ ಅಂಟಿಕೊಂಡಿರುವ ಸಿಎಂ ಸಿದ್ದರಾಮಯ್ಯ ಭಾನುವಾರ ಮೈಸೂರಿನಲ್ಲಿ ತಾವೇ ಖುದ್ದು ಟೀಕಾಕಾರರ ವಿರುದ್ಧ ಹರಿಹಾಯ್ದರು. ಈ ಮೂಲಕ ತಮ್ಮ ಆಯ್ಕೆಯನ್ನು ಬಲವಾಗಿ ಸಮರ್ಥಿಸಿಕೊಂಡರು. ಅಂತೆಯೇ ದಸರಾ ಉದ್ಘಾಟಕರ ಆಯ್ಕೆ ಕುರಿತಂತೆ ವಾರವಿಡೀ ಮೈಸೂರಿನಲ್ಲಿ ನಡೆದ ವಿದ್ಯಮಾನಗಳು ರಾಜ್ಯದ ಗಮನ ಸೆಳೆದಿರುವುದು ಸುಳ್ಳಲ್ಲ. ಈ ವೇಳೆ ಯಾರ್ಯಾರು ಯಾವ್ಯಾವ ಬಗೆಯ ಹೇಳಿಕೆ ನೀಡಿದ್ದಾರೆ ಎಂಬ ಬಗ್ಗೆ ಒಂದು ಪುಟ್ಟ ಅವಲೋಕನ ಹೀಗಿದೆ.
- ಧರ್ಮಾಂಧರು ಮಾತ್ರ ಬಾನು ಮುಷ್ತಾಕ್ ಹೆಸರನ್ನು ವಿರೋಧಿಸುತ್ತಾರೆ. ಕನ್ನಡಾಂಬೆಯ ಬಗ್ಗೆ ಬಾನು ಮುಷ್ತಾಕ್ ನೀಡಿರುವ ಹಳೆಯ ಹೇಳಿಕೆಗೂ ಇದಕ್ಕೂ ಏನು ಸಂಬಂಧ. ಎಂದೋ ಏನೋ ಹೇಳಿದ್ದಾರೆ ಎಂದು ಅದನ್ನು ಇಲ್ಲಿಗೆ ಲಿಂಕ್ ಮಾಡುವುದು ಎಷ್ಟು ಸರಿ. ಬೆರಳೆಣಿಕೆ ಮಂದಿಗೆ ಮಾತ್ರ ಬುಕರ್ ಪ್ರಶಸ್ತಿ ಬಂದಿದೆ. ನಾನೇ ಅವರ ಹೆಸರನ್ನು ಆಯ್ಕೆ ಮಾಡಿದ್ದೇನೆ. ಉದ್ಘಾಟಕರು ದನ ತಿನ್ನುವುದನ್ನು ಬಿಜೆಪಿಯವರು ನೋಡಿದ್ದಾರಾ? ದಸರಾ ಸಾಂಸ್ಕೃತಿಕ ಹಬ್ಬ, ಇದು ಧರ್ಮಾತೀತ ವಾದ ಹಬ್ಬ, ನಿಸಾರ್ ಅಹಮದ್ ಕೂಡ ದಸರಾ ಉದ್ಘಾಟನೆ ಮಾಡಿದ್ದಾರೆ.

– **ಸಿದ್ದರಾಮಯ್ಯ,** ಮುಖ್ಯಮಂತ್ರಿ

ಬುಕರ್ ಪ್ರಶಸ್ತಿ ಪಡೆದಿರುವ ದೀಪಾ ಬಸ್ತಿಯವರನ್ನು ಕೂಡ ಬಾನು ಮುಷ್ತಾಕ್ ಜೊತೆಗೆ ದಸರಾ ಉದ್ಘಾಟನೆಗೆ ಆಹ್ವಾನಿಸಬೇಕಿತ್ತು. ಕೇವಲ ಓಟ್ ಬ್ಯಾಂಕ್ ಪಾಲಿಟಿಕ್ಸ್‌ಗಾಗಿ ಬಾನು ಮುಷ್ತಾಕ್‌ರನ್ನು ಮಾತ್ರ ಆಹ್ವಾನಿಸಿದ್ದಾರೆ. ಬಾನು ಮುಷ್ತಾಕ್ ಜೊತೆಗೆ ದೀಪಾ ಬಸ್ತಿಯವರನ್ನು ಸಹ ಆಹ್ವಾನಿಸಬೇಕಿತ್ತು. ಇಬ್ಬರೂ ಒಟ್ಟಿಗೆ ಸೇರಿ ಉದ್ಘಾಟನೆ ಮಾಡಿದ್ದರೆ ಹೆಚ್ಚು ಅರ್ಥಪೂರ್ಣವಾಗುತ್ತಿತ್ತು. ಬಾನು ಮುಷ್ತಾಕ್ ಒಬ್ಬರೇ ದಸರಾ ಉದ್ಘಾಟನೆಗೆ ನಮ್ಮ ಪ್ರಬಲ ವಿರೋಧ ಇದ್ದೇ ಇದೆ.

– **ಮಹೇಶ್ ಕಾಮತ್,** ವಿಶ್ವ ಹಿಂದೂ ಪರಿಷದ್, ಜಿಲ್ಲಾಧ್ಯಕ್ಷ

ಸಿದ್ದರಾಮಯ್ಯ ತಂತ್ರ ಕಾಂಗ್ರೆಸ್ ಮೂರ್ಖರಿಗೆ ಅರ್ಥವಾಗುತ್ತಿಲ್ಲ. ಮುಸ್ಲಿಮರನ್ನು ತಮ್ಮ ಬೆನ್ನ ಹಿಂದೆ ಇಟ್ಟುಕೊಳ್ಳಲು ಬಾನು ಮುಷ್ತಾಕ್ ಅವರನ್ನು ದಸರಾ ಉದ್ಘಾಟನೆಗೆ ಕರೆದಿದ್ದಾರೆ. ನಾಳೆ ಸಿಎಂ ಕುರ್ಚಿಗೆ ಕಂಟಕ ಬಂದಾಗ ಮುಸ್ಲಿಂ ಶಕ್ತಿ ತಮ್ಮ ಹಿಂದೆ ನಿಲ್ಲಿಸಿಕೊಳ್ಳಲು ಹೆಣೆದಿರುವ ತಂತ್ರ ಇದು. ಕನ್ನಡದ ಬಗ್ಗೆ ಅವಮಾನಕರವಾಗಿ ಮಾತನಾಡಿದವರು ದಸರಾ ಉದ್ಘಾಟಿಸಬೇಕಾ? ಇದನ್ನು ಜನರೇ ಹೇಳಲಿ.

– **ಪ್ರತಾಪ್ ಸಿಂಹ,** ಮಾಜಿ ಸಂಸದ

– **ಕೆ.ಜೆ.ಲೋಕೇಶ್ ಬಾಬು,** ಮೈಸೂರು

# ಮೂಲಂಗಿ ಸೇವನೆಯ ಲಾಭಗಳು

ಮೂಲಂಗಿಯನ್ನು ಆಹಾರದಲ್ಲಿ ಬಳಸಿಕೊಳ್ಳಲು ಬಹುತೇಕ ಮಂದಿ ಇಷ್ಟಪಡುವುದಿಲ್ಲ. ಅದಕ್ಕೆ ಕಾರಣ ಅದರಿಂದ ಹೊರ ಹೊಮ್ಮುವ ವಾಸನೆ. ಮೂಲಂಗಿಗೆ ಒಂದು ರೀತಿಯ ವಾಸನೆ ಇದೆ. ಇದು ಬಹುತೇಕರಿಗೆ ಒಗ್ಗುವುದಿಲ್ಲ. ಆದರೆ ದೈನಂದಿನ ಆಹಾರದಲ್ಲಿ ಮೂಲಂಗಿಯನ್ನು ಬಳಸಿಕೊಳ್ಳುವುದರಿಂದ ಉತ್ತಮ ಆರೋಗ್ಯವನ್ನು ಕಾಪಾಡಿಕೊಳ್ಳಲು ಸಾಧ್ಯವಾಗುತ್ತದೆ. ಪ್ರಕೃತಿ ನಮಗೆ ನೀಡಿರುವ ಪ್ರಮುಖ ಆಹಾರ ಪದಾರ್ಥಗಳಲ್ಲಿ ಮೂಲಂಗಿಯೂ ಒಂದು. ಪ್ರತಿಯೊಂದು ತರಕಾರಿ ಕೂಡ ವಿಶಿಷ್ಟ ಪ್ರಯೋಜನಗಳನ್ನು ಹೊಂದಿದೆ. ಒಟ್ಟಾರೆ ಆರೋಗ್ಯಕ್ಕೆ ಅತ್ಯುತ್ತಮ ಕೊಡುಗೆ ನೀಡುತ್ತದೆ. ಮೂಲಂಗಿಯು ಬೇರು ಹೊಂದಿರುವ ತರಕಾರಿಯಾಗಿದೆ. ಕಡಿಮೆ ಕ್ಯಾಲೋರಿ ಹೊಂದಿರುವ ತರಕಾರಿಯಾಗಿದೆ. ಈ ತರಕಾರಿ ಜೀರ್ಣಕ್ರಿಯೆ, ರೋಗನಿರೋಧಕ ಶಕ್ತಿ ವೃದ್ಧಿಸಲು ಹೆಚ್ಚು ಕಾಳಜಿವಹಿಸುತ್ತದೆ. ದಿನಕ್ಕೆ ಒಂದು ಮೂಲಂಗಿ ತಿನ್ನುವುದರಿಂದಾಗುವ ಪ್ರಯೋಜನಗಳೇನು ಎಂಬುದನ್ನು ತಿಳಿಯೋಣ.

★ **ಜೀರ್ಣಕ್ರಿಯೆಗೆ ಸಹಕಾರಿ:** ಮೂಲಂಗಿಯಲ್ಲಿ ಫೈಬರ್ ಅಂಶವು ಸಮೃದ್ಧವಾಗಿದೆ. ಈ ತರಕಾರಿಯಿಂದ ಜೀರ್ಣಾಂಗ ವ್ಯವಸ್ಥೆಯು ಸರಾಗವಾಗಿ ಕಾರ್ಯನಿರ್ವಹಿಸಲು. ಸಹಾಯವಾಗುತ್ತದೆ. ಜರ್ನಲ್‌ನಲ್ಲಿ ಪ್ರಕಟವಾದ ಅಧ್ಯಯನವು ಮೂಲಂಗಿ ರಸವು ಕರುಳಿನ ಚಲನೆ ಉತ್ತೇಜಿಸುತ್ತದೆ. ಮಲಬದ್ಧತೆಯಂತಹ ಸಮಸ್ಯೆಗಳನ್ನು ಕಡಿಮೆ ಮಾಡುತ್ತದೆ ಎಂದು ತಿಳಿಸುತ್ತದೆ. ಮೂಲಂಗಿಯಲ್ಲಿರುವ ಸಂಯುಕ್ತಗಳು ಪಿತ್ತರಸ ಉತ್ಪಾದನೆ ಮಾಡುವ ನೈಸರ್ಗಿಕ ಶುದ್ಧೀಕರಣ ಗುಣಗಳನ್ನು ಹೊಂದಿದೆ. ಇದು ಒಟ್ಟಾರೆ ಆರೋಗ್ಯಕ್ಕೆ ಮುಖ್ಯವಾದ ಸಲ್ಫರ್ ಆಧಾರಿತ ಸಂಯುಕ್ತಗಳನ್ನು ಹೊಂದಿದೆ. ಯಕೃತ್ತಿನಿಂದ ವಿಷ ಹೊರಹಾಕಲು ಹಾಗೂ ಅತ್ಯುತ್ತಮ ಕಾರ್ಯವನ್ನು ಉತ್ತೇಜಿಸಲು ಸಹಾಯವಾಗುತ್ತದೆ.

★ **ರೋಗನಿರೋಧಕ ಶಕ್ತಿ ಹೆಚ್ಚುತ್ತೆ:** ವಿಟಮಿನ್ ಸಿ ಸಮೃದ್ಧವಾಗಿರುವ ಮೂಲಂಗಿಯಲ್ಲಿ ರೋಗನಿರೋಧಕ ಶಕ್ತಿಯನ್ನು ವೃದ್ಧಿಸುವ ಗುಣವನ್ನು ಹೊಂದಿದೆ. ಈ ಅಗತ್ಯವಾದ ಸೋಂಕುಗಳ ವಿರುದ್ಧ ಹೋರಾಡಲು ಸಹಾಯ ಮಾಡುತ್ತದೆ. ಶೀತ ಮತ್ತು ಜ್ವರದಂತಹ ಸಾಮಾನ್ಯ ಕಾಯಿಲೆಗಳನ್ನು ತ್ವರಿತವಾಗಿ ಗುಣಪಡಿಸಲು ಸಹಾಯ ಮಾಡುತ್ತದೆ.

★ **ತೂಕ ನಿರ್ವಹಣೆಗೆ ಸಹಕಾರಿ:** ಕಡಿಮೆ ಕ್ಯಾಲೋರಿಗಳು ಮತ್ತು ಹೆಚ್ಚಿನ ನೀರಿನ ಅಂಶವನ್ನು ಹೊಂದಿರುವ ಕಾರಣ ಮೂಲಂಗಿ ತೂಕ ನಿರ್ವಹಣೆಗೆ ಉತ್ತಮವಾಗಿವೆ. ಕ್ಯಾಲೊರಿ ಕಡಿಮೆ ಇರುವುದರಿಂದ ಮೂಲಂಗಿ ಸೇವಿಸುವುದರಿಂದ ನಿಮಗೆ ಹೊಟ್ಟೆ ತುಂಬಿದ ಭಾವನೆ ಬರುತ್ತದೆ. ಇದು ತೂಕವನ್ನು ಕಾಪಾಡಿಕೊಳ್ಳಲು ಅಥವಾ ಕಡಿಮೆ ಮಾಡಲು ಬಯಸುವವರಿಗೆ ಬಹಳ ಸಹಕಾರಿ. ಜರ್ನಲ್‌ನಲ್ಲಿ ಪ್ರಕಟವಾದ ಅಧ್ಯಯನವು, ಬೊಜ್ಜು ಇರುವ ಇಲಿಗಳಿಗೆ ಮೂಲಂಗಿ ರಸ ನೀಡುವುದರ ಪರಿಣಾಮವಾಗಿ ಅವುಗಳ ತೂಕ ನಷ್ಟವಾಯಿತು ಎಂಬುದನ್ನು ಕಂಡು ಹಿಡಿಯಲಾಗಿದೆ.

★ **ರಕ್ತದೊತ್ತಡ ನಿಯಂತ್ರಣ:** ಇದು ರಕ್ತದೊತ್ತಡವನ್ನು ನಿಯಂತ್ರಿಸುವಲ್ಲಿ ಪ್ರಮುಖ ಪಾತ್ರ ವಹಿಸುತ್ತದೆ. ಪೊಟ್ಯಾಸಿಯಮ್ ರಕ್ತನಾಳಗಳನ್ನು ವಿಶ್ರಾಂತಿ ಮಾಡಲು ಸಹಾಯವಾಗುತ್ತದೆ. ರಕ್ತದ ಹರಿವನ್ನು ಸುಧಾರಿಸುತ್ತದೆ ಹಾಗೂ ಅಧಿಕ ರಕ್ತದೊತ್ತಡ, ಹೃದ್ರೋಗದ ಅಪಾಯ ಕಡಿಮೆ ಮಾಡುತ್ತದೆ.

★ **ಚರ್ಮದ ಆರೋಗ್ಯ:** ಮೂಲಂಗಿಯಲ್ಲಿರುವ ಹೆಚ್ಚಿನ ನೀರಿನ ಅಂಶವು ಚರ್ಮ ಪೈತ್ರೀಕರಿಸುತ್ತದೆ. ವಿಟಮಿನ್ ಸಿ ಕಾಲಜನ್ ಉತ್ಪಾದನೆಯನ್ನು ವೃದ್ಧಿಸುತ್ತದೆ. ಇದುವ ಹಾಗೂ ವ್ಯಾಕ್ಟೀರಿಯಾ ವಿರೋಧಿ ಗುಣಗಳನ್ನು ಹೊಂದಿವೆ. ಇದು ಒಣ ಚರ್ಮ ಮೊಡವೆ ಹಾಗೂ ದದ್ದುಗಳಂತಹ ಚರ್ಮದ ಸಮಸ್ಯೆಗಳ ವಿರುದ್ಧ ಹೋರಾಡಲು ಸಹಾಯ ಮಾಡುತ್ತವೆ.

★ **ಉರಿಯೂತದ ವಿರುದ್ಧ ಹೋರಾಡುತ್ತೆ:** ಮೂಲಂಗಿಯಲ್ಲಿ ಆಂಥೋಸಯಾನಿನ್ ಮತ್ತು ಉರಿಯೂತ ದೂರವಾಗಿಸುವಂತಹ ಉತ್ಕರ್ಷಣ ನಿರೋಧಕಗಳಿವೆ ಈ ಸಂಯುಕ್ತಗಳು ದೇಹದಾದ್ಯಂತ ಉರಿಯೂತವನ್ನು ಕಡಿಮೆ ಮಾಡಬಹುದು. ಇದು ಸಂಧಿವಾತ ಹಾಗೂ ಇತರ ಉರಿಯೂತದ ಸಮಸ್ಯೆಗಳಂತಹ ಪರಿಸ್ಥಿತಿಗಳನ್ನು ನಿರ್ವಹಿಸಲು ಪ್ರಯೋಜನಕಾರಿಯಾಗಿದೆ.

★ **ಮೂತ್ರಪಿಂಡದ ಕಾರ್ಯ ನಿರ್ವಹಣೆಗೆ ಸಹಕಾರಿ:** ಮೂಲಂಗಿ ನೈಸರ್ಗಿಕ ಮೂತ್ರವರ್ಧಕವಾಗಿ ಕಾರ್ಯನಿರ್ವಹಿಸುತ್ತದೆ. ದೇಹದಿಂದ ಹೆಚ್ಚುವರಿ ನೀರು ಮತ್ತು ವಿಷವನ್ನು ಹೊರಹಾಕಲು ಸಹಾಯ ಮಾಡುತ್ತದೆ. ಈ ಮೂತ್ರವರ್ಧಕ ಪರಿಣಾಮವು ಮೂತ್ರಪಿಂಡದ ಆರೋಗ್ಯ ಬೆಂಬಲಿಸುತ್ತದೆ. ಮೂತ್ರಪಿಂಡದ ಕಾರ್ಯವನ್ನು ಉತ್ತೇಜಿಸುತ್ತದೆ ಮತ್ತು ಮೂತ್ರನಾಳದ ಸೋಂಕಿನ ಅಪಾಯ ಕಡಿಮೆ ಮಾಡುತ್ತದೆ.

ದೈನಂದಿನ ಆಹಾರದಲ್ಲಿ ನೀವು ಮೂಲಂಗಿಯನ್ನು ಬಳಸಿ ಮೂಲಂಗಿ ಸಾಂಬಾರ್ ಹಾಗೂ ಪಲ್ಯ ಮಾಡಬಹುದು.



### ಮೂಲಂಗಿಯನ್ನು ಯಾರು ತಪ್ಪಿಸಬೇಕು?

- ಮೂಲಂಗಿ ಸೇವನೆಯು ವಾಯು ಮತ್ತು ಸೆಳೆತವನ್ನು ಉಂಟುಮಾಡಬಹುದು.
- ಮೂಲಂಗಿ ಅಲರ್ಜಿ ಇರುವವರು ಜೇನುಗೂಡುಗಳು ಅಥವಾ ತೀವ್ರವಾದ ಪ್ರತಿಕ್ರಿಯೆಗಳನ್ನು ಅನುಭವಿಸಬಹುದು, ಆದ್ದರಿಂದ ಅವರ ಸೇವನೆಯನ್ನು ನಿಲ್ಲಿಸಬೇಕು.

### ಮೂಲಂಗಿ ಸೇವಿಸುವ ಮೊದಲು:

- ನಿಮ್ಮ ಆಹಾರದಲ್ಲಿ ಯಾವುದೇ ದೊಡ್ಡ ಬದಲಾವಣೆ ಮಾಡುವ ಮೊದಲು ವೈದ್ಯರನ್ನು ಅಥವಾ ಆಹಾರ ತಜ್ಞರನ್ನು ಸಂಪರ್ಕಿಸುವುದು ಒಳ್ಳೆಯದು.

### ಇತರ ಮಾಹಿತಿಗಳು

- ಮೂಲಂಗಿಯ ಸೇವನೆಯು ಮಧುಮೇಹವನ್ನು ನಿರ್ವಹಿಸಲು ಸಹಾಯ ಮಾಡುತ್ತದೆ.
- ಇದು ನಿಮ್ಮ ಆಹಾರಕ್ಕೆ ಕರುಕುಲಾದ ಮತ್ತು ಮಸಾಲೆಯುಕ್ತ ಸ್ಪರ್ಶವನ್ನು ನೀಡುತ್ತದೆ.

## 03-9-2025 ದಿನ ಭವಿಷ್ಯ

**ಮೇಷ:** ನಿಮ್ಮ ಬಗ್ಗೆ ನಿಮಗೇ ಉತ್ತಮ ಅಭಿಪ್ರಾಯ ಬರಲು ಕೆಲಸಗಳನ್ನು ಮಾಡಲು ಒಂದು ಅದ್ಭುತ ದಿನ. ವಿವಾಹಿತರು ಇಂದು ತಮ್ಮ ಮಕ್ಕಳ ಅಧ್ಯಯನದ ಮೇಲೆ ಹೆಚ್ಚು ಹಣವನ್ನು ಖರ್ಚು ಮಾಡಬೇಕಾಗುತ್ತದೆ. ನಿಮ್ಮ ಪ್ರೀತಿಪಾತ್ರರ ಜೊತೆ ವಾದಗಳಿಗೆ ಕಾರಣವಾಗಬಹುದಾದ ಸಮಸ್ಯೆಗಳನ್ನು ತಪ್ಪಿಸುವುದು ಒಳ್ಳೆಯದು.

**ವೃಷಭ:** ಬಿಡುವಿರದ ಕಾರ್ಯಕ್ರಮದ ಹೊರತಾಗಿಯೂ ಆರೋಗ್ಯ ಚೆನ್ನಾಗಿರುತ್ತದಾದರೂ ನಿಮ್ಮ ಬದುಕನ್ನು ಲಘುವಾಗಿ ತೆಗೆದುಕೊಳ್ಳಬೇಡಿ ಹಾಗೂ ಜೀವನದ ರಕ್ಷಣೆ ನಿಮ್ಮ ನಿಜವಾದ ಹೊಣೆಗಾರಿಕೆಯೆಂದು ಅರ್ಥ ಮಾಡಿಕೊಳ್ಳಿ. ಸಣ್ಣ ಉದ್ಯೋಗವನ್ನು ಮಾಡುವ ಜನರು, ಇಂದು ತಮ್ಮ ಆಪ್ತರಿಂದ ಯಾವುದೇ ಸಲಹೆಯನ್ನು ಪಡೆಯಬಹುದು.

**ಮಿಥುನ:** ಒಟ್ಟಾರೆ ಆರೋಗ್ಯ ಉತ್ತಮವಾಗಿದ್ದರೂ ಪ್ರಯಾಣ ಒತ್ತಡಮಯವೂ ಮತ್ತು ಕಷ್ಟಕರವೂ ಆಗಿರುತ್ತದೆ. ನಿಕಟ ಸಂಬಂಧಿಗಳ ಮನೆಗೆ ಹೋಗುವುದರಿಂದ ಇಂದು ನಿಮ್ಮ ಆರ್ಥಿಕ ಪರಿಸ್ಥಿತಿ ಹಾಳಾಗಬಹುದು. ನಿಮ್ಮ ಹೆತ್ತವರ ಆರೋಗ್ಯ ಚಿಂತೆ ಮತ್ತು ಆತಂಕಕ್ಕೆ ಕಾರಣವಾಗುತ್ತದೆ. ಪ್ರೀತಿ ಮತ್ತು ಪ್ರಣಯ ನಿಮ್ಮನ್ನು ಸಂತೋಷದ ಮನೋಭಾವದಲ್ಲಿಡುತ್ತದೆ.

**ಕರ್ಕಾಟಕ:** ಆಶಾವಾದಿಗಳಾಗಿರಿ ಮತ್ತು ಜೀವನದ ಉಜ್ವಲ ಬದಿಯನ್ನು ನೋಡಿ. ನಿಮ್ಮ ಆತ್ಮವಿಶ್ವಾಸಭರಿತ ನಿರೀಕ್ಷೆಗಳು ನಿಮ್ಮ ಭರವಸೆಗಳು ಮತ್ತು ಆಸೆಗಳನ್ನು ಸಾಕ್ಷಾತ್ಕಾರಗೊಳಿಸಲು ಸಹಾಯ ಮಾಡುತ್ತವೆ. ನೀವು ಪ್ರಯಾಣ ಮಾಡುತ್ತಿದ್ದರೆ ನಿಮ್ಮ ಅಮೂಲ್ಯ ವಸ್ತುಗಳ ಬಗ್ಗೆ ವಿಶೇಷ ಗಮನ ಹರಿಸಿ, ನೀವು ಇದನ್ನು ಮಾಡದಿದ್ದರೆ ಸರಕುಗಳು ಕದಿಯುವ ಸಾಧ್ಯತೆಯಿದೆ.

**ಸಿಂಹ:** ಸ್ನೇಹಿತರಿಂದ ಒಂದು ವಿಶೇಷ ಅಭಿನಂದನೆ ಸಂತೋಷದ ಮೂಲವಾಗುತ್ತದೆ. ಇದೇಕೆಂದರೆ ನೀವು ನಿಮ್ಮ ಜೀವನವನ್ನು ಮರಗಳಂತೆ ಮಾಡಿಕೊಳ್ಳುತ್ತೀರಿ-ಅವುಗಳು ತಾವು ಸೂರ್ಯನಡಿ ನಿಂತು ಶಾಖದ ಬೇಗೆ ತಡೆದುಕೊಂಡು ಇತರರಿಗೆ ನೆರಳು ನೀಡುತ್ತವೆ. ಆಶೀರ್ವಾದ ಹಾಗೂ ಅದೃಷ್ಟ ನಿಮ್ಮ ಬಳಿ ಬರುತ್ತಿದ್ದ ಹಾಗೆ ನಿಮ್ಮ ಬಯಕೆಗಳು ಪೂರೈಸಲ್ಪಡುತ್ತವೆ.

ಕನ್ಯಾ: ದೇಹದ ನೋವಿನಿಂದ ಬಳಲುವ ಸಾಧ್ಯತೆ ಹೆಚ್ಚಿದೆ. ನಿಮ್ಮ ದೇಹದ ಮೇಲೆ ಹೆಚ್ಚು ಒತ್ತಡ ಹಾಕುವ ಯಾವುದೇ ದೈಹಿಕ ಪರಿಶ್ರಮವನ್ನು ತಪ್ಪಿಸಲು ಪ್ರಯತ್ನಿಸಿ. ಸಾಕಷ್ಟು ವಿಶ್ರಾಂತಿ ತೆಗೆದುಕೊಳ್ಳಿ. ದೀರ್ಘಕಾಲದ ಲಾಭಗಳಿಗೆ ಸ್ಟಾಕ್‌ಗಳು ಮತ್ತು ಮ್ಯೂಚುವಲ್ ಫಂಡ್‌ಗಳಲ್ಲಿ ಹೂಡಿಕೆ ಮಾಡುವುದನ್ನು ಶಿಫಾರಸು ಮಾಡಲಾಗಿದೆ.

ತುಲಾ: ಇಂದು ನೀವು ನಿಮ್ಮ ಆರೋಗ್ಯ ಮತ್ತು ನೋಟವನ್ನು ಸುಧಾರಿಸಲು ಕೆಲಸ ಮಾಡಲು ಸಾಕಷ್ಟು ಸಮಯ ಹೊಂದಿರುತ್ತೀರಿ ಸಣ್ಣ ಉದ್ಯೋಗವನ್ನು ಮಾಡುವ ಜನರು, ಇಂದು ತಮ್ಮ ಆಪ್ತರಿಂದ ಯಾವುದೇ ಸಲಹೆಯನ್ನು ಪಡೆಯಬಹುದು. ಇದರಿಂದ ಅವರಿಗೆ ಆರ್ಥಿಕವಾಗಿ ಲಾಭ ಪಡೆಯುವ ಸಾಧ್ಯತೆ ಇದೆ.

**ವೃಶ್ಚಿಕ:** ನಿಮ್ಮ ಅತ್ಯಂತ ಪ್ರೀತಿಯ ಕನಸು ನನಸಾಗುತ್ತದೆ. ಆದರೆ ತುಂಬಾ ಸಂತೋಷ ಸ್ವಲ್ಪ ಸಮಸ್ಯೆಗಳನ್ನು ಉಂಟುಮಾಡಬಹುದಾದ್ದರಿಂದ ನಿಮ್ಮ ಉತ್ಸಾಹವನ್ನು ನಿಯಂತ್ರಣದಲ್ಲಿರಿಸಿಕೊಳ್ಳಿ. ರಾತ್ರಿಯ ವೇಳೆಯಲ್ಲಿ ಇಂದು ನೀವು ಹಣದ ಪ್ರಯೋಜನವನ್ನು ಪಡೆಯುವ ಪೂರ್ತಿ ಸಾಧ್ಯತೆ ಇದೆ ಏಕೆಂದರೆ ನಿಮ್ಮ ಮೂಲಕ ಕೊಟ್ಟಿರುವ ಹಣ ಇಂದು ನಿಮಗೆ ಮರಳಿ ಸಿಗಬಹುದು.

**ಧನು:** ದೇಹದ ನೋವಿನಿಂದ ಬಳಲುವ ಸಾಧ್ಯತೆ ಹೆಚ್ಚಿದೆ. ನಿಮ್ಮ ದೇಹದ ಮೇಲೆ ಹೆಚ್ಚು ಒತ್ತಡ ಹಾಕುವ ಯಾವುದೇ ದೈಹಿಕ ಪರಿಶ್ರಮವನ್ನು ತಪ್ಪಿಸಲು ಪ್ರಯತ್ನಿಸಿ. ಸಾಕಷ್ಟು ವಿಶ್ರಾಂತಿ ತೆಗೆದುಕೊಳ್ಳಿ. ಇಂದು ನೀವು ನಿಮ್ಮ ಮಕ್ಕಳ ಕಾರಣದಿಂದ ಆರ್ಥಿಕ ಲಾಭವನ್ನು ಪಡೆಯುವ ಸಾಧ್ಯತೆ ಕಂಡುಬರುತ್ತಿದೆ. ಇದರಿಂದ ನೀವು ತುಂಬಾ ಸಂತೋಷಪಡುತ್ತೀರಿ.

**ಮಕರ:** ಸ್ನೇಹಿತರು ನಿಮ್ಮ ಆಲೋಚನೆಗಳ ಮೇಲೆ ಗಮನಾರ್ಹ ಪ್ರಭಾವ ಬೀರಬಹುದಾದ ಯಾರಾದರೂಬ್ಬರನ್ನು ನಿಮಗೆ ಪರಿಚಯಿಸುತ್ತಾರೆ. ನಿಮ್ಮ ಹಣವನ್ನು ಉಳಿಸಲು ನೀವು ಇಂದು ನಿಮ್ಮ ಮನೆಯ ಜನರೊಂದಿಗೆ ಮಾತನಾಡಬೇಕು. ಅವರ ಸಲಹೆ ನಿಮ್ಮ ಆರ್ಥಿಕ ಪರಿಸ್ಥಿತಿಯನ್ನು ಸುಧಾರಿಸಲು ಸಹಾಯಕವಾಗುತ್ತದೆ. ಪತ್ನಿಯ ವ್ಯವಹಾರಗಳಲ್ಲಿ ನಿಮ್ಮ ಹಸ್ತಕ್ಷೇಪ ಅವಳಿಗೆ ಕಿರಿಕಿರಿ ಮಾಡಬಹುದು.

**ಕುಂಭ:** ನಿಮ್ಮ ಕಾಯಿಲೆ ಅತೃಪ್ತಿಯ ಕಾರಣವಾಗಿರಬಹುದು. ಕುಟುಂಬದಲ್ಲಿ ಸಂತೋಷವನ್ನು ಪುನಃಸ್ಥಾಪಿಸಲು ನೀವು ಸಾಧ್ಯವಾದಷ್ಟೂ ಬೇಗ ಇದರಿಂದ ಹೊರಬರುವ ಅಗತ್ಯವಿದೆ. ಇಂದು ನೀವು ಒಳ್ಳೆಯ ಹಣ ಮಾಡುತ್ತೀರಿ – ಆದರೆ ಅದು ನಿಮ್ಮ ಕೈಯಿಂದ ಜಾರಿಹೋಗದಿರಲು ಪ್ರಯತ್ನಿಸಿ. ಕುಟುಂಬದ ಸದಸ್ಯರು ನಿಮ್ಮ ಜೀವನದಲ್ಲಿ ಒಂದು ವಿಶೇಷ ಸ್ಥಾನವನ್ನು ಹೊಂದಿರುತ್ತಾರೆ.

**ಮೀನ:** ನಿಮ್ಮ ಸಾಮಾನ್ಯ ಜ್ಞಾನದ ಜೊತೆಗೆ ನಿಮ್ಮ ನಿರಂತರ ಪ್ರಯತ್ನ ಖಂಡಿತವಾಗಿಯೂ ಯಶಸ್ಸು ತರುವುದರಿಂದ ತಾಳ್ಮೆಯಿಂದಿರಿ. ನೀವು ತ್ವರಿತ ಹಣ ಪಡೆಯುವ ಬಯಕೆ ಹೊಂದಿರುತ್ತೀರಿ. ನಿಮ್ಮ ಹವ್ಯಾಸಗಳನ್ನು ಮುಂದುವರಿಸುವ ಮತ್ತು ಕುಟುಂಬದ ಸದಸ್ಯರಿಗೆ ಸಹಾಯ ಮಾಡುವ ಮೂಲಕ ನೀವು ಸಮಯ ಕಳೆಯಬಹುದು. ಈ ದಿನವು ಅತ್ಯುತ್ತಮ ದಿನಗಳಲ್ಲಿ ಒಂದಾಗಬಹುದು.

# ಸೇವೆ ಸಹಬಾಳ್ವೆಯ ಪ್ರತೀಕ ಧರ್ಮಸ್ಥಳ

ವ್ಯಾಪಕ ಶ್ರೇಣಿಯ ದತ್ತಿ ಚಟುವಟಿಕೆಗಳಿಗೆ ಮತ್ತು ಶೈಕ್ಷಣಿಕ ಉಪಕ್ರಮಗಳಿಗೆ ಹೆಸರುವಾಸಿಯಾಗಿರುವ ಹೆಗ್ಗಡೆಯವರು, ಧಾರ್ಮಿಕ ವಲಯಗಳನ್ನೂ ಮೀರಿದ ಗೌರವಾನ್ವಿತ ವ್ಯಕ್ತಿಯಾಗಿದ್ದಾರೆ. ಆದರೆ, ಶ್ರೀಕ್ಷೇತ್ರದ ವಿರುದ್ಧ ಸಾಮಾಜಿಕ ಮಾಧ್ಯಮ ವೇದಿಕೆಗಳಲ್ಲಿ ಮತ್ತು ಸಾರ್ವಜನಿಕ ಅರ್ಜಿಗಳ ಸ್ವರೂಪದಲ್ಲಿ ಹೊಮ್ಮಿದ ಹಠಾತ್ ಆರೋಪಗಳು ಭಕ್ತರನ್ನು ಕ್ಷಣಕಾಲ ಬೆಚ್ಚಿ ಬೀಳಿಸಿದ್ದು ನಿಜ.

ಧಾರ್ಮಿಕ ನಂಬಿಕೆ, ಸಂಪ್ರದಾಯ ಮತ್ತು ಸಾಮಾಜಿಕ ಸೇವೆಗಳಿಗೆ ಹೆಸರುವಾಸಿಯಾಗಿರುವ ದೇಗುಲ ಪಟ್ಟಣ ಧರ್ಮಸ್ಥಳವು ಕೋಟ್ಯಂತರ ಹಿಂದೂಗಳ ಶ್ರದ್ಧಾಕೇಂದ್ರವಾಗಿ ಸಾಕಷ್ಟು ವರ್ಷಗಳಿಂದ ತನ್ನದೇ ಆದ ಛಾಪನ್ನು ಮೂಡಿಸಿದೆ. ಶ್ರೀ ಮಂಜುನಾಥ ದೇವಾಲಯದ ಧರ್ಮಾಧಿಕಾರಿಗಳಾದ ಡಾ. ಡಿ.ವೀರೇಂದ್ರ ಹೆಗ್ಗಡೆ ಅವರು ಪ್ರಸ್ತುತ ಚಂಡಮಾರುತದ ಕೇಂದ್ರದಲ್ಲಿ ನಿಂತಿದ್ದಾರೆ.

ವ್ಯಾಪಕ ಶ್ರೇಣಿಯ ದತ್ತಿ ಚಟುವಟಿಕೆಗಳಿಗೆ ಮತ್ತು ಶೈಕ್ಷಣಿಕ ಉಪಕ್ರಮಗಳಿಗೆ ಹೆಸರುವಾಸಿಯಾಗಿರುವ ಹೆಗ್ಗಡೆಯವರು, ಧಾರ್ಮಿಕ ವಲಯಗಳನ್ನೂ ಮೀರಿದ ಗೌರವಾನ್ವಿತ ವ್ಯಕ್ತಿಯಾಗಿದ್ದಾರೆ. ಆದರೆ, ಶ್ರೀಕ್ಷೇತ್ರದ ವಿರುದ್ಧ ಸಾಮಾಜಿಕ ಮಾಧ್ಯಮ ವೇದಿಕೆಗಳಲ್ಲಿ ಮತ್ತು ಸಾರ್ವಜನಿಕ ಅರ್ಜಿಗಳ ಸ್ವರೂಪದಲ್ಲಿ ಹೊಮ್ಮಿದ ಹಠಾತ್ ಆರೋಪಗಳು ಭಕ್ತರನ್ನು ಕ್ಷಣಕಾಲ ಬೆಚ್ಚಿ ಬೀಳಿಸಿದ್ದು ನಿಜ.

ಗಣನೀಯ ವರ್ಷಗಳಿಂದ ಧಾರ್ಮಿಕ ಸಾಮರಸ್ಯಕ್ಕೆ ಮತ್ತು ಲೋಕೋಪಕಾರಕ್ಕೆ ಸಂಕೇತವಾಗಿ ನಿಂತಿರುವ ಶ್ರೀಕ್ಷೇತ್ರದ ಖ್ಯಾತಿಯ ಮೇಲೆ ಬಕಪಕ್ಷಿಗಳು ಕರಿನೆರಳನ್ನು ಬೀರಿದ್ದರ ಪರಿಣಾಮವಿದು. ನೂರಾರು ವರ್ಷಗಳ ಇತಿಹಾಸವಿರುವ ಧರ್ಮಸ್ಥಳದ ಬಗ್ಗೆ ಅಪಪ್ರಚಾರವನ್ನು ಮಾಡಿ, ತಲೆಬುಡವಿಲ್ಲದ ಆರೋಪಗಳನ್ನು ಮುಂಚೂಣಿಗೆ ತರುವ ಮುಖಾಂತರ, ಶ್ರೀಕ್ಷೇತ್ರವನ್ನು ಕೊಲೆಗಳಿಗೆ ಮತ್ತು ಬುರುಡೆಗಳಿಗೆ ಸೀಮಿತವಾಗಿ ಇಡಬೇಕೆಂದು ಕೆಲವಷ್ಟು ವಿಕ್ಷಿಪ್ತರು ವ್ಯವಸ್ಥಿತವಾಗಿ ಪ್ರಯತ್ನಿಸುತ್ತಿರುವುದು ದುರ್ದೈವದ ಸಂಗತಿ.

ವಾಸ್ತವದಲ್ಲಿ, ಧಾರ್ಮಿಕ ನಂಬಿಕೆಗಳು ಮತ್ತು ಶ್ರೀಕ್ಷೇತ್ರದ ಮಹಿಮೆಯಿಂದ ಮಾತ್ರವಲ್ಲದೆ ಧರ್ಮಾಧಿಕಾರಿ ಪೂಜ್ಯ ವೀರೇಂದ್ರ ಹೆಗ್ಗಡೆಯವರ ನೇತೃತ್ವದಲ್ಲಿ ನಡೆಯುತ್ತಲೇ ಬಂದಿರುವ ಅನೇಕ ಸಾಮಾಜಿಕ ಮತ್ತು ಸೇವಾಚಟುವಟಿಕೆಗಳಿಂದ ಧರ್ಮಸ್ಥಳವು ಹೆಸರುವಾಸಿಯಾಗಿದೆ.

**ಈ ಕುರಿತಾದ ಪಕ್ಷಿನೋಟ ಇಲ್ಲಿದೆ: ಆರೋಗ್ಯ ಸೇವೆಗಳು:** ವೈದ್ಯರ ಪ್ರಯೋಗಾಲಯ, ಔಷಧಿ ಮತ್ತು ತಪಾಸಣಾ ವ್ಯವಸ್ಥೆಗಳನ್ನು ಹೊಂದಿರುವ ಸಂಚಾರಿ ಆಸ್ಪತ್ರೆಗಳ ಮೂಲಕ ವೈದ್ಯಕೀಯ ಸೇವೆಗಳು ಗ್ರಾಮೀಣ ಪ್ರದೇಶವನ್ನೂ ತಲುಪುತ್ತಿವೆ. ಮಿಕ್ಕಂತೆ ಎಸ್‌ಡಿಎಂ ಟ್ರಸ್ಟ್ ಅಡಿಯಲ್ಲಿ ಬರುವ ಸಾಮಾನ್ಯ ಆಸ್ಪತ್ರೆಗಳು, ದಂತ ಆಸ್ಪತ್ರೆಗಳು, ಆಯುರ್ವೇದ ಮತ್ತು ನೈಸರ್ಗಿಕ ಚಿಕಿತ್ಸಾ ಕೇಂದ್ರಗಳು, ನೇತ್ರ ಚಿಕಿತ್ಸಾ ಆಸ್ಪತ್ರೆಗಳು ಕೂಡ ಸಾಕಷ್ಟು ವರ್ಷಗಳಿಂದ ಅನನ್ಯ ಸೇವೆಯನ್ನು ನೀಡುತ್ತಿವೆ.

ಜನರಿಗೆ ಉಚಿತ ಆರೋಗ್ಯ ಸೇವೆ ನೀಡುವ ಸದಾಶಯದ ಭಾಗವಾಗಿ ಧರ್ಮಸ್ಥಳದಲ್ಲಿ ವೈದ್ಯಕೀಯ ಶಿಬಿರಗಳು, ರಕ್ತದಾನ ಶಿಬಿರಗಳು, ಕಣ್ಣಿನ ತಪಾಸಣೆ ಮತ್ತು ಶಸಚಿಕಿತ್ಸೆ ಮುಂತಾದ ಚಟುವಟಿಕೆಗಳನ್ನು ಅನೇಕ ವರ್ಷಗಳಿಂದ ನಿಯತವಾಗಿ ನಡೆಸಿಕೊಂಡು ಬರಲಾಗುತ್ತಿದೆ.

**ದಾನಧರ್ಮ ಮತ್ತು ಅನ್ನದಾನ:** ಧರ್ಮಸ್ಥಳದಲ್ಲಿ ಪ್ರತಿದಿನ ಲಕ್ಷಾಂತರ ಯಾತ್ರಿಕರಿಗೆ/ಭಕ್ತರಿಗೆ ಅನ್ನಪೂರ್ಣ ಭವನದಲ್ಲಿ ಸ್ವಚ್ಛ ಮತ್ತು ಪುಷ್ಟಿದಾಯಕ ಊಟವನ್ನು ಉಚಿತವಾಗಿ ನೀಡಲಾಗುತ್ತದೆ. ತೊಂದರೆಗೀಡಾದವರಿಗೆ ಆರ್ಥಿಕ, ವೈದ್ಯಕೀಯ, ಶೈಕ್ಷಣಿಕ ವಿಷಯಗಳಲ್ಲಿ ಸಹಾಯ ಮಾಡಲಾಗುತ್ತದೆ. ವೃದ್ಧರು, ಅಂಗವಿಕಲರು ಮತ್ತು ದೈನ್ಯಾವಸ್ಥೆಯಲ್ಲಿರುವವರಿಗೆ ಮಾಸಿಕ ಪಿಂಚಣಿ ಮತ್ತು ನೆರವನ್ನು ನೀಡಲಾಗುತ್ತದೆ.

**ಶಿಕ್ಷಣ ಮತ್ತು ಕೌಶಲಾಭಿವೃದ್ಧಿ:** ಶ್ರೀಕ್ಷೇತ್ರವು ಶಿಕ್ಷಣ ಮತ್ತು ಕೌಶಲಾಭಿವೃದ್ಧಿಗೆ ಹೆಚ್ಚು ಪ್ರಾಮುಖ್ಯವನ್ನು ನೀಡುತ್ತಿದೆ. ಎಸ್ ಡಿಎಂ ಶಿಕ್ಷಣ ಸಂಸ್ಥೆಗಳ ಅಡಿಯಲ್ಲಿ 50ಕ್ಕೂ ಹೆಚ್ಚು ಶಾಲೆಗಳು ಮತ್ತು ಕಾಲೇಜುಗಳು ಕಾರ್ಯನಿರ್ವಹಿಸುತ್ತಿವೆ. ಇವುಗಳಲ್ಲಿ ಎಂಜಿನಿಯರಿಂಗ್, ಮೆಡಿಕಲ್, ಡೆಂಟಲ್, ಆಯುರ್ವೇದ, ಕಾನೂನು, ಮ್ಯಾನೇಜ್‌ಮೆಂಟ್ ಮುಂತಾದ ವಿಭಾಗಗಳಿವೆ.

ಸಿದ್ಧವನ ಗುರುಕುಲದಲ್ಲಿ ವಿದ್ಯಾರ್ಥಿಗಳಿಗೆ ಉಚಿತ ವಸತಿ ನೀಡಲಾಗುತ್ತದೆ ಮತ್ತು ಯೋಗ, ಸಂಸ್ಕೃತ, ಧಾರ್ಮಿಕ, ಸಾಂಸ್ಕೃತಿಕ ಶಿಕ್ಷಣವನ್ನು ನೀಡಲಾಗುತ್ತದೆ. ಈ ಉಪಕ್ರಮದಿಂದಾಗಿ ಸಾವಿರಾರು ಮಕ್ಕಳಿಗೆ ಮೌಲ್ಯಾಧಾರಿತ ಶಿಕ್ಷಣ ಸಿಗುತ್ತಿದೆ.

ಅಲ್ಲದೆ, ಆರ್ಥಿಕವಾಗಿ ಹಿಂದುಳಿದ ವಿದ್ಯಾರ್ಥಿಗಳಿಗೆ ಉಚಿತ ವಿದ್ಯಾರ್ಥಿವೇತನ, ಪಠ್ಯಪುಸ್ತಕ ಮತ್ತು ವಸತಿ ಸೌಲಭ್ಯವನ್ನು ಒದಗಿಸಲಾಗುತ್ತಿದೆ.

**ಸ್ವಯಂ ಉದ್ಯೋಗ ಮತ್ತು ಆರ್ಥಿಕ ಸಬಲೀಕರಣ:** ಗ್ರಾಮೀಣ ಯುವಕರಿಗೆ ಸ್ವಯಂ ಉದ್ಯೋಗದ ಅವಕಾಶಗಳನ್ನು ಒದಗಿಸಲೆಂದು ಧರ್ಮಸ್ಥಳ ಟ್ರಸ್ಟ್ ವಿವಿಧ ಕಾರ್ಯಕ್ರಮಗಳನ್ನು ನಡೆಸುತ್ತಿದೆ. ರುಡ್‌ಸೆಟ್ ತರಬೇತಿ ಕೇಂದ್ರಗಳಲ್ಲಿ ಕೃಷಿ, ಕೈಗಾರಿಕೆ, ಸೇವಾ ಕ್ಷೇತ್ರಗಳಲ್ಲಿ ಉದ್ಯಮಶೀಲತಾ ತರಬೇತಿಯನ್ನು ನೀಡಲಾಗುತ್ತಿದೆ ಮತ್ತು ಇವು 17 ರಾಜ್ಯಗಳಲ್ಲಿ 27 ಕೇಂದ್ರಗಳಾಗಿ ಕಾರ್ಯನಿರ್ವಹಿಸುತ್ತಿವೆ.



ಇದರಿಂದಾಗಿ ಲಕ್ಷಾಂತರ ಯುವಜನರಿಗೆ ಪ್ರಯೋಜನವಾಗುತ್ತಿದೆ. ಎಸ್‌ಕೆಡಿಆರ್‌ಡಿಪಿ ಯೋಜನೆಯ ಮೂಲಕ ಸ್ವಸಹಾಯ ಗುಂಪುಗಳನ್ನು ಬಲಪಡಿಸಿ ಮಹಿಳಾ ಸಬಲೀಕರಣ, ಮೈಕ್ರೋಫೈನಾನ್ಸ್, ಆರೋಗ್ಯ, ಶಿಕ್ಷಣ, ಗೃಹನಿರ್ಮಾಣ ಮತ್ತು ಇಂಧನ ಸಂಬಂಧಿತ ಯೋಜನೆಗಳನ್ನು ಜಾರಿಗೊಳಿಸಲಾಗುತ್ತಿದೆ. ಜತೆಗೆ ಬ್ಯಾಂಕುಗಳ ಸಹಯೋಗದಲ್ಲಿ ಯುವಕರಿಗೆ ಸಾಲಸೌಲಭ್ಯ ಮತ್ತು ತಾಂತ್ರಿಕ ಮಾರ್ಗದರ್ಶನವನ್ನು ನೀಡಲಾಗುತ್ತಿದೆ.

**ಪರಿಸರ ಸಂರಕ್ಷಣೆ:** ಶ್ರೀಕ್ಷೇತ್ರದ ವತಿಯಿಂದ ಸಂಸ್ಕೃತಿ, ಪರಂಪರೆ ಮತ್ತು ಪರಿಸರ ಸಂರಕ್ಷಣೆಗೆ ವಿಶೇಷ ಪ್ರಾಮುಖ್ಯವನ್ನು ನೀಡಲಾಗುತ್ತಿದೆ. 224ಕ್ಕೂ ಹೆಚ್ಚು ಪ್ರಾಚೀನ ದೇವಾಲಯಗಳ ಜೀರ್ಣೋದ್ಧಾರಕ್ಕೆ ಶ್ರೀಕ್ಷೇತ್ರವು ಟೊಂಕ ಕಟ್ಟಿದೆ. ಪ್ರತಿವರ್ಷವೂ ನಡೆಸಲಾಗುವ ಸರ್ವಧರ್ಮ ಸಮಾವೇಶದಲ್ಲಿ ವಿವಿಧ ಧರ್ಮಗಳ ನಾಯಕರು, ಪಂಡಿತರು ಮತ್ತು ಸಮಾಜ ಸೇವಕರು ಪಾಲ್ಗೊಂಡು, ಸಹಾನುಭೂತಿ-ಸಹಬಾಳ್ವೆ-ಸಾಮಾಜಿಕ ಜಾಗೃತಿಯ ಬಗ್ಗೆ ಚರ್ಚಿಸುತ್ತಾರೆ.

ಯಕ್ಷಗಾನ, ನವಲಗುಂದ ಕಲೆ, ಕಸ್ತೂರಿ ಎಂಬ್ರಾಯ್ಡರಿ ಮುಂತಾದ ಕಲೆಗಳಿಗೆ ಉತ್ತೇಜನ ನೀಡಲಾಗುತ್ತಿದೆ. ಮಂಜುಶ್ರೀ ಕಲಾಸಂಗ್ರಹಾಲಯ ಮುಂತಾದವುಗಳ ಮೂಲಕ ಭಾರತೀಯ ಪರಂಪರೆ ಮತ್ತು ಕಲಾಪ್ರಕಾರಗಳನ್ನು ಸಂರಕ್ಷಿಸಲಾಗುತ್ತಿದೆ. ಜತೆಗೆ ಗಿಡ-ಮರಗಳನ್ನು ನೆಡುವಿಕೆ, ನದಿ-ತೀರ್ಥಗಳ ಶುದ್ಧೀಕರಣ ಮತ್ತು ಪರಿಸರ ಜಾಗೃತಿ ಅಭಿಯಾನಗಳನ್ನು ನಿರಂತರವಾಗಿ ನಡೆಸಲಾಗುತ್ತಿದೆ.

ಕರ್ನಾಟಕದ ಪಾಲಿನ ಅಚ್ಚಳಿಯದ ಸೇವಾಧಾಮವಾಗಿರುವ ಧರ್ಮಸ್ಥಳದಲ್ಲಿ ಧರ್ಮ ಮತ್ತು ದಯೆಯ ಆಚರಣೆಯೊಂದಿಗೆ ಸಮಾಜಸೇವೆಯಂಥ ಮಹೋನ್ನತ ಕಾರ್ಯವೂ ನಡೆಯುತ್ತಿದೆ. ಆದರೆ ಇವುಗಳನ್ನರಿಯದೆ, ಅರ್ಥವಿಲ್ಲದೆ ಮತ್ತು ಅಸಂಬದ್ಧವಾಗಿ ಟೀಕೆ ಮಾಡುವವರ ಸಂಖ್ಯೆ ಹೆಚ್ಚುತ್ತಿರುವುದು ವಿಷಾದನೀಯ. ಜನಾಂಗದ ಏಳಿಗೆಗಾಗಿ ಶ್ರಮಿಸುತ್ತಿರುವ ಇಲ್ಲಿನ ಸಂಸ್ಥೆಗಳನ್ನು

ಸಾಮಾಜಿಕ ಮಾಧ್ಯಮಗಳಲ್ಲಿ ಟ್ರೋಲ್ ಮಾಡುವವರು, ಸಮಾಜಸೇವೆಯ ಅರ್ಥವನ್ನೇ ಅರಿಯದವರಂತೆ ಕಾಣುತ್ತಾರೆ.

ಸಮಾಜದ ಪ್ರಗತಿಗೆ ದಾರಿದೀಪವಾಗಿರುವ ಶ್ರೀಕ್ಷೇತ್ರ ಧರ್ಮಸ್ಥಳಕ್ಕೆ ಮತ್ತು ಅಲ್ಲಿನ ವ್ಯವಸ್ಥೆಗೆ ಕಳಂಕವನ್ನು ಮೆತ್ತಲು ಯತ್ನಿಸುವುದು ಕೇವಲ ಅಜ್ಞಾನ ಮತ್ತು ಅಸೂಯೆಯ ಪ್ರತೀಕವಾಗಿದೆ. ಅದೇನೇ ಇರಲಿ, ಕೊನೆಗೆ ಗೆಲುವಾಗುವುದು ಧರ್ಮದ್ದೇ...

– **ಉತ್ಕರ್ಷ್** ಕೆ.ಎಸ್

# ಭಾವೈಕ್ಯ

ಇಸ್ಮಾಯಿಲ್ ಅಣ್ಣ ತಮ್ಮ ನಾಲ್ಕು ಮೊಮ್ಮಕ್ಕಳನ್ನು ಕರೆದುಕೊಂಡು ಆ ಗಣಪತಿ ಮಂಟಪದ ಹತ್ತಿರ ಬಂದಿದ್ರು. ಬಂದವರೇ ಮಕ್ಕಳ ಬಳಿ ಕೈಮುಗಿಯುವುದಕ್ಕೆ ಹೇಳಿದರು ಮಕ್ಕಳು ಮುಖ ಮುಖ ನೋಡ್ತಿದ್ದಾಗ ಇಸ್ಮಾಯಿಲ್ ಅಣ್ಣ ಎಚ್ಚರಿಕೆಯ ಮಾತನಾಡಿದರು, ಮಕ್ಕಳೇ ದೇವರು ಎಲ್ಲರೂ ಒಬ್ಬರೇ ಕೈಮುಗಿದು ಪ್ರಾರ್ಥಿಸಬೇಕು. ಖಂಡಿತಾ ಆತ ಒಳ್ಳೇದು ಮಾಡುತ್ತಾನೆ. ಮಕ್ಕಳಿಗೆ ಇದು ಅಷ್ಟು ಸಮಂಜಸ ಅನ್ನಿಸಲಿಲ್ಲ. ಮಾತು ಮುಂದುವರಿಸಿದರು, ನಾನು ಮೊದಲು ಈ ಊರಿಗೆ ಕಾಲಿಟ್ಟಾಗ ತಿನ್ನುವುದಕ್ಕೂ ಗತಿಯಿಲ್ಲದ ಪರಿಸ್ಥಿತಿ ನಮ್ಮದು ಆಗ ಸುತ್ತ ಎಲ್ಲ ದೇವಸ್ಥಾನಗಳ ಅನ್ನ ಸಂತರ್ಪಣೆಗೆ ತೆರಳುತ್ತಾ ಇದ್ದೆ. ರಥೋತ್ಸವ, ಗಣೇಶ ಚತುರ್ಥಿ, ಕೋಲ ಅನ್ನ ಸಿಗುವ ಪ್ರತಿ ಕಾರ್ಯಕ್ರಮದಲ್ಲೂ ಭಾಗವಹಿಸುತ್ತಿದ್ದೆ. ಕೆಲವು ಕಡೆ ಪ್ರಸಾದ ಸಿಕ್ತಾ ಇತ್ತು. ಅದನ್ನೇ ತಿಂದ ಕಾರಣಕ್ಕೆ ಇವತ್ತು ಜೀವ ಗಟ್ಟಿ ಆಗಿದೆ. ಮಕ್ಕಳನ್ನ ಬೆಳೆದು ನಿಲ್ಲಿಸಿದ್ದೇನೆ. ಈಗ ಗೋಡೆಯ ಮೇಲೊಂದು ಹಂಚು ಬಂದು ಮನೆ ನೆಮ್ಮದಿಯಲ್ಲಿದೆ. ಆದರೆ ನಾನು ನಡೆದು ಬಂದ ದಾರಿಯನ್ನ ಮರಿಬಾರದು ಅಲ್ವಾ? ಹಾಗಾಗಿ ಕೈ ಮುಗಿರಿ ಮಕ್ಕಳೇ ಖಂಡಿತ ಒಳ್ಳೇದಾಗುತ್ತೆ ಅಂತಂದು ದೇವರಲ್ಲಿ ಮಾಡಿದ ಎಲ್ಲಾ ಒಳ್ಳೆಯ ಕೆಲಸಗಳಿಗೆ ಪ್ರಾರ್ಥನೆಯನ್ನು ಸಲ್ಲಿಸಿಬಿಟ್ಟರು. ಗಣಪತಿ ಸಂಭ್ರಮದಿಂದ ನಗುತ್ತಾ ಇದ್ದ ಅಲ್ಲಾನೂ ಖಂಡಿತ ಖುಷಿಯಾಗ್ತಾನೆ.

– **ಧೀರಜ್** ಬೆಳ್ಳಾರೆ



# ಮಹಿಳೆಯ ಮನಸ್ಸಿಗೆ ಕನ್ನಡಿ ಹಿಡಿದವರು

ಇಂದು ತ್ರಿವೇಣಿ ಅವರ ಜನ್ಮದಿನ ಅನೇಕ ಮಹಿಳಾ ಬರಹಗಾರರಿಗೆ ತ್ರಿವೇಣಿಯವರು ಸ್ಫೂರ್ತಿ ಎಂದರೆ ಅತಿಶಯೋಕ್ತಿಯಲ್ಲ. ಚಿತ್ರದಲ್ಲಿರುವ ಪುಸ್ತಕಗಳು ನನ್ನ ಸಂಗ್ರಹದಲ್ಲಿರುವ ಪುಸ್ತಕಗಳಾಗಿವೆ. ಕೆಲವು ಓದಲು ಬಾಕಿ ಉಳಿದಿದೆ. ಪ್ರಸಿದ್ಧ ಕಾದಂಬರಿಗಾರ್ತಿಯ ಬಗ್ಗೆ ನನ್ನದೊಂದು ಚಿಕ್ಕ ಬರಹ ಇಲ್ಲಿದೆ. ಓದಿ ಪ್ರೋತ್ಸಾಹಿಸಿ

1928 ರಲ್ಲಿ ಮಂಡ್ಯಾದಲ್ಲಿ ಜನಿಸಿದ ಹೆಣ್ಣು ಮಗುವಿಗೆ ಭಾಗೀರಥಿ ಎಂದು ಹೆಸರಿಡುವಾಗ ಕನ್ನಡ ಸಾಹಿತ್ಯ ಲೋಕದಲ್ಲಿ ಹೆಸರಾಂತ ಕಾದಂಬರಿಗಾರ್ತಿಯರ ಸಾಲಿನಲ್ಲಿ ಸೇರುತ್ತಾರೆ ಎನ್ನುವ ಕಲ್ಪನೆಯೂ ಬಹುಶಃ ಅಂದು ಇದ್ದಿರಲಿಕ್ಕಿಲ್ಲ. ಅನುಸೂಯ ಶಂಕರ್ ಅವರ ಶಾಲಾ ದಾಖಲಾತಿಯ ಹೆಸರಾಯಿತು. ಅಲ್ಪಾಯುಷ್ಯದೊಂದಿಗೆ ಜನಿಸಿದ ಮಗುವಿನ ಹೆಸರು ಸಾಹಿತ್ಯ ಲೋಕದಲ್ಲಿ ಶಾಶ್ವತವಾಗಿ ಬೇರೂರುತ್ತದೆ ಎನ್ನುವುದನ್ನು ಯಾರೂ ಪ್ರಾಯಶಃ ಊಹಿಸಿರಲಿಲ್ಲ.

ಮನಃಶಾಸ್ತ್ರ, ಸಮಾಜಶಾಸ್ತ್ರ ಹಾಗು ರಾಜ್ಯಶಾಸ್ತ್ರ ವಿಷಯಗಳನ್ನು ಆಯ್ದುಕೊಂಡು ಮೈಸೂರಿನ ಮಹಾರಾಜ ಕಾಲೇಜಿನಲ್ಲಿ ವ್ಯಾಸಂಗ ಮಾಡಿ ಉನ್ನತ ಶ್ರೇಣಿಯಲ್ಲಿ ಅಂಕ ಗಳಿಸಿ ತಮ್ಮ ಪದವಿಯನ್ನು ಪಡೆದುಕೊಂಡರು. 1947ರಲ್ಲಿ ಎಸ್ ಎನ್ ಶಂಕರ್ ಅವರೊಂದಿಗೆ ವಿವಾಹವಾದರು. ಮಡದಿಯಲ್ಲಿದ್ದ ಬರವಣಿಗೆಗೆ ಪತಿಯಿಂದ ಪ್ರೋತ್ಸಾಹ ದೊರಕಿತು. ತ್ರಿವೇಣಿ ಎಂಬ ಕಾವ್ಯನಾಮದೊಂದಿಗೆ ಕಥೆ ಕಾದಂಬರಿಗಳನ್ನು ಬರೆಯುತ್ತಾ ಜನಮಾನಸದಲ್ಲಿ ಅಚ್ಚಳಿಯದೆ ಉಳಿಯುವ ಬರಹಗಳನ್ನು ಕನ್ನಡ ಸಾಹಿತ್ಯ ಲೋಕಕ್ಕೆ ನೀಡಿದರು. ಕನ್ನಡ ಇಂಗ್ಲಿಷ್ ಮತ್ತು ಬೆಂಗಾಲಿ ಭಾಷೆಯಲ್ಲಿ ಪರಿಣಿತಿ ಹೊಂದಿದ್ದರು. 1950 ರಲ್ಲಿ ಹೂವು ಹಣ್ಣು ಅವರ ಮೊದಲ ಕಾದಂಬರಿ ಪ್ರಕಟವಾಯಿತು. ಪ್ರತಿವರುಷ ಪ್ರಕಟವಾಗುವ ತ್ರಿವೇಣಿ ಅವರ ಪುಸ್ತಕಕ್ಕೆ ಅಪಾರ ಜನಮನ್ನಣೆ ದೊರಕಿತು. ತ್ರಿವೇಣಿ ಎಂಬ ಹೆಸರು ಮನೆಮಾತಾಯಿತು. ಹೆಂಗಳೆಯರಿಗೆ ತ್ರಿವೇಣಿ ಅವರ ಪುಸ್ತಕಗಳು ಆಪ್ತವಾದವು.

ತ್ರಿವೇಣಿ ಅವರ ಬರಹಗಳಲ್ಲಿ ಗಮನಿಸಬಹುದಾದ ಮುಖ್ಯವಾದ ವಿಷಯವೆಂದರೆ ಮಾನವ ಮನಸ್ಸಿನ ಸೂಕ್ಷ್ಮತೆಗಳನ್ನು ಕತೆಯ ಮೂಲಕ ಎಳೆ ಎಳೆಯಾಗಿ ತೆರೆದಿಡುವ ಶೈಲಿ. ವಿಶೇಷವಾಗಿ ಮಹಿಳೆಯರ ಜೀವನ, ಅಂತರಂಗದ ಸಂಘರ್ಷ, ಮಮತೆ, ಕನಸುಗಳು, ಸಾಮಾಜಿಕ ಒತ್ತಡ ಮತ್ತು ಆತ್ಮಗೌರವಗಳ ಹೋರಾಟಗಳನ್ನು ಅವರು ಕಾದಂಬರಿಗಳಲ್ಲಿ ಕಾಣಬಹುದು. ಅವರ ಬರಹದ ಶೈಲಿ ಸರಳವಾದರೂ ಮನಮೋಹಕವಾಗಿರುತ್ತದೆ. ಹಲವು ಕಾದಂಬರಿಗಳು ಬೆಳ್ಳಿ ಪರದೆಯ ಮೇಲೆ ಚಲನಚಿತ್ರವಾಗಿದೆ.

ಶರಪಂಜರ ಎಂಬ ಕಾದಂಬರಿ ಮನೋವಿಜ್ಞಾನ



ಶೈಲಿಯ ಸರಳ ಬರಹದ ಕಾರಣದಿಂದ ಕನ್ನಡ ಸಾಹಿತ್ಯದಲ್ಲಿ ಹೊಸ ಅಲೆಯನ್ನು ಎಬ್ಬಿಸಿತು. ಕಾವೇರಿ ಪಾತ್ರ ಚಿತ್ರಣ ಶಾಶ್ವತವಾಗಿ ಮನದಲ್ಲಿ ಬೇರೂರಿದೆ. ಮಹಿಳೆಯ ಮನಸ್ಸಿನ ನಿಜವಾದ ಸ್ವರವನ್ನು ಕನ್ನಡ ಸಾಹಿತ್ಯಕ್ಕೆ ತಂದವರಲ್ಲಿ ತ್ರಿವೇಣಿಯವರ ಪಾತ್ರ ಸಾಕಷ್ಟಿದೆ. ತ್ರಿವೇಣಿ ಅವರ ಕಥೆಗಳಲ್ಲಿನ ಮಹಿಳಾ ಪಾತ್ರಗಳು ಕೇವಲ ಕುಟುಂಬಕ್ಕೆ ಸೀಮಿತವಾಗದೆ, ಅವರ ಆತ್ಮಗೌರವ, ಸ್ವಾತಂತ್ರ್ಯ ಮತ್ತು ಆತ್ಮಸಾಕ್ಷಾತ್ಕಾರದ ಬಗ್ಗೆ ಸೂಕ್ಷ್ಮವಾಗಿ ಧ್ವನಿ ಎತ್ತಿದಂತಿರುತ್ತದೆ.

1963 ರಲ್ಲಿ ಕೇವಲ 35ರ ಹರೆಯದಲ್ಲಿ ತ್ರಿವೇಣಿಯವರು ಇಹಲೋಕ ತ್ಯಜಿಸಿದರು. ಆದರೆ ಅವರ ಸಾಹಿತ್ಯ ಇಂದಿಗೂ ಜೀವಂತವಾಗಿದೆ. ಅವರ ಹಾದಿ ಇನ್ನೂ ಅನೇಕ ಗೃಹಿಣಿಯರಿಗೆ ಸ್ಫೂರ್ತಿಯಾಗಿದೆ. ಕಾದಂಬರಿಗಳು ಇಂದಿಗೂ ಹಸಿರಾಗಿವೆ.


– **ಆಶ್ರಿತಾ** ಕಿರಣ್

# ಕಸ ವಿಲೇವಾರಿ ಘಟಕ ಶೀಘ್ರ ಉದ್ಘಾಟನೆ

## ಅಂತಿಮ ಹಂತದಲ್ಲಿ ಕಾಮಗಾರಿ: ಸಕಲೇಶಪುರ ಪುರಸಭಾ ಅಧ್ಯಕ್ಷೆ ಜ್ಯೋತಿ ರಾಜಕುಮಾರ್ ಮಾಹಿತಿ

• ಪ್ರಜೋದಯ ವರದಿ

**ಸಕಲೇಶಪುರ:** ಪಟ್ಟಣದ ಮಳಲಿ ಗ್ರಾಮದಲ್ಲಿ ನಿರ್ಮಾಣಗೊಂಡಿರುವ ಕಸ ವಿಲೇವಾರಿ ಘಟಕದ ಕಾಮಗಾರಿಯು ಅಂತಿಮ ಹಂತದಲ್ಲಿದ್ದು, ಶೀಘ್ರದಲ್ಲೇ ಶಾಸಕರು ಮತ್ತು ಸಚಿವರ ಸಮ್ಮುಖದಲ್ಲಿ ಉದ್ಘಾಟನೆ ನೆರವೇರಲಿದೆ ಎಂದು ಪುರಸಭಾ ಅಧ್ಯಕ್ಷೆ ಜ್ಯೋತಿ ರಾಜಕುಮಾರ್ ಅವರು ತಿಳಿಸಿದರು.



ಪಟ್ಟಣದ ಪುರಭವನದ ಸಭಾಂಗಣದಲ್ಲಿ ನಡೆದ ತುರ್ತು ಸಭೆಯ ನಂತರ ಮಾತನಾಡಿದ ಅವರು, ಪಟ್ಟಣದ 23 ವಾರ್ಡ್‌ಗಳಿಂದ ಸಂಗ್ರಹವಾಗುವ ಕಸದ ವೈಜ್ಞಾನಿಕ ವಿಲೇವಾರಿಗಾಗಿ ಸಕಲೇಶಪುರ ಪುರಸಭೆ ದೀರ್ಘಕಾಲದಿಂದ ಪ್ರಯತ್ನ ನಡೆಸುತ್ತಿದೆ. ಕಳೆದ ಏಳೆಂಟು ವರ್ಷಗಳಿಂದ ಸದಸ್ಯರ ಸತತ ಹೋರಾಟ, ಯೋಜನೆ ಮತ್ತು ಸಹಕಾರದಿಂದ ಈ ಘಟಕ ಸಿದ್ಧವಾಗಿದೆ. ಜನರ ಆರೋಗ್ಯ, ಸ್ವಚ್ಚತೆ ಹಾಗೂ ಪರಿಸರದ ರಕ್ಷಣೆಗೆ ಈ ಘಟಕ ಮಹತ್ತರ ಪಾತ್ರ ವಹಿಸಲಿದೆ ಎಂದು ಹೇಳಿದರು.

ಇದೀಗ ಘಟಕದ ಎಲ್ಲಾ ಕಾಮಗಾರಿಗಳು ಪೂರ್ಣಗೊಂಡಿದ್ದು, ಉದ್ಘಾಟನೆಗಾಗಿ ದಿನಾಂಕ ನಿಗದಿಪಡಿಸಲು ಶಾಸಕರೊಂದಿಗೆ ಮಾತುಕತೆ ನಡೆದಿದೆ. ಶಾಶ್ವತ ಪರಿಹಾರಕ್ಕಾಗಿ ಕೈಗೊಂಡ ಪ್ರಯತ್ನ ಯಶಸ್ವಿಯಾಗಿದ್ದು, ಶೀಘ್ರದಲ್ಲೇ ಕಸ ವಿಲೇವಾರಿ ಕಾರ್ಯಾಚರಣೆ ಪ್ರಾರಂಭವಾಗಲಿದೆ ಎಂದು ಮಾಹಿತಿ ನೀಡಿದರು.

ಸಭೆಯಲ್ಲಿ ಮಾತನಾಡಿದ ಬಹುತೇಕ ಸದಸ್ಯರು, ''ಈ ಘಟಕವನ್ನು ಸಿದ್ದಪಡಿಸಲು ಹಲವು ವರ್ಷಗಳಿಂದ ಪುರಸಭೆ ಹಾಗೂ ಸದಸ್ಯರು ಶ್ರಮಿಸಿದ್ದಾರೆ. ಕೆಲವು ಸಂಘಟನೆಗಳು ಅಥವಾ ವ್ಯಕ್ತಿಗಳು ಈಗ ಬಂದು ಕ್ರೆಡಿಟ್ ಪಡೆಯಲು ಯತ್ನಿಸುವುದು ಸರಿಯಲ್ಲ. ಇದು ಸಂಪೂರ್ಣವಾಗಿ ಪುರಸಭೆ ಮತ್ತು ಸದಸ್ಯರ ಹೋರಾಟದ ಫಲ,'' ಎಂದು ಅಭಿಪ್ರಾಯಪಟ್ಟರಲ್ಲದೆ, ಈ ಯೋಜನೆ ಸಾರ್ವಜನಿಕರ ಹಿತಕ್ಕಾಗಿ ರೂಪಿತವಾಗಿದೆ. ಜನರ ಬೆಂಬಲದಿಂದ ಪುರಸಭೆ ಈ ಹಂತಕ್ಕೆ ತಲುಪಿದೆ. ಮುಂದಿನ ದಿನಗಳಲ್ಲಿ ಕಸದ ಸಮಸ್ಯೆಗೆ ಶಾಶ್ವತ ಪರಿಹಾರ ದೊರಕಲಿದೆ ಎಂದು ಹೇಳಿದರು.

ಕಸ ವಿಲೇವಾರಿ ಘಟಕವು ಉದ್ಘಾಟನೆಯವರೆಗೆ, ತಾತ್ಕಾಲಿಕವಾಗಿ ಘಟಕದಲ್ಲಿ ಒಂದು ಸ್ಮಾರಕ ಕಲ್ಲು ಪ್ರತಿಷ್ಠಾಪಿಸುವ ಮೂಲಕ ಸದಸ್ಯರ ಶ್ರಮಕ್ಕೆ ಗೌರವ ಸಲ್ಲಿಸಬೇಕೆಂದು ಸಭೆಯಲ್ಲಿದ್ದ ಎಲ್ಲಾ ಸದಸ್ಯರು ಅಧ್ಯಕ್ಷರನ್ನು ಒತ್ತಾಯಿಸಿದರು. ಇದಕ್ಕೆ ಪ್ರತಿಕ್ರಿಯಿಸಿದ ಅಧ್ಯಕ್ಷರು, ಅಧಿಕಾರಿಗಳಿಗೆ ಕೂಡಲೇ ಪ್ರೋಟೋಕಾಲ್ ಅನುಗುಣವಾಗಿ ಕಲ್ಲು ನಿರ್ಮಿಸಲು ಆದೇಶ ನೀಡಿದರು.

ಮಾಜಿ ಪುರಸಭಾ ಅಧ್ಯಕ್ಷ ಎಸ್.ಡಿ.ಆದರ್ಶ್ ಮಾತನಾಡಿ, ನೂತನ ಕಸ ವಿಲೇವಾರಿ ಘಟಕ ಉದ್ಘಾಟನೆ ಆಗುತ್ತಿರುವುದು ಸಂತೋಷಕರ ಸಂಗತಿ. ಆದರೆ ಘಟಕ ಪ್ರದೇಶದಲ್ಲಿರುವ ಸಾಮಗ್ರಿಗಳ ಭದ್ರತೆಗೆ ಹೆಚ್ಚಿನ ಗಮನ ಹರಿಸಬೇಕು ಎಂದು ಒತ್ತಾಯಿಸಿದರು.

ಪುರಸಭಾ ಮಾಜಿ ಉಪಾಧ್ಯಕ್ಷ ಮುಖೇಶ್ ಶೆಟ್ಟಿ ಮಾತನಾಡಿ, ಉಚ್ಚ ನ್ಯಾಯಾಲಯದ ಆದೇಶದ ಅನ್ವಯ ಎಲ್ಲಾ ಕಾಮಗಾರಿಗಳು ಪೂರ್ಣಗೊಂಡ ನಂತರವೇ ಕಸ ವಿಲೇವಾರಿ ಪ್ರಾರಂಭವಾಗಬೇಕು. ಈ ಹಿಂದಿನ ಅನಾಹುತಗಳು ಮರುಕಳಿಸದಂತೆ ವಿಶೇಷ ಜಾಗ್ರತೆ ವಹಿಸಬೇಕು ಎಂದು ಸೂಚಿಸಿದರು.

ಸಭೆಯಲ್ಲಿ ಉಪಾಧ್ಯಕ್ಷೆ ಜರೀನಾ, ಮುಖ್ಯಾಧಿಕಾರಿ ಮಹೇಶ್ವರಪ್ಪ, ಮಾಜಿ ಉಪಾಧ್ಯಕ್ಷರು, ಹಾಲಿ ಸದಸ್ಯರುಗಳು ಹಾಗೂ ಅಧಿಕಾರಿ ವರ್ಗದವರು ಉಪಸ್ಥಿತರಿದ್ದರು

## ದಸರಾ ಚಲನಚಿತ್ರೋತ್ಸವಕ್ಕೆ ಹಾಸನದ ಮಾರ್ವೆನ್ ಕಿರುಚಿತ್ರ

• ಪ್ರಜೋದಯ ವರದಿ

**ಹಾಸನ:** ದಸರಾ ಚಲನಚಿತ್ರೋತ್ಸವ 2025 ಅಂಗವಾಗಿ ಕಿರು ಚಿತ್ರ ಸ್ಪರ್ಧೆ ಆಯೋಜಿಸಲಾಗಿದೆ.




ಸ್ಪರ್ಧೆಗೆ 34 ಸಿನಿಮಾ ನೋಂದಣಿಗೊಂಡು ಎಲ್ಲಾ ಚಿತ್ರಗಳು ಒಂದಕ್ಕಿಂತ ಒಂದು ವಿಭಿನ್ನ ರೀತಿಯ ಕಥಾವಸ್ತು ಹೊಂದಿವೆ. ಕಿರುಚಿತ್ರ ಸ್ಪರ್ಧೆಯಲ್ಲಿ ಆಯ್ಕೆಗೊಂಡ ಚಿತ್ರಗಳನ್ನು ಐನಾಕ್ಸ್ ಚಿತ್ರಮಂದಿರದಲ್ಲಿ ಪ್ರದರ್ಶನ ಮಾಡಲಾಗುವುದು. ಹಾಸನದ ವೆನ್ಚರ್ ಮೂವೀಸ್ ನಿರ್ಮಾಣದಲ್ಲಿ 150+ ರಾಷ್ಟ್ರ ಹಾಗೂ ಅಂತಾರಾಷ್ಟ್ರೀಯ ಪ್ರಶಸ್ತಿ ಪಡೆದ ತ್ರಿಕಾಲಂ ಕಿರುಚಿತ್ರದ ನಿರ್ದೇಶಕ ಹಾಗೂ ಸಂಕಲನಕಾರ ಜಿಲ್ಲೆಯ ಸ್ಟ್ಯಾನಿ ಜಾಯ್ಸನ್ ಅವರಿಂದ ಮತ್ತೊಂದು ಕನ್ನಡ ಕಿರುಚಿತ್ರ ಮಾರ್ವೆನ್ ಆಯ್ಕೆಯಾಗಿದೆ.

ತಾರಾಂಗಣದಲ್ಲಿ ನಾಗರಾಜ್ ಭಂಡಾರಿ, ಪೂಜಾ ರಘುನಂದನ್, ದೇವರಾಜ್, ವಿನಾಯಕ್, ಪ್ರದೀಪ್ ರಂಗಾಯಣ ಹಾಗೂ ಮತ್ತಿತರರು ನಟಿಸಿದ್ದಾರೆ. ಎಲಿಜಬೆತ್ ರಾಣಿ ಹಾಗೂ ಗುರುಪ್ರಸಾದ್ ಹಂಡ್ರಂಗಿ ಚಿತ್ರ ನಿರ್ಮಿಸಿದ್ದು, ಹಾಸನ್ ನ್ಯೂಸ್ ಮತ್ತು ತಂಡ ಸಹ ನಿರ್ಮಾಪಕ ಜವಾಬ್ದಾರಿ ಹೊತ್ತಿದೆ. ಜೀವನ್‌ರತ್ನ ಛಾಯಾಗ್ರಹಣವಿದ್ದು, ಸೌಂಡ್ ಮಾಸ್ಟರಿಂಗ್ ಶಕೀಲ್ ಅಹಮದ್, ಕಲರಿಸ್ಟ್ ಆಗಿ ಸ್ಟೀವನ್ ಸತೀಶ್, ಹಾಗೂ ಯಶ್ವಂತ್, ಪ್ರಶಾಂತ್, ಅರ್ಜುನ್, ಶಮಂತ್ ಸಹಾಯಕ ನಿರ್ದೇಶಕರಾಗಿ ಕೆಲಸ ಮಾಡಿದ್ದಾರೆ.

**ಆಯ್ಕೆಯಾದ ಚಿತ್ರಗಳು:**

ಕಿರುಚಿತ್ರ ಸ್ಪರ್ಧೆಯಲ್ಲಿ ತೀರ್ಪುಗಾರರಾಗಿ ಶಿವಮೊಗ್ಗದ ಶ್ರೀಮತಿ ಇಂದಿರಾಗಾಂಧಿ ಮಹಿಳಾ ಪ್ರಥಮ ದರ್ಜೆ ಕಾಲೇಜಿನ ಪ್ರಾಧ್ಯಾಪಕರಾದ ನರೇಂದ್ರ ಕುಳಗಟ್ಟೆ, ಜಯಚಾಮರಾಜೇಂದ್ರ ದೃಶ್ಯ ಕಲಾ ಕಾಲೇಜಿನ ಪ್ರಾಧ್ಯಾಪಕರಾದ ಡಾ.ಚರಿತ, ಮೈಸೂರು ವಿಶ್ವವಿದ್ಯಾನಿಲಯದ ಇಎಂಆರ್‌ಸಿ ತಂತ್ರಜ್ಞರಾದ ಗೋಪಿನಾಥ್, ಬೆಂಗಳೂರಿನ ಸೌಂಡ್ ಇಂಜಿನಿಯರ್ ಅನಿಲ್ ಕುಮಾರ್ ಅವರು ಭಾಗವಹಿಸಿದ್ದರು.

ಹಿಂಬಾಲಿಸಿ, ಆ ಕ್ಷಣ, ಅದೃಷ್ಟ ಲಕ್ಷ್ಮೀ, ಮಾರ್ವೆನ್, ನನ್ನ ಪ್ರಪಂಚ, ಹಬ್ಬದ ಹಸಿವು, ಕಾಲಾಂತರ, ಎಡ್ರ್ಪಾಯಿ, ಲಕುಮಿ ಮತ್ತು ಸೆಕ್ಸ್ ಟಾಯ್ ಚಿತ್ರಗಳು ಆಯ್ಕೆಯಾಗಿವೆ.

## ವಿಷ್ಣುವರ್ಧನ್‌ಗೆ ಕರ್ನಾಟಕ ರತ್ನ ಪ್ರಶಸ್ತಿ ನೀಡಲು ಮನವಿ

• ಪ್ರಜೋದಯ ವರದಿ

**ಬೆಂಗಳೂರು:** ಕನ್ನಡ ಚಿತ್ರರಂಗ ಕಂಡ ಶ್ರೇಷ್ಠ ನಟ ಡಾ. ವಿಷ್ಣುವರ್ಧನ್ ಅವರಿಗೆ ಮರಣೋತ್ತರ 'ಕರ್ನಾಟಕ ರತ್ನ' ಪ್ರಶಸ್ತಿ ನೀಡುವಂತೆ ಕನ್ನಡ ಚಿತ್ರರಂಗದ ಹಿರಿಯ ನಟಿಯರಾದ ಜಯಮಾಲ, ಶ್ರುತಿ ಮತ್ತು ಮಾಳವಿಕ ಅವಿನಾಶ್ ಅವರು ಮಂಗಳವಾರ ಬಗ್ಗೆ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರನ್ನು ಭೇಟಿ ಮಾಡಿ, ಮನವಿ ಮಾಡಿದ್ದಾರೆ.

ಇದೇ ವೇಳೆ ಇತ್ತೀಚೆಗೆ ನಿಧನರಾದ ಪಂಚಭಾಷಾ ನಟಿ ಬಿ. ಸರೋಜಾ ದೇವಿ ಅವರ ಹೆಸರನ್ನು ಅವರು ವಾಸವಿದ್ದ ಮಲ್ಲೇಶ್ವರಂನ ರಸ್ತೆಗೆ ನಾಮಕರಣ ಮಾಡುವಂತೆಯೂ ಅವರು ಮನವಿ ಮಾಡಿದರು ಎನ್ನಲಾಗಿದೆ.

## ಭಾರತದ ಸಣ್ಣ ಚಿಪ್ ಜಗತ್ತನ್ನೇ ಬದಲಿಸಲಿದೆ

• ಪ್ರಜೋದಯ ವರದಿ

**ನವದೆಹಲಿ:** ಭಾರತದ ಮೇಲೆ ಅಮೆರಿಕ ವಿಧಿಸಿರುವ ವ್ಯಾಪಕ ಸುಂಕದಿಂದ ಆರ್ಥಿಕ ಸ್ವಾರ್ಥ ಸೃಷ್ಟಿಸಿದ ಸವಾಲುಗಳ ಹೊರತಾಗಿಯೂ, ಭಾರತದ ಜಿಡಿಪಿ ಶೇಕಡಾ 7.8 ರಷ್ಟು ಬೆಳವಣಿಗೆಯನ್ನು ಸಾಧಿಸಿದೆ ಎಂದು ಪ್ರಧಾನಿ ನರೇಂದ್ರ ಮೋದಿ ವಿಶ್ವಾಸದಿಂದ ನುಡಿದಿದ್ದಾರೆ.

ಸೆಮಿಕಾನ್ ಇಂಡಿಯಾ 2025 ರ ಉದ್ಘಾಟನಾ ಕಾರ್ಯಕ್ರಮದಲ್ಲಿ ಮಾತನಾಡಿದ ಮೋದಿ, ಕೆಲವೇ ದಿನಗಳ ಹಿಂದೆ, ಈ ವರ್ಷದ ಮೊದಲ ತ್ರೈಮಾಸಿಕದ ಜಿಡಿಪಿ ಸಂಖ್ಯೆಗಳು ಬಂದಿವೆ. ಮತ್ತೊಮ್ಮೆ, ಭಾರತವು ಪ್ರತಿ ನಿರೀಕ್ಷೆ ಮೌಲ್ಯಮಾಪನಕ್ಕಿಂತ ಉತ್ತಮವಾಗಿ ಕಾರ್ಯ ನಿರ್ವಹಿಸಿದೆ. ವಿಶ್ವದ ಆರ್ಥಿಕತೆಯೊಳಗೆ ಇಂದು ಕಳವಳ ಗೊಂದಲಗಳಿರುವಾಗ, ಆರ್ಥಿಕ ಸ್ವಾರ್ಥದಿಂದ ಸೃಷ್ಟಿಯಾದ ಹಲವು ಸವಾಲುಗಳಿವೆ.



ಇಂತಹ ಪರಿಸರ ಮಧ್ಯೆ, ಭಾರತವು ಶೇಕಡಾ 7.8 ರಷ್ಟು ಬೆಳವಣಿಗೆಯನ್ನು ಸಾಧಿಸಿದೆ ಎಂದು ಹೇಳಿದರು.

**ಸೆಮಿಕಂಡಕ್ಟರ್:**

ಹೊಸ ಜಗತ್ತಿನಲ್ಲಿ ಅರೆವಾಹಕಗಳ ಪ್ರಾಮುಖ್ಯತೆ ಮತ್ತು ಸಾಮರ್ಥ್ಯದ ಬಗ್ಗೆ ಒತ್ತಿ ಹೇಳಿದ ಪ್ರಧಾನಿ, ಅರೆವಾಹಕ ಜಗತ್ತಿನಲ್ಲಿ ಇಂಧನವನ್ನು ಕಪ್ಪು ಚಿನ್ನ ಎಂದು ಹೇಳಲಾಗುತ್ತದೆ, ಚಿಪ್‌ಗಳು ಡಿಜಿಟಲ್ ವಜ್ರಗಳಾಗಿವೆ. ನಮ್ಮ ಕಳೆದ ಶತಮಾನವು ತೈಲದಿಂದ ರೂಪುಗೊಂಡಿತು. ಇಂದಿನ 21 ನೇ ಶತಮಾನದ ಶಕ್ತಿಯು ಸಣ್ಣ ಚಿಪ್‌ಗೆ ಸೀಮಿತವಾಗಿದೆ. ಈ ಚಿಪ್‌ಗಳು ಪ್ರಪಂಚದ ಅಭಿವೃದ್ಧಿಯನ್ನು ವೇಗ ಗೊಳಿಸುವ ಶಕ್ತಿಯನ್ನು ಹೊಂದಿದೆ ಎಂದಿದೆ.

**ಸೆಮಿಕಾನ್ ಇಂಡಿಯಾ**

2021 ರಲ್ಲಿ, ನಾವು ಸೆಮಿಕಾನ್ ಇಂಡಿಯಾ ಕಾರ್ಯಕ್ರಮವನ್ನು ಪ್ರಾರಂಭಿಸಿದೆವು. 2023 ರ ಹೊತ್ತಿಗೆ, ಭಾರತದ ಮೊದಲ ಸೆಮಿಕಂಡಕ್ಟರ್ ಘಟಕಕ್ಕೆ ಅನುಮೋದನೆ ನೀಡಲಾಯಿತು. 2024 ರಲ್ಲಿ, ನಾವು ಹೆಚ್ಚುವರಿ ಸ್ಥಾವರಕ್ಕೆ ಅನುಮೋದನೆ ನೀಡಿದೆವು. 2025 ರಲ್ಲಿ, ನಾವು 5 ಹೆಚ್ಚುವರಿ ಯೋಜನೆಗೆ ಅನುಮೋದನೆ ನೀಡಿದ್ದೇವೆ. ಒಟ್ಟಾರೆಯಾಗಿ, ಹತ್ತು ಸೆಮಿಕಂಡಕ್ಟರ್ ಯೋಜನೆಗಳಲ್ಲಿ 1.5 ಲಕ್ಷ ಕೋಟಿ ರೂಪಾಯಿಗಿಂತಲೂ ಹೆಚ್ಚಿನ ಹೂಡಿಕೆ ಮಾಡಲಾಗುತ್ತಿದೆ ಎಂದರು.

## ಗ್ರಾಮೀಣ ರಸ್ತೆಗಳ ಅಭಿವೃದ್ಧಿಗೆ 1.10 ಕೋ.ರೂ. ಬಿಡುಗಡೆ

### ಗುಣಮಟ್ಟದ ಕಾಮಗಾರಿಗೆ ಸೂಚನೆ

• ಪ್ರಜೋದಯ ವರದಿ

**ಅರಕಲಗೂಡು:** ತಾಲ್ಲೂಕಿನ ಗ್ರಾಮೀಣ ಜನವಸತಿ ಮತ್ತು ಸಂಪರ್ಕ ರಸ್ತೆಗಳ ಅಭಿವೃದ್ಧಿಗೆ ಒತ್ತು ನೀಡಲಾಗುತ್ತಿದೆ ಎಂದು ಶಾಸಕಎ.ಮಂಜು ತಿಳಿಸಿದರು.

ಮಂಗಳವಾರ ತಾಲ್ಲೂಕಿನ ವಿವಿಧ ಗ್ರಾಮಗಳಲ್ಲಿ ಒಂದು ಕೋಟಿ 10 ಲಕ್ಷ ರೂ ವೆಚ್ಚದಲ್ಲಿ ರಸ್ತೆ ಅಭಿವೃದ್ಧಿಗೆ ಭೂಮಿ ಪೂಜೆ ನೆರವೇರಿಸಿ ಮಾತನಾಡಿದ ಅವರು, ತಾಲ್ಲೂಕಿನ ಮುಂಡಗೋಡು ಕೊಪ್ಪಲು ಗ್ರಾಮದ ರಸ್ತೆಗೆ 20 ಲಕ್ಷ ರೂ. ಬಿಡುಗಡೆಯಾಗಿದೆ ಎಂದರು.



ವಡ್ಡರಹಳ್ಳಿ ಗ್ರಾಮದ ರಸ್ತೆಗೆ 25 ಲಕ್ಷ,ಹೆಬ್ಬಾಲೆ ಕೊಪ್ಪಲು ಗ್ರಾಮದ ರಸ್ತೆಗೆ 25 ಲಕ್ಷ,ಉಪ್ಪಾರ ಕೊಪ್ಪಲು ಗ್ರಾಮದ ರಸ್ತೆಗೆ 20 ಲಕ್ಷ ರೂ. ಹಾಗೂ ನೈಗೆರೆ ಗ್ರಾಮದ ರಸ್ತೆಗೆ 20 ಲಕ್ಷಗಳನ್ನು ನೀಡಲಾಗಿದೆ. ಈ ರಸ್ತೆಗಳು ಸಂಪೂರ್ಣವಾಗಿ ಕಾಂಕ್ರಿಟ್‌ನಿಂದ ಕೂಡಿದ್ದು, ಗುಣಮಟ್ಟದಿಂದ ನಿರ್ವಹಿಸಬೇಕೆಂದು ಗುತ್ತಿಗೆದಾರರಿಗೆ ಸೂಚನೆ ನೀಡಿದರು.

ಸರ್ಕಾರದಿಂದ ಅನುದಾನ ಬಿಡುಗಡೆಯಾಗುತ್ತಿದ್ದು, ಮುಂದಿನ ದಿನಗಳಲ್ಲಿ ಬಿಡುಗಡೆಯಾಗುವ ಅನುದಾನ ನೋಡಿ ಅಗತ್ಯವಿರುವ ಗ್ರಾಮಗಳ ಜನವಸತಿ ಪ್ರದೇಶದ ರಸ್ತೆ, ಚರಂಡಿ ನಿರ್ಮಾಣಕ್ಕೆ ಮೊದಲ ಆದ್ಯತೆ ನೀಡಲಾಗುವುದು. ಅಲ್ಲದೆ ಜಿ.ಪಂ., ಪಿಡಬ್ಲೂಡಿ ವತಿಯಿಂದಲೂ ಕೂಡ ರಸ್ತೆ ಅಭಿವೃದ್ಧಿಗೆ ಯೋಜನೆ ರೂಪಿಸಲಾಗಿದೆ ಎಂದು ಅವರು ಮಾಹಿತಿ ನೀಡಿದರು.

ಈ ಸಂದರ್ಭದಲ್ಲಿ ಮಾಜಿ ತಾ.ಪಂ.ಅಧ್ಯಕ್ಷ ನರಸೇಗೌಡ, ಮುಖಂಡರಾದ ಗಾಂಧಿನಗರ ದಿವಾಕರ್, ಕೃಷ್ಣೇಗೌಡ, ಮುತ್ತಿಗೆ ರಾಜೇಗೌಡ, ಕಾಕೋಡನ ಹಳ್ಳಿ ಮಂಜು ಹಾಗೂ ಇನ್ನಿತರರು ಹಾಜರಿದ್ದರು.

## ಆಲೂಗಡ್ಡೆ ಕುಡಿ ಕಾಂಡ ತಂತ್ರಜ್ಞಾನದ ಮಾಹಿತಿ

• ಪ್ರಜೋದಯ ವರದಿ

**ಹಾಸನ:** ಕಾರೇಕೆರೆ ಕೃಷಿ ಮಹಾವಿದ್ಯಾಲಯದ ಅಂತಿಮ ವರ್ಷದ ಜೈವಿಕ ತಂತ್ರಜ್ಞಾನ ವಿದ್ಯಾರ್ಥಿಗಳು ತಾಲ್ಲೂಕಿನ ಹಂಪನಹಳ್ಳಿ ಗ್ರಾಮದಲ್ಲಿ ಹಮ್ಮಿಕೊಂಡಿದ್ದ ಗ್ರಾಮೀಣ ಕೃಷಿ ಕಾರ್ಯಾನುಭವ ಶಿಬಿರದಲ್ಲಿ ರೈತರಿಗೆ ಆಲೂಗಡ್ಡೆ ಕುಡಿ ಕಾಂಡ ತಂತ್ರಜ್ಞಾನ ಕುರಿತು ಅರಿವು ಮೂಡಿಸಲಾಯಿತು.



ಸಸ್ಯ ಜೈವಿಕ ತಂತ್ರಜ್ಞಾನ ವಿಭಾಗದ ಸಹಾಯಕ ಪ್ರಾಧ್ಯಾಪಕಿ ಡಾ.ಎಸ್. ಸ್ಮಿತಾ ಅವರು, ಆಲೂಗಡ್ಡೆ ಬೆಳೆ ಉತ್ಪಾದನೆಯಲ್ಲಿ ತಂತ್ರಜ್ಞಾನ ನೀಡುವ ಮಹತ್ವವನ್ನು ವಿವರಿಸಿದರು. ಇದೇ ವೇಳೆ ಕೋಕೋ ಪಿಟ್‌ನಲ್ಲಿ ಬೇರುಬಿಟ್ಟ ಕುಡಿ ಕಾಂಡ ಸಸಿಗಳನ್ನು ನಂತರ ಭೂಮಿಗೆ ನಾಟಿ ಮಾಡುವ ವಿಧಾನವನ್ನು ರೈತರಿಗೆ ತಿಳಿಸಲಾಯಿತು.

ರೋಗರಹಿತ ಆಲೂಗಡ್ಡೆ ಸಸಿಗಳನ್ನು ಪ್ರಯೋಗಾಲಯದಲ್ಲಿ ಅಂಗಾಂಶ ಕೃಷಿಯ ಮೂಲಕ ಅಭಿವೃದ್ಧಿಪಡಿಸಲಾಗುತ್ತಿದ್ದು, ಇವುಗಳನ್ನು ಕೋಕೋ ಪಿಟ್‌ನಲ್ಲಿ ತಾಯಿ ಸಸ್ಯಗಳಾಗಿ ಬಳಸಬಹುದಾಗಿದೆ. 6 ವಾರಗಳಲ್ಲಿ ಒಂದೇ ತಾಯಿ ಸಸಿಯಿಂದ ಎಂಟು ಪಟ್ಟು ಹೊಸ ಸಸಿಗಳ ಬೆಳವಣಿಗೆ ಸಾಧ್ಯವಾಗುವುದನ್ನು ವಿದ್ಯಾರ್ಥಿಗಳು ಪ್ರಾಯೋಗಿಕವಾಗಿ ಪ್ರದರ್ಶಿಸಿದರು.

## ಸೆ.9 ರಂದು ಅಂಚೆ ಅದಾಲತ್

ಹಾಸನ: ಸಾರ್ವಜನಿಕರು ಅಂಚೆ ವ್ಯವಸ್ಥೆಯ ಕುಂದು ಕೊರತೆಗಳ ಬಗ್ಗೆ ತಮ್ಮ ಅಹವಾಲುಗಳನ್ನು ನೀಡಲು ಅಂಚೆ ಅದಾಲತ್‌ನ್ನು ಸೆ.9 ರಂದು ಬೆಳಗ್ಗೆ 11 ಗಂಟೆಗೆ ಅಂಚೆ ಅಧೀಕ್ಷಕರ ಕಚೇರಿ, ಹಾಸನದಲ್ಲಿ ಏರ್ಪಡಿಸಲಾಗಿದೆ.

ಸಾರ್ವಜನಿಕರು ಅಂಚೆ ಸೇವೆಯ ಬಗ್ಗೆ ಕುಂದು ಕೊರತೆಗಳು ಏನಾದರು ಇದ್ದಲ್ಲಿ ಈ ಕಚೇರಿಗೆ ಬೆಳಿಗ್ಗೆ 11 ಗಂಟೆಯ ಒಳಗೆ ಸಲ್ಲಿಸಲು ಹಾಸನ ವಿಭಾಗದ ಅಂಚೆ ಅಧೀಕ್ಷಕರು ತಿಳಿಸಿದ್ದಾರೆ.

## ಹುಲ್ಲೇನಹಳ್ಳಿ ಕೆರೆಗೆ ಸೆ.20 ರೊಳಗೆ ನೀರು: ಶಾಸಕ ಸಿ.ಎನ್.ಬಾಲಕೃಷ್ಣ

• ಪ್ರಜೋದಯ ವರದಿ

**ಚನ್ನರಾಯಪಟ್ಟಣ:** ರಾಯಸಮುದ್ರ ಕೆರೆಯಿಂದ ಪೈಪ್‌ಲೈನ್ ಮೂಲಕ ಹುಲ್ಲೇನಹಳ್ಳಿ ಕೆರೆಗೆ ಸೆ.20 ರೊಳಗೆ ನೀರು ಹರಿಸಲಾಗುತ್ತದೆ ಎಂದು ಶಾಸಕ ಸಿ.ಎನ್.ಬಾಲಕೃಷ್ಣ ಹೇಳಿದರು.



ತಾಲ್ಲೂಕಿನ ಹುಲ್ಲೇನಹಳ್ಳಿಯ ಆರೋಗ್ಯ ಇಲಾಖೆ ವತಿಯಿಂದ ಸುಮಾರು 65 ಲಕ್ಷ ರೂ. ವೆಚ್ಚದ ಆರೋಗ್ಯ ಮತ್ತು ಸ್ವಾಸ್ಥ್ಯ ಕೇಂದ್ರಕ್ಕೆ ಭೂಮಿ ಪೂಜೆ ನೆರವೇರಿಸಿ ಮಾತನಾಡಿದ ಅವರು, ಗ್ರಾಮದ ಕೆರೆಗೆ ರಾಯಸಮುದ್ರ ಕಾವಲು ಕೆರೆಯಿಂದ ಪೈಪ್ ಲೈನ್ ಅಳವಡಿಕೆ ಮಾಡಿ ನೀರೆತ್ತುವ ಮೋಟಾರ್ ಸಹಾಯದಿಂದ ಕೆರೆಗೆ ನೀರು ಹರಿಸಲು ಈಗಾಗಲೇ ಶೇ.90ರಷ್ಟು ಕಾಮಗಾರಿ ಪೂರ್ಣಗೊಂಡಿದ್ದು ಇನ್ನು ಕೇವಲ 60 ಮೀಟರ್ ಪೈಪ್ ಲೈನ್ ಅಳವಡಿಕೆ ಹಾಗೂ ನೀರೆತ್ತುವ ಮೋಟಾರ್ ಶೀಘ್ರ ಅಳವಡಿಸಿ ಸೆ.20 ರೊಳಗೆ ಕೆರೆಗೆ ನೀರು ಹರಿಸಲು ಕ್ರಮ ಕೈಗೊಳ್ಳಲಾಗುತ್ತದೆ. ಇದರ ಜೊತೆಗೆ ತಿಪಟೂರು- ನುಗ್ಗೇಹಳ್ಳಿ ಮುಖ್ಯ ರಸ್ತೆಯಿಂದ ಗ್ರಾಮದ ವರೆಗಿನ ರಸ್ತೆ ಅಭಿವೃದ್ಧಿಗೆ ಶೀಘ್ರ ಅನುದಾನ ನೀಡಲಾಗುತ್ತದೆ ಎಂದರು.

ಗ್ರಾಮದಲ್ಲಿ ನಿರ್ಮಾಣವಾಗುತ್ತಿರುವ ಅಂಬೇಡ್ಕರ್ ಸಮುದಾಯ ಭವನದ ಕಾಮಗಾರಿ ಮುಗಿಯುವ ಹಂತದಲ್ಲಿದ್ದು ಸಮುದಾಯ ಭವನದ ಸುತ್ತ ಕಾಂಪೌಂಡ್ ಹಾಗೂ ವಿದ್ಯುತ್ ಸಂಪರ್ಕದ ಕಾಮಗಾರಿ ಪೂರ್ಣಗೊಂಡ ನಂತರಉದ್ಘಾಟನೆಗೆ ದಿನಾಂಕ ನಿಗದಿ ಮಾಡಲಾಗುತ್ತದೆ ಜೊತೆಗೆ ಗ್ರಾಮದ ವಿವಿಧ ಬಡಾವಣೆಗಳಲ್ಲಿ ಕಾಂಕ್ರೀಟ್ ರಸ್ತೆ ಒಳಚರಂಡಿ ನಿರ್ಮಾಣಕ್ಕೆ ಮುಂಬರುವ ಆರ್ಥಿಕ ವರ್ಷದಲ್ಲಿ ಅನುದಾನ ಒದಗಿಸುವುದಾಗಿ ಭರವಸೆ ನೀಡಿದರು.

ಜಿಲ್ಲಾ ಯಾದವ ಸಂಘದ ಜಿಲ್ಲಾ ಮಾಜಿ ಅಧ್ಯಕ್ಷ ಹುಲ್ಲೇನಹಳ್ಳಿ ನಾರಾಯಣ ಮಾತನಾಡಿ, ಗ್ರಾಮದ ಕೆರೆಯನ್ನು ತುಂಬಿಸಲು ಕ್ಷೇತ್ರದ ಶಾಸಕ ಸಿ.ಎನ್.ಬಾಲಕೃಷ್ಣ ಅವರು ವೈಯಕ್ತಿಕವಾಗಿ ಹಣ ಖರ್ಚು ಮಾಡಿ ಪೈಪು ಹಾಗೂ ಟಿಸಿ ಹಾಗೂ ಮೋಟಾರ್ ಕೊಡಿಸಿದ್ದಾರೆ. ಇದರಿಂದ ಅವರು ಕೊಟ್ಟ ಮಾತಿನಂತೆ ನಡೆದುಕೊಂಡಿದ್ದಾರೆ, ಮುಂಬರುವ ಚುನಾವಣೆಗಳಲ್ಲಿ ಅವರ ಕೈ ಬಲಪಡಿಸುವಂತೆ ಗ್ರಾಮಸ್ಥರಲ್ಲಿ ಮನವಿ ಮಾಡಿದರು.

ಆರೋಗ್ಯ ಇಲಾಖೆ ಮುಖ್ಯ ಇಂಜಿನಿಯರ್ ರಶ್ಮಿ, ಸಹಾಯಕ ಇಂಜಿನಿಯರ್ ಪುಟ್ಟಸ್ವಾಮಿ, ಗುತ್ತಿಗೆದಾರ ದಿವಾಕರ್, ಗ್ರಾಪಂ ಅಧ್ಯಕ್ಷ ಎನ್.ಎಸ್.ಮಂಜುನಾಥ್, ಗ್ರಾಪಂ ಸದಸ್ಯೆ ಕಮಲಾಕ್ಷಿ ಗಿರೀಶ್, ಮುಖಂಡರಾದ ಎಚ್.ಎಂ.ನಟರಾಜ್, ದೊರೆಸ್ವಾಮಿ, ತೋಟಿ ನಾಗರಾಜ್, ಹುಲಿಕೆರೆ ಸಂಪತ್‌ಕುಮಾರ್, ಜಯಲಿಂಗೇಗೌಡ, ಪುಟ್ಟಸ್ವಾಮಿ, ಕುಳ್ಳೇಗೌಡ, ದುಗ್ಗೇನಹಳ್ಳಿ ವೀರೇಶ್, ಎಂ.ಎಸ್. ಸುರೇಶ್, ಗೋಪಾಲ, ರಾಮಕೃಷ್ಣ, ಧರ್ಮರಾಜ್, ರಂಗಪ್ಪ, ಇಂದ್ರೇಶ್, ರಂಗಸ್ವಾಮಿ, ಭರತ್ ಯಾದವ್, ಅಮಾಸಯ್ಯ, ಲೋಕೇಶ್, ತಿಮ್ಮಯ್ಯ, ಗಿರೀಶ್, ಒಂಟಿ ಮಾವಿನಹಳ್ಳಿ ಜಯರಾಮ್, ರಂಗಯ್ಯ, ಎಚ್.ಆರ್. ರವಿ, ವಸಂತ ಸುರೇಶ್, ಯೋಗೇಶ್, ಲೋಕೇಶ್ ಸೊಂಬೇಗೌಡ, ರಾಜೇಶ್, ರಂಗಸ್ವಾಮಿ, ಬಸವರಾಜು, ರಾಮಲಿಂಗಯ್ಯ ಇನ್ನಿತರರು ಹಾಜರಿದ್ದರು.

## ವಿದ್ಯಾರ್ಥಿಗಳಲ್ಲಿ ಕುಗ್ಗುತ್ತಿರುವ ಕ್ರೀಡಾ ಆಸಕ್ತಿ: ಶಾಸಕ ಮಂಜು ವಿಷಾದ

• ಪ್ರಜೋದಯ ವರದಿ

**ಸಕಲೇಶಪುರ:** ಪಠ್ಯದಷ್ಟೇ ಕ್ರೀಡೆಗೂ ಮಹತ್ವ ನೀಡಬೇಕು ಎಂಬ ಮಾತು ಕ್ರೀಡಾಕೂಟಗಳ ಭಾಷಣಕ್ಕೆ ಸೀಮಿತವಾಗಿದೆ ಎಂದು ಶಾಸಕ ಸಿಮೆಂಟ್ ಮಂಜು ಬೇಸರ ವ್ಯಕ್ತಪಡಿಸಿದರು.



ಮಂಗಳವಾರ ತಾಲ್ಲೂಕಿನ ಮೇಲಳ್ಳಿ ದೀಣೆ, ಹಾರ್ಲೆ ಕೂಡಿಗೆಯಲ್ಲಿ ಶಾಲಾ ಶಿಕ್ಷಣ ಹಾಗೂ ಸಾಕ್ಷರತಾ ಇಲಾಖೆ ಮತ್ತು ಸರ್ಕಾರಿ ಹಿರಿಯ ಪ್ರಾಥಮಿಕ ಪಾಠಶಾಲೆ ಗಾಣದಹೊಳೆ ಇವರ ಸಹಯೋಗದೊಂದಿಗೆ ನಡೆದ ಹಾನುಬಾಳು ಹೋಬಳಿ ಪ್ರಾಥಮಿಕ ಶಾಲಾ ಕ್ರೀಡಾಕೂಟವನ್ನು ಉದ್ಘಾಟಿಸಿ ಮಾತನಾಡಿದ ಅವರು, ಕ್ರೀಡಾ ಚಟುವಟಿಕೆಗಳಿಗೆ ದೈಹಿಕ ಶಿಕ್ಷಕರಿಲ್ಲದೆ ವಿದ್ಯಾರ್ಥಿಗಳ ಕ್ರೀಡಾ ಸ್ಫೂರ್ತಿ ಸಂಪೂರ್ಣ ಮೃಗಮರೀಚಿಕೆಯಾಗಿದ್ದು, ವರ್ಷದಿಂದ ವರ್ಷಕ್ಕೆ ವಿದ್ಯಾರ್ಥಿಗಳಲ್ಲಿ ಕ್ರೀಡಾ ಆಸಕ್ತಿ ಕಡಿಮೆಯಾಗುತ್ತಿದೆ ಎಂದು ಅವರು ವಿಷಾದಿಸಿದರು.

ಖಾಸಗಿ ಶಾಲೆಗಳಲ್ಲಿ ದೈಹಿಕ ಶಿಕ್ಷಣ ಶಿಕ್ಷಕರು ಕ್ರೀಡಾಕೂಟಕ್ಕೆ ವಿದ್ಯಾರ್ಥಿಗಳಿಗೆ ತರಬೇತಿ ನೀಡುವುದರಿಂದ ಪ್ರಶಸ್ತಿಗಳನ್ನು ಮುಡಿಗೇರಿಸಿಕೊಳ್ಳುತ್ತಿದ್ದಾರೆ. ಆದರೆ ಸರ್ಕಾರಿ ಶಾಲೆಗಳಲ್ಲಿ ದೈಹಿಕ ಶಿಕ್ಷಣ ಶಿಕ್ಷಕರ ಕೊರತೆಯಿಂದ ಗ್ರಾಮೀಣ ಪ್ರದೇಶದ ವಿದ್ಯಾರ್ಥಿಗಳು ತಮ್ಮ ಪ್ರತಿಭೆಯನ್ನು ಸೂಕ್ತ ತರಬೇತಿ ಸಿಗದೇ ವಂಚಿತರಾಗುತ್ತಿದ್ದಾರೆ. ಆದ್ದರಿಂದ ಸರ್ಕಾರ ಕೂಡಲೇ ಸರ್ಕಾರಿ ಶಾಲೆಗಳಲ್ಲಿನ ಖಾಲಿ ಇರುವ ದೈಹಿಕ ಶಿಕ್ಷಕರ ಹುದ್ದೆಗಳನ್ನು ಭರ್ತಿ ಮಾಡಿ ಕೊರತೆಯನ್ನು ನೀಗಿಸಬೇಕು ಎಂದು ಅವರು ಆಗ್ರಹಿಸಿದರು.

ಭೂಮಿಗೆ ರಾಸಾಯನಿಕಗಳನ್ನು ಸೇರಿಸುತ್ತಿರುವುದರಿಂದ ನಾವು ಸೇವಿಸುತ್ತಿರುವ ಎಲ್ಲ ಆಹಾರ ಪದಾರ್ಥಗಳೂ ವಿಷಮಯವಾಗುತ್ತಿವೆ. ಚಿಕ್ಕ ಮಕ್ಕಳ ಆರೋಗ್ಯದ ಮೇಲೆ ಗಂಭೀರ ಪರಿಣಾಮ ಬೀರುತ್ತಿದ್ದು, ಸರಿಯಾದ ವಯಸ್ಸಿಗೆ ತಕ್ಕಂತೆ ದೈಹಿಕ ಬೆಳವಣಿಗೆಯಾಗದೆ ಕ್ರೀಡೆಗಳಲ್ಲಿ ಭಾಗವಹಿಸಲು ಸಾಧ್ಯವಾಗುತ್ತಿಲ್ಲ. ಆದ್ದರಿಂದ ಪೋಷಕರು ಮಕ್ಕಳ ಆರೋಗ್ಯದ ಕಡೆಗೆ ಹೆಚ್ಚಿನ ಗಮನ ಹರಿಸಬೇಕು. ಸೋಲು, ಗೆಲುವು ಎರಡೂ ಒಂದೇ ನಾಣ್ಯದ ಮುಖಗಳು. ಸೋತಾಗ ಕುಗ್ಗದೆ, ಗೆದ್ದಾಗ ಹಿಗ್ಗದೆ, ಎರಡನ್ನೂ ಸಮನಾಗಿ ಸ್ವೀಕರಿಸಿದಾಗ ಮಾತ್ರ ಯಶಸು ಸಾಧ್ಯ ಎಂದು ವಿದ್ಯಾರ್ಥಿಗಳಿಗೆ ಅವರು ಕಿವಿಮಾತು ಹೇಳಿದರು.

ಕ್ಷೇತ್ರ ಶಿಕ್ಷಣಾಧಿಕಾರಿ ಪುಷ್ಪ ಅವರು ಮಾತನಾಡಿ, ತಾಲ್ಲೂಕಿನಲ್ಲಿ ಶಿಕ್ಷಕರ ಉತ್ತಮ ಕಾರ್ಯಗಳಿಗೆ ಶಾಸಕರ ಪ್ರೋತ್ಸಾಹ ತುಂಬಾ ಚೆನ್ನಾಗಿದೆ. ಇದರಿಂದ ಶಿಕ್ಷಕರು ಶೈಕ್ಷಣಿಕವಾಗಿ ಪ್ರಗತಿ ಸಾಧಿಸಲು ಸಾಧ್ಯವಾಗಿದೆ ಎಂದು ಅಭಿಪ್ರಾಯಪಟ್ಟರು.

ಈ ವೇಳೆ ತಾಲ್ಲೂಕಿನಲ್ಲಿ ದೈಹಿಕ ಶಿಕ್ಷಕರಾಗಿ ಉತ್ತಮ ಸೇವೆ ಸಲ್ಲಿಸಿದ ಸುಬ್ಬಣ್ಣ ಅವರನ್ನು ಗೌರವಿಸಲಾಯಿತು.

ಈ ಸಂದರ್ಭದಲ್ಲಿ ಗ್ರಾಮ ಪಂಚಾಯತಿ ಸದಸ್ಯ ಕಾರ್ತಿಕ್, ತಾಲ್ಲೂಕು ದೈಹಿಕ ಶಿಕ್ಷಣ ವೀಕ್ಷಕರಾದ ಕುಶ್ವಂರತ್, ಬಿಜೆಪಿ ಮುಖಂಡ ರಾಜಕುಮಾರ್, ಎಸ್‌ಡಿಎಂಸಿ ಸದಸ್ಯರು ಹಾಗೂ ಗ್ರಾಮಸ್ಥರು ಮತ್ತು ವಿದ್ಯಾರ್ಥಿಗಳು ಉಪಸ್ಥಿತರಿದ್ದರು.

## ಗಣಪತಿ ಮಹೋತ್ಸವದಲ್ಲಿ ಭಾಗಿಯಾದ ಮುಸ್ಲಿಮರು!

• ಪ್ರಜೋದಯ ವರದಿ

**ಸಕಲೇಶಪುರ:** ಪಟ್ಟಣದ ಹಾಡ್ಯ ಸುಬ್ಬೇಗೌಡರ ಪುರಭವನದಲ್ಲಿ ಶ್ರೀ ಗಣಪತಿ ಸೇವಾ ಸಮಿತಿಯು ಆಯೋಜಿಸಿದ್ದ 64ನೇ ವರ್ಷದ ಶ್ರೀ ಗಣಪತಿ ಪ್ರತಿಷ್ಠಾಪನೆ ಮತ್ತು ವಿಸರ್ಜನೆ ಮಹೋತ್ಸವವು ಧಾರ್ಮಿಕ ಸೌಹಾರ್ದತೆಗೆ ಮಾದರಿಯಾಯಿತು.



ಮುಸ್ಲಿಮರು ಗಣಪತಿಯ ದರ್ಶನ ಪಡೆದು ಸಮಿತಿಯ ಪ್ರಮುಖರಿಗೆ ಹೂವು ಮತ್ತು ಸಿಹಿ ನೀಡಿ ಶುಭಾಶಯ ಕೋರಿದರು. ಪ್ರತಿಯಾಗಿ, ಸಮಿತಿಯವರು ಅವರಿಗೆ ಪ್ರಸಾದ ವಿತರಿಸಿ ಸತ್ಕರಿಸಿದರು.

ಸೌಹಾರ್ದತೆಯ ಸಂದೇಶವನ್ನು ಹಂಚಿಕೊಂಡರು. ಈ ಸಂದರ್ಭದಲ್ಲಿ ಈದ್ ಮಿಲಾದ್ ಹಬ್ಬದ ಶುಭಾಶಯವನ್ನು ಕೋರಿದರು. ಪುರಸಭೆಯ ಮಾಜಿ ಅಧ್ಯಕ್ಷ ಸೈಯದ್ ಮುಫೀಜ್ ಅವರಿಗೆ ಶಾಲು ಮತ್ತು ಹಾರ ಸಮರ್ಪಿಸಿ ಗೌರವಿಸಲಾಯಿತು.

ಮಲ್ನಾಡ್ ಮೆಹಬೂಬ್, ಪುರಸಭೆಯ ಮಾಜಿ ಸದಸ್ಯ ಅಫ್ತಾಬ್ ಆಲಂ, ಮಂಜ್ರಾಬಾದ್ ದರ್ಗಾದ ಕಾರ್ಯದರ್ಶಿ ಮಹಮ್ಮದ್ ಹನೀಫ್, ಹಸೇನಾರ್, ಇಮ್ರಾನ್ ಮಂಜ್ರಾಬಾದ್, ಗಾಯಕ ಕ್ರೇಜಿ ಮುನ್ನ, ಸುಲೇಮಾನ್, ಜಾಕಿರ್ ಶಾಮಿಯಾನ, ಅಕ್ಬರ್ ಜೂನೈದ್, ಇಮ್ರಾನ್ ವೆಲ್ಡರ್, ಹನೀಫ್ , ರಿಜ್ವಾನ್, ಚಾಂದ್ ಪಾಶ, ಪುರಸಭೆ ಸದಸ್ಯ ನವೀನ್, ಗ್ಯಾರೆಂಟಿ ಯೋಜನೆ ಸಮಿತಿ ಸದಸ್ಯ ವೆಂಕಟೇಶ್, ಸಮಿತಿಯ ಅಧ್ಯಕ್ಷ ಎಸ್.ಡಿ. ಸತೀಶ್, ಪ್ರಧಾನ ಕಾರ್ಯದರ್ಶಿ ಎಸ್.ಕೆ.ಸೂರ್ಯ, ಬಿ.ಎನ್.ನಾಗೇಶ್, ಉಪಾಧ್ಯಕ್ಷ ತಿಲಕ್ ಶೆಟ್ಟಿ, ಚಂದ್ರಶೇಖರ್, ಸಹ ಕಾರ್ಯದರ್ಶಿಗಳಾದ ರಾಜ್‌ಕುಮಾರ್ ಗುಲಗಳಲೆ, ಚಂದ್ರಶೇಖರ್ ಶೆಟ್ಟಿ ಇನ್ನಿತರರಿದ್ದರು.

## ಅಕ್ರಮ ಚಿನ್ನ ಸಾಗಣೆ: ನಟಿ ರನ್ಯಾ ರಾವ್‌ಗೆ 102.55 ಕೋಟಿ ರೂ. ದಂಡ

• ಪ್ರಜೋದಯ ವರದಿ

**ಬೆಂಗಳೂರು:** ನಟಿ ರನ್ಯಾ ರಾವ್ ಅವರು ಅಕ್ರಮ ಚಿನ್ನ ಸಾಗಾಣಿಕೆ ಕೇಸ್‌ನಲ್ಲಿ ಸಿಕ್ಕಿ ಬಿದ್ದಿದ್ದು, ನೂರಾರು ಕೋಟಿ ರೂಪಾಯಿ ಬೆಲೆ ಬಾಳುವ ಚಿನ್ನವನ್ನು ಅವರು ವಿದೇಶದಿಂದ ಅಕ್ರಮವಾಗಿ ಭಾರತಕ್ಕೆ ತಂದಿದ್ದರು. ಇದರ ತನಿಖೆ ನಡೆದಿದ್ದು, ರನ್ಯಾ ರಾವ್ ಗೋಲ್ಡ್ ಸ್ಮಗ್ಲಿಂಗ್ ಮಾಡಿರುವುದು ದೃಢಪಟ್ಟ ಹಿನ್ನೆಲೆಯಲ್ಲಿ ರನ್ಯಾ ರಾವ್‌ಗೆ ಡಿಆರ್‌ಐ ಬರೋಬ್ಬರಿ 102.55 ಕೋಟಿ ರೂ. ದಂಡ ಪಾವತಿಸುವಂತೆ ನೋಟಿಸ್ ನೀಡಿದೆ.



ಡಿಆರ್‌ಐ ಅಧಿಕಾರಿಗಳು ಅಡ್‌ಜುಡಿಕೇಷನ್ ಮಾಡಿ ನೋಟಿಸ್ ನೀಡಿದ್ದಾರೆ. ಮಾ.4ರಂದು ಗೋಲ್ಡ್ ಸೀಜ್ ಮಾಡಿ ರನ್ಯಾ ರಾವ್ ಅವರನ್ನು ಡಿಆರ್‌ಐ ಬಂಧಿಸಿತ್ತು. ಕಳ್ಳಸಾಗಣೆ ವಸ್ತುಗಳನ್ನು 6 ತಿಂಗಳಲ್ಲಿ ಡಿಆರ್‌ಐ ಅಧಿಕಾರಿಗಳು ವಸೂಲಿ ಮಾಡಬೇಕಿದೆ. ರನ್ಯಾ ರಾವ್ ಅವರು ಅಕ್ರಮವಾಗಿ 127.3 ಕೆಜಿ ಚಿನ್ನ ಸಾಗಾಟ ಮಾಡಿರುವುದು ತನಿಖೆಯಿಂದ ದೃಢಪಟ್ಟಿದೆ.

102.55 ಕೋಟಿ ರೂ. ದಂಡ ಪಾವತಿಸುವಂತೆ ನಿಂದ ನೋಟಿಸ್ ಜಾರಿ ಆಗಿದೆ. ಇಂದು (ಸೆಪ್ಟೆಂಬರ್ 2) ಜೈಲಿಗೆ ತೆರಳಿ ರನ್ಯಾ ಸೇರಿ ನಾಲ್ವರೂ ಆರೋಪಿಗಳಿಗೆ ನೋಟಿಸ್ ನೀಡಲಾಗಿದೆ. ದಂಡ ಪಾವತಿ ಮಾಡದಿದ್ದರೆ ಆಸ್ತಿ ಮುಟ್ಟುಗೋಲು ಹಾಕಲು ಅವಕಾಶವಿದೆ. ಎ2 ಆರೋಪಿ ತರುಣ್ ಕೊಂಡುರು ರಾಜು ಅವರು 67.6 ಕೆಜಿ ಚಿನ್ನ ಕಳ್ಳಸಾಗಣೆ ಮಾಡಿರುವುದು ಧೃಡವಾಗಿದೆ.

ತರುಣ್ ಕೊಂಡುರು ರಾಜು ಗೆ 62 ಕೋಟಿ ರೂ. ದಂಡ ವಿಧಿಸಲಾಗಿದೆ. ಸಾಹಿಲ್ ಜೈಲ್ ಮತ್ತು ಭರತ್ ಜೈನ್ ತಲಾ 63.61 ಕೆಜಿ ಚಿನ್ನ ಕಳ್ಳಸಾಗಣೆ ಮಾಡಿರುವುದು ಧೃಡಪಟ್ಟಿದೆ.

### ಸರ್ಕಾರಿ ಶಾಲಾ- ಕಾಲೇಜುಗಳಲ್ಲೂ ಉತ್ತಮ ಸೌಲಭ್ಯ, ಗುಣಮಟ್ಟದ ಶಿಕ್ಷಣ: ಶಾಸಕ ಸಿ.ಎನ್.ಬಾಲಕೃಷ್ಣ

# ಖಾಸಗಿ ಶಿಕ್ಷಣ ಸಂಸ್ಥೆಗಳ ಮೇಲೆ ಪೋಷಕರ ವ್ಯಾಮೋಹ

• ಪ್ರಜೋದಯ ವರದಿ

**ಚನ್ನರಾಯಪಟ್ಟಣ:** ಸರ್ಕಾರಿ ಶಾಲಾ- ಕಾಲೇಜುಗಳು ಅಗತ್ಯ ಮೂಲಭೂತ ಸೌಲಭ್ಯದೊಂದಿಗೆ, ಗುಣಮಟ್ಟದ ಶಿಕ್ಷಣದೊಂದಿಗೆ ಶೈಕ್ಷಣಿಕವಾಗಿ ಪ್ರಗತಿ ಸಾಧಿಸಿದ್ದರೂ ಪೋಷಕರು ತಮ್ಮ ಮಕ್ಕಳಿಗೆ ಖಾಸಗಿ ಶಾಲಾ- ಕಾಲೇಜುಗಳಲ್ಲಿ ಶಿಕ್ಷಣ ಕೊಡಿಸಲು ಮುಂದಾಗುತ್ತಿರುವುದು ದುರಂತದ ಸಂಗತಿ ಎಂದು ಶಾಸಕ ಸಿ.ಎನ್.ಬಾಲಕೃಷ್ಣ ಆತಂಕ ವ್ಯಕ್ತಪಡಿಸಿದರು.



ಪಟ್ಟಣದ ಮಾಧ್ಯಮಿಕ ಶಾಲಾ ಆವರಣದಲ್ಲಿ ಸರ್ಕಾರಿ ಸ್ವತಂತ್ರ ಪದವಿ ಪೂರ್ವ ಕಾಲೇಜಿನ ವತಿಯಿಂದ ಆಯೋಜಿಸಲಾಗಿದ್ದ 2025-26ನೇ ಸಾಲಿನ ಕ್ರೀಡೆ, ಸಾಂಸ್ಕೃತಿಕ ಚಟುವಟಿಗಳ ಉದ್ಘಾಟನೆ ಹಾಗೂ ಪ್ರತಿಭಾ ಪುರಸ್ಕಾರ ಸಮಾರಂಭದ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು, ಇಂದಿನ ಸಮಾಜದಲ್ಲಿ ಶಿಕ್ಷಣವೂ ವ್ಯಾಪಾರೀಕರಣವಾಗಿದ್ದು, ಕೆಲವು ಪೋಷಕ ವರ್ಗದವರು ಖಾಸಗಿ ಶಾಲೆಗಳ ಕಡೆಗೆ ಮುಖ ಮಾಡುತ್ತಿದ್ದಾರೆ. ಆದರೆ, ಸರ್ಕಾರಿ ಶಾಲೆಗಳಲ್ಲಿ ಗುಣಮಟ್ಟದ ಶಿಕ್ಷಣಕ್ಕಾಗಿ ಮತ್ತು ಸದೃಢ ದೈಹಿಕ ಮತ್ತು ಬೌದ್ಧಿಕ ಬೆಳವಣಿಗೆಗಾಗಿ ಹಲವು ಶೈಕ್ಷಣಿಕ ಸೌಲಭ್ಯಗಳನ್ನು ಕಲ್ಪಿಸಲಾಗುತ್ತಿದೆ ಎಂದು ಹೇಳಿದರು.

ಸರ್ಕಾರಿ ಶಾಲೆಗಳಲ್ಲಿ ಅನುಭವಿ ಅರ್ಹ ಶಿಕ್ಷಕರು, ಸುಸಜ್ಜಿತ ಕೊಠಡಿ, ಪ್ರಯೋಗಾಲಯ, ಗ್ರಂಥಾಲಯ, ಡಿಜಿಟಲ್ ಬೋಧನಾ ಸವಲತ್ತುಗಳು ಸೇರಿದಂತೆ ಸಾಕಷ್ಟು ಅನುಕೂಲ ದೊರೆಯುತ್ತಿದೆ. ಜತೆಗೆ ಕರ್ನಾಟಕ ಪಬ್ಲಿಕ್ ಶಾಲೆಯನ್ನು ತೆರೆದು ಎಲ್‌ಕೆಜಿಯಿಂದ ಪಿಯುಸಿವರೆಗೂ ಇಂಗ್ಲಿಷ್ ಮಾಧ್ಯಮದ ಮೂಲಕ ಶಿಕ್ಷಣ ನೀಡಲಾಗುತ್ತಿದೆ. ಆದ್ದರಿಂದ ಸರ್ಕಾರಿ ಶಾಲೆಗಳ ಕಡೆಗೆ ಪಾಲಕರು ತಮ್ಮ ಮಕ್ಕಳನ್ನು ಸೇರಿಸಿ ಶೈಕ್ಷಣಿಕ ಅಭಿವೃದ್ಧಿಗೆ ಸಹಾಯ ಮಾಡುವ ಮೂಲಕ ಮಾದರಿ ಶಾಲೆಯಾಗಲು ಎಲ್ಲರೂ ಕೈ ಜೋಡಿಸಬೇಕು ಎಂದರು.

ವಿದ್ಯಾರ್ಥಿಗಳ ಜೀವನದಲ್ಲಿ ಮಾನವೀಯ ಮೌಲ್ಯಗಳು ಅತಿ ಮುಖ್ಯ. ಉತ್ತಮವಾದ ಮಾನವೀಯ ಮೌಲ್ಯಗಳನ್ನು ಬೆಳೆಸಿಕೊಂಡು ಇನ್ನೊಬ್ಬರಿಗೆ ಮಾದರಿ ಆಗಬೇಕು. ಬೆಳೆಯುವ ಸಿರಿ ಮೊಳಕೆಯಲ್ಲಿ ಎನ್ನುವ ಹಾಗೆ ವಿದ್ಯಾರ್ಥಿಗಳು ಜೀವನದಲ್ಲಿ ಉತ್ತಮವಾದ ಗುಣಗಳನ್ನು ಅಳವಡಿಸಿಕೊಳ್ಳುವುದರಿಂದ ಮಾತ್ರ ಜೀವನದ ಗುರಿ ಮುಟ್ಟಲು ಸಾಧ್ಯ. ಕಲಿಕೆ ಎನ್ನುವುದು ನಿರಂತರವಾಗಿ ನಡೆಯುವಂತಹದ್ದು. ಮಹಾನ್ ವ್ಯಕ್ತಿಗಳ ಜೀವನ ಸಾಧನೆಗಳನ್ನು ಪ್ರತಿಯೊಬ್ಬರೂ ಅಧ್ಯಯನ ಮಾಡುವ ಮೂಲಕ ಉತ್ತಮ ಮೌಲ್ಯಗಳನ್ನು ಹೊಂದಬೇಕು. ಹಾಸನ ಜಿಲ್ಲೆ ಶೈಕ್ಷಣಿಕವಾಗಿ ಮುಂದುವರಿದಿದ್ದು, ವಿಶೇಷ ಸ್ಥಾನಮಾನವನ್ನು ಗಳಿಸಿದೆ. ವೈದ್ಯಕೀಯ, ಅರೆ ವೈದ್ಯಕೀಯ ತಾಂತ್ರಿಕ ಶಿಕ್ಷಣ, ಪಶು ವೈದ್ಯಕೀಯ, ಕೃಷಿ ವಿಜ್ಞಾನ ಕಾನೂನು ಪದವಿ ಸೇರಿದಂತೆ ಎಲ್ಲಾ ವಿಧದ ಕೋರ್ಸುಗಳು ಲಭ್ಯವಿದ್ದು, ಪಿಯುಸಿ ನಂತರ ವಿದ್ಯಾರ್ಥಿಗಳು ಇದರ ಸದುಪಯೋಗ ಪಡೆದುಕೊಳ್ಳಬೇಕು ಎಂದು ತಿಳಿಸಿದರು.

ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನ ಪ್ರಾಂಶುಪಾಲ ಎಸ್.ಹೆಚ್.ಗಂಗೇಗೌಡ ಪಟ್ಟಣದ ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನಲ್ಲಿ ಸಿಗುವ ಕೋರ್ಸುಗಳು ಹಾಗೂ ಸೌಲಭ್ಯಗಳ ಬಗ್ಗೆ ಮಾಹಿತಿ ನೀಡಿದರು.

ಸರ್ಕಾರಿ ಕಾಲೇಜಿನಲ್ಲಿ ವ್ಯಾಸಂಗ ಮಾಡಿ ಲಕ್ನೋದ ಐಐಟಿಗೆ ಆಯ್ಕೆಯಾದ ವಿದ್ಯಾರ್ಥಿ ಹಾಗೂ ಕಲಾ ವಿಭಾಗದಲ್ಲಿ ಜಿಲ್ಲೆಗೆ ಪ್ರಥಮ ಸ್ಥಾನ ಪಡೆದ ವಿದ್ಯಾರ್ಥಿನಿ ಹಾಗೂ ಅತಿ ಹೆಚ್ಚು ಅಂಕ ಪಡೆದು ಕಾಲೇಜಿಗೆ ಕೀರ್ತಿ ತಂದ ವಿದ್ಯಾರ್ಥಿಗಳಿಗೆ ಪ್ರತಿಭಾ ಪುರಸ್ಕಾರ ನೀಡಿ ಗೌರವಿಸಲಾಯಿತು.

ಸರ್ಕಾರಿ ಸ್ವತಂತ್ರ ಪದವಿ ಪೂರ್ವ ಕಾಲೇಜಿನ ಪ್ರಾಂಶುಪಾಲ ಕೆ.ಟಿ. ರಾಮೇಗೌಡ, ಕರ್ನಾಟಕ ರಾಜ್ಯ ಸಹಕಾರ ಮಾರಾಟ ಮಂಡಳಿಯ ನಿರ್ದೇಶಕ ಪುಟ್ಟಸ್ವಾಮಿಗೌಡ, ಪುರಸಭೆಯ ಸ್ಥಾಯಿ ಸಮಿತಿ ಅಧ್ಯಕ್ಷ ಎಸ್.ಎ.ಗಣೇಶ್, ಸದಸ್ಯೆ ಬನಶಂಕರಿ ರಘು, ಕಾಲೇಜು ಅಭಿವೃದ್ಧಿ ಸಮಿತಿಯ ಸದಸ್ಯರಾದ ಚ.ನಾ. ಅಶೋಕ್, ಜಯರಾಮು, ರಾಮಚಂದ್ರ, ಉಪನ್ಯಾಸಕ ವೃಂದ ಹಾಗೂ ವಿದ್ಯಾರ್ಥಿಗಳು ಮತ್ತು ಪೋಷಕರು ಭಾಗವಹಿಸಿದ್ದರು.

# ಗ್ರಾ.ಪಂ. ಅಭಿವೃದ್ಧಿಗೆ ಪಟ್ಟಣ ಪಂಚಾಯಿತಿ ಹಣ ಬೇಡ

## ಅನುದಾನವಿಲ್ಲದೆ ನಾವೇ ಪರದಾಡುತ್ತಿದ್ದೇವೆ | ಪ.ಪಂ. ಅಧ್ಯಕ್ಷ ಪ್ರದೀಪ್ ಕುಮಾರ್

• ಪ್ರಜೋದಯ ವರದಿ



**ಅರಕಲಗೂಡು:** ಪಟ್ಟಣ ಪಂಚಾಯಿತಿ ವ್ಯಾಪ್ತಿಗೆ ಹೊಂದಿಕೊಂಡಿರುವ ಗ್ರಾಮ ಪಂಚಾಯಿತಿಗಳಿಗೆ ಸೇರಿದ ಜಾಗದಲ್ಲಿ ನಿರ್ಮಿಸಿರುವ ಹೊಸ ಬಡಾವಣೆಗಳಿಗೆ ಪಟ್ಟಣ ಪಂಚಾಯಿತಿಯಿಂದ ಮೂಲ ಸೌಕರ್ಯ ಕಲ್ಪಿಸಬಾರದೆಂದು ಪಟ್ಟಣ ಪಂಚಾಯಿತಿ ಅಧ್ಯಕ್ಷ ಎಸ್.ಎಸ್.ಪ್ರದೀಪ್ ಕುಮಾರ್ ಅವರು ಅಧಿಕಾರಿಗಳಿಗೆ ಸೂಚಿಸಿದರು.

ಪಟ್ಟಣ ಪಂಚಾಯಿತಿ ಸಭಾಂಗಣದಲ್ಲಿ ಮಂಗಳವಾರ ನಡೆದ ಸಾಮಾನ್ಯ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿ, ಪಟ್ಟಣ ವಿಸ್ತರಣೆಗೊಳ್ಳುತ್ತಿರುವ ಸಂದರ್ಭದಲ್ಲಿ ಕೆಲವು ಗ್ರಾಮ ಪಂಚಾಯಿತಿಗಳಿಗೆ ಸೇರಿದ ಜಾಗದಲ್ಲಿ ಹೊಸದಾಗಿ ಬಡಾವಣೆ ನಿರ್ಮಾಣಗೊಳ್ಳುತ್ತಿವೆ. ಇಂತಹ ಬಡಾವಣೆ ಪೈಕಿ ನಿರ್ಮಾಣಗೊಂಡಿರುವ ಮನೆಗಳು, ನಿವೇಶನಗಳಿಗೆ ಪಟ್ಟಣ ಪಂಚಾಯಿತಿ ಕುಡಿಯುವ ನೀರು ಸೇರಿ ಇತರ ಸೌಕರ್ಯ ಕಲ್ಪಿಸಿರುವ ಕುರಿತು ಮಾಹಿತಿ ಲಭ್ಯವಾಗಿದೆ. ಗ್ರಾಮ ಪಂಚಾಯಿತಿಗೆ ಸೇರಿದ ಜಾಗದಲ್ಲಿ ಮನೆ ನಿರ್ಮಿಸಿಕೊಂಡಿರುವುದರಿಂದ ಸೌಕರ್ಯ ಕೋರಿ ಮನವಿ ಬರುತ್ತಿದೆ. ಇದು ಸಾಧ್ಯವಾಗದ ಕೆಲಸ, ಆರ್ಥಿಕ ಕೊರತೆ ಪರಿಣಾಮ ಪಟ್ಟಣ ಪಂಚಾಯಿತಿ ವ್ಯಾಪ್ತಿಯಲ್ಲಿ ಸೌಕರ್ಯ ಕಲ್ಪಿಸಲು ಪರದಾಡುತ್ತಿದ್ದೇವೆ. ಅಲ್ಲಿನ ನಿವಾಸಿಗಳು ಗ್ರಾಮ ಪಂಚಾಯಿತಿಗೆ ತೆರಿಗೆ ಕಟ್ಟುತ್ತಿದ್ದು ಸೌಲಭ್ಯ ಕಲ್ಪಿಸುವ ಹೊಣೆಯೂ ಅವರದೇ ಆಗಿದೆಯೆಂದರು.

**ಬೀದಿನಾಯಿಗಳ ನಿಯಂತ್ರಣಕ್ಕೆ ಒತ್ತಾಯ**

ಪಟ್ಟಣದಲ್ಲಿ ಬೀದಿ ನಾಯಿಗಳ ಹಾವಳಿ ಹೆಚ್ಚಿದ್ದು ಜನ, ಜಾನುವಾರುಗಳು ಓಡಾಡಲು ಭಯ ಪಡುವ ಸ್ಥಿತಿ ಉಂಟಾಗಿದೆ. ಕೂಡಲೇ ಅವುಗಳ ನಿಯಂತ್ರಣಕ್ಕೆ ಕ್ರಮ ಕೈಗೊಳ್ಳಬೇಕೆಂದು ಸದಸ್ಯರು ಆಗ್ರಹಿಸಿದರು. ನಾಯಿಗಳ ಸಂತಾನ ಹರಣ ಶಸ್ತ್ರ ಚಿಕಿತ್ಸೆಗೆ ಟೆಂಡರ್ ಪ್ರಕ್ರಿಯೆ ನಡೆಸುವಂತೆ ಅಧ್ಯಕ್ಷರು ಸೂಚಿಸಿದರು.

**ಬೀದಿ ದೀಪ ನಿರ್ವಹಣೆ ಸಮರ್ಪಕವಾಗಿಲ್ಲ**

ಇತ್ತೀಚೆಗೆ ಬೀದಿ ದೀಪಗಳ ನಿರ್ವಹಣೆ ಸಮರ್ಪಕವಾಗಿ ಆಗುತ್ತಿಲ್ಲ. ರಾತ್ರಿ ವೇಳೆ ಪಟ್ಟಣ ಕಗ್ಗತ್ತಲಿನಲ್ಲಿ ಮುಳುಗುವಂತಾಗಿದೆ. ಗುತ್ತಿಗೆ ರದ್ದುಪಡಿಸಿ ಹೊಸದಾಗಿ ಟೆಂಡರ್ ಕರೆಯುವಂತೆ ಸದಸ್ಯ ಕೃಷ್ಣಯ್ಯ ಆಗ್ರಹಿಸಿದರು. ಈ ಕುರಿತು ಕ್ರಮ ಕೈಗೊಳ್ಳಲಾಗುವುದು. ಹೊಸದಾಗಿ 10 ಲಕ್ಷ ರೂ. ವೆಚ್ಚದಲ್ಲಿ ಪ್ರತಿ ಬಡಾವಣೆ ಯಲ್ಲಿ ಎಲ್ಇಡಿ ದೀಪಗಳ ಅಳವಡಿಕೆಗೆ ಕ್ರಮ ಕೈಗೊಂಡಿರುವುದಾಗಿ ಮುಖ್ಯಾಧಿಕಾರಿ ಸಿ.ಡಿ.ನಾಗೇಂದ್ರ ಕುಮಾರ್ ತಿಳಿಸಿದರು.

**22 ಕೋಟಿ ರೂ. ಕುಡಿಯುವ ನೀರು ಯೋಜನೆ**

ಪಟ್ಟಣದಲ್ಲಿ ಕುಡಿಯುವ ನೀರಿನ ಸಮರ್ಪಕ ವ್ಯವಸ್ಥೆಗೆ 22 ಕೋಟಿ ರೂ. ವೆಚ್ಚದಲ್ಲಿ ಯೋಜನೆ ಪ್ರಗತಿಯಲ್ಲಿದ್ದು, 40 ಲಕ್ಷ ಗ್ಯಾಲನ್ ನೀರನ್ನು ಸಂಗ್ರಹಿಸುವ ಬೃಹತ್ ಯೋಜನೆಯಾಗಿದೆ. ಅದರ ನಿರ್ವಹಣೆಯೂ ತಂತ್ರಜ್ಞಾನದಿಂದ ಕೂಡಿರುತ್ತದೆ. ಮುಂದಿನ ದಿನಗಳಲ್ಲಿ ಪಟ್ಟಣದ ಜನರಿಗೆ ನೀರಿನ ಸಮಸ್ಯೆಯನ್ನು ಹೋಗಲಾಡಿ ಸಲು ಈ ಯೋಜನೆ ಸಹಕಾರಿಯಾಗಿದೆ. ಅದಕ್ಕೆ ಪಟ್ಟಣ ಪಂಚಾಯಿತಿ 6 ಕೋಟಿ ರೂ. ನೀಡಬೇಕು. ಈ ವರೆಗೆ 5 ಲಕ್ಷ ರೂ. ಮಾತ್ರ ನೀಡಲಾಗಿದೆ. ಬಾಕಿ ಹಣವನ್ನು ನೀಡಬೇಕಿದೆ. 24★7 ಮಾದರಿಯ ನೀರು ಸರಬರಾಜು ವ್ಯವಸ್ಥೆ ಜಾರಿಗೆ ಬರಲಿದ್ದು ಕೊಳವೆ ಅಳವಡಿಕೆ ಕಾರ್ಯ ನಡೆದಿದೆ ಎಂದು ಮುಖ್ಯಾಧಿಕಾರಿ ಮಾಹಿತಿ ನೀಡಿದರು.

ಪ್ರತಿ ವರ್ಷದಂತೆ ಈ ಬಾರಿಯೂ ಪೌರ ಕಾರ್ಮಿಕರ ದಿನಾಚರಣೆಯನ್ನು ಅದ್ದೂರಿಯಾಗಿ ಆಚರಿಸಲು ತೀರ್ಮಾನಿಸಲಾಯಿತು. ಪಟ್ಟಣದ ಅಂದಕ್ಕೆ ಪ್ರಮುಖ ಕಾರಣಕರ್ತರಾದ ಪೌರ ಕಾರ್ಮಿಕರನ್ನು ಗೌರವಿಸುವುದು ನಮ್ಮ ಕರ್ತವ್ಯ. ಅವರ ದಿನಾಚರಣೆಯನ್ನು ಅತ್ಯಂತ ಸಂಭ್ರಮದಿಂದ ಆಯೋಜನೆ ಮಾಡಲು ಅಧ್ಯಕ್ಷ ಪ್ರದೀಪ್ ಕುಮಾರ್ ತಿಳಿಸಿದರು. ಅದಕ್ಕೆ ಸಭೆ ಒಪ್ಪಿಗೆ ನೀಡಿತು.

ಸಂತೆ ಮೈದಾನದಲ್ಲಿರುವ ಗಣಪತಿ ದೇವಾಲಯ ದುರಸ್ತಿಗೆ ಕ್ರಮ ವಹಿಸುವಂತೆ ಸದಸ್ಯರು ಒತ್ತಾಯಿಸಿದರು. ಪಟ್ಟಣ ಪಂಚಾಯಿತಿ ಅನುದಾನದ ಜೊತೆಗೆ ಸಾರ್ವಜನಿಕರ ಸಹ ಭಾಗಿತ್ವವನ್ನು ಪಡೆಯುವ ಕುರಿತು ಚಿಂತನೆ ನಡೆಸುವಂತೆ ಮುಖ್ಯಾಧಿಕಾರಿ ಸಲಹೆ ಮಾಡಿದರು. ಬಡಾವಣೆಗಳಲ್ಲಿ ಅಭಿವೃದ್ಧಿ ಕಾಮಗಾರಿಗಳನ್ನು ಕೈಗೊಳ್ಳಲು ಹಾಗೂ ವಿದ್ಯಾರ್ಥಿಗಳು, ಅಂಗವಿಕಲರು, ಬಡವರ್ಗದ ಫಲಾನುಭವಿಗಳಿಗೆ ವಿವಿಧ ಯೋಜನೆಗಳಲ್ಲಿ ಸವಲತ್ತುಗಳನ್ನು ಕಲ್ಪಿಸಲು ಸಭೆ ತೀರ್ಮಾನಿಸಿತು. ಉಪಾಧ್ಯಕ್ಷ ಸುಭಾನ್ ಷರೀಫ್ ಇದ್ದರು.

# ಬಾನು ಮುಷ್ತಾಕ್ ವಿರೋಧಿಸುವ ನಡೆ ಖಂಡನೀಯ

## ಬಿಜೆಪಿ ನಾಯಕರಿಂದ ಡೊಂಗಿತನ: ದೇವರಾಜೇಗೌಡ ಟೀಕೆ

• ಪ್ರಜೋದಯ ವರದಿ




**ಹಾಸನ:** ಬಿಜೆಪಿ ನಾಯಕರು ಹಿಂದುತ್ವ ಮುಂದಿಟ್ಟುಕೊಂಡು ಸಾಹಿತಿ ಬಾನು ಮುಷ್ತಾಕ್ ಅವರು ನಾಡಹಬ್ಬ ದಸರಾ ಉದ್ಘಾಟನೆಗೆ ವಿರೋಧ ವ್ಯಕ್ತಪಡಿಸುತ್ತಿರುವ ರಾಜಕೀಯ ನಡೆ ಖಂಡನೀಯವೆಂದು ಕಾಂಗ್ರೆಸ್ ಪ್ರಚಾರ ಸಮಿತಿ ಜಿಲ್ಲಾಧ್ಯಕ್ಷ ದೇವರಾಜೇಗೌಡ ಅವರು ತಿಳಿಸಿದರು.

ಮಂಗಳವಾರ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಬಿಜೆಪಿ ಕೆಲ ನಾಯಕರು ಡೊಂಗಿತನ ಪ್ರದರ್ಶನ ಮಾಡುತ್ತಿದ್ದಾರೆ. ಮಾಜಿ ಸಂಸದ ಪ್ರತಾಪ್ ಸಿಂಹ ಅವರು ತಮ್ಮ ರಾಜಕೀಯ ಅಸ್ತಿತ್ವದ ಬೇಳೆ ಬೇಯಿಸಿಕೊಳ್ಳಲು ಅನಗತ್ಯವಾಗಿ ವಿವಾದ ಸೃಷ್ಟಿ ಮಾಡುತ್ತಿದ್ದಾರೆ. ವಿರೋಧ ಪಕ್ಷದ ನಾಯಕ ಆರ್.ಅಶೋಕ್ ಮತ್ತು ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ. ವಿಜಯೇಂದ್ರ ಅವರು ಗೊಂದಲಮಯ ಹೇಳಿಕೆ ನೀಡುತ್ತಿದ್ದಾರೆಂದು ದೂರಿದರು.

ಜಿಲ್ಲೆಯ ಸಾಹಿತಿ ಬಾನು ಮುಷ್ತಾಕ್ ಅವರನ್ನು ದಸರಾ ಉದ್ಘಾಟನೆಗೆ ಸರ್ಕಾರ ಆಯ್ಕೆ ಮಾಡಿರುವುದು ನ್ಯಾಯ ಸಮ್ಮತವಾಗಿದೆ. ಸರ್ಕಾರದ ನಡೆಯನ್ನು ನಮ್ಮ ಪಕ್ಷ ಸ್ವಾಗತಿಸುತ್ತದೆ. ಬಾನು ಮುಷ್ತಾಕ್ ಅವರು ರಚಿಸಿದ ಕೃತಿಗೆ ಅಂತರ ರಾಷ್ಟ್ರೀಯ ಮಟ್ಟದಲ್ಲಿ ಬುಕರ್ ಪ್ರಶಸ್ತಿ ಲಭಿಸಿದೆ. ಕೃತಿಯನ್ನು ಭಾಷಾಂತರ ಮಾಡಿದ ದೀಪಾ ಬಸ್ತಿ ಅವರು ಕೂಡ ಈ ಪ್ರಶಸ್ತಿಗೆ ಭಾಜನ ರಾಗಿದ್ದಾರೆ. ಜಾಗತಿಕ ಮಟ್ಟದಲ್ಲಿ ಕನ್ನಡ ಭಾಷೆಗೆ ಮತ್ತು ರಾಜ್ಯಕ್ಕೆ ಗೌರವ ತಂದುಕೊಟ್ಟ ಹೆಗ್ಗಳಿಗೆ ಬಾನು ಮುಷ್ತಾಕ್ ಅವರಿಗೆ ಸಲ್ಲುತ್ತದೆ. ಈ ಉದ್ದೇಶದಿಂದ ಆಯ್ಕೆ ಮಾಡಲಾಗಿದೆ ಎಂದು ಹೇಳಿದರು.

2017ರಲ್ಲಿ ಮುಸ್ಲಿಂ ಸಮುದಾಯಕ್ಕೆ ಸೇರಿದ ಕವಿ ನಿಸ್ಸಾರ್ ಅಹಮ್ಮದ್ ಅವರು ದಸರಾ ಉದ್ಘಾಟನೆ ಮಾಡಿದರು. ಆ ಸಂದರ್ಭದಲ್ಲಿ ಯಾವುದೇ ಅಪಸ್ವರ ಎತ್ತದ ಬಿಜೆಪಿಯವರು ಈಗ ಅನಗತ್ಯವಾಗಿ ಗೊಂದಲ ಸೃಷ್ಟಿಸಿರುವುದು ಖಂಡನೀಯ. ಬಾನು ಮುಷ್ತಾಕ್ ಆಯ್ಕೆಯನ್ನು ಬಿಜೆಪಿಯವರು ಯಾವ ಕಾರಣಕ್ಕೆ ವಿರೋಧಿಸುತ್ತಿದ್ದಾರೆ ಎಂಬುದನ್ನು ಸ್ಪಷ್ಟಪಡಿಸಬೇಕು. ಬಿಜೆಪಿಯವರು ಚಾಮುಂಡೇಶ್ವರಿ ದೇವಿಯನ್ನು ಗುತ್ತಿಗೆ ಪಡೆದಿದ್ದಾರೆಯೇ ಅಥವಾ ತಾಯಿ ಚಾಮುಂಡಿ ಅನ್ಯ ಧರ್ಮಿಯರಿಂದ ಉದ್ಘಾಟನೆ ಮಾಡಿಸಬಾರದೆಂದು ಮಾಜಿ ಸಂಸದ ಪ್ರತಾಪ್ ಸಿಂಹಗೆ ಹೇಳಿದೆಯೇ ಎಂದು ಪ್ರಶ್ನಿಸಿದ ಅವರು, ಸಮಾಜದಲ್ಲಿ ಗೊಂದಲ ಸೃಷ್ಟಿಸಿ, ಜನರ ಭಾವನೆಗಳಿಗೆ ಬೆಂಕಿ ಹಚ್ಚುವ ಮೂಲಕ ಸಮಾಜ ಒಡೆಯುವ ಕೆಲಸವನ್ನು ಬಿಜೆಪಿ ಮುಖಂಡರು ಮಾಡುತ್ತಿರುವುದು ಅಸಹ್ಯ ಹುಟ್ಟಿಸುತ್ತದೆಂದು ಟೀಕಿಸಿದರು.

ದಸರಾ ಉದ್ಘಾಟನೆ ವಿಚಾರ ರಾಜಕೀಯ ತಿರುವು ಪಡೆದುಕೊಂಡಿರುವ ಹೊತ್ತಿನಲ್ಲಿ ಸಂಘ– ಸಂಸ್ಥೆಗಳು ಮೌನವಹಿಸುವುದು ತರವಲ್ಲ, ಪ್ರಶಸ್ತಿ ಬಂದಾಗ ಸನ್ಮಾನಿಸಿ, ವಿರೋಧ ವ್ಯಕ್ತವಾದಾಗ ಸುಮ್ಮನಾಗಬಾರದು. ಸಮಾಜಮುಖಿಯಾಗಿ ಧ್ವನಿ ಎತ್ತಬೇಕು. ಪ್ರಾರಂಭದಲ್ಲಿ ಬಾನು ಮುಷ್ತಾಕ್ ಆಯ್ಕೆಯನ್ನು ಒಪ್ಪಿಕೊಂಡ ಮೈಸೂರು ಸಂಸದ ಯದುವೀರ್ ಕೃಷ್ಣದತ್ತ ಒಡೆಯರ್ ಈಗ ಬಿಜೆಪಿಯವರ ಒತ್ತಡಕ್ಕೆ ಮಣಿದು ವಿರೋಧ ವ್ಯಕ್ತಪಡಿಸಿರುವುದು ಶೋಚನೀಯ. ಬಿಜೆಪಿಗೆ ಧರ್ಮಾಧಾರಿತ ರಾಜಕೀಯವನ್ನು ಹೊರತುಪಡಿಸಿ ಸಾಧನೆ ಮಾಡಿದ ವಿಚಾರವಾಗಿ ಚರ್ಚಿಸಲು ಶೂನ್ಯವಾಗಿದೆ ಎಂದು ದೂರಿದರು.

ಕಾಂಗ್ರೆಸ್ ಮುಖಂಡರಾದ ಅಶೋಕ್, ಮೊಹಮದ್ ಗೌಸ್, ಶಿವಕುಮಾರ್, ಚಂದ್ರಶೇಖರ್, ಕುಮಾರ್ ಶೆಟ್ಟಿ ಹಾಜರಿದ್ದರು.

# ಇಂದಿನಿಂದ ಸೀರತ್ ಅಭಿಯಾನ ಆರಂಭ




• ಪ್ರಜೋದಯ ವರದಿ

**ಹಾಸನ:** ಪ್ರವಾದಿ ಪೈಗಂಬರ್ ಮುಹಮ್ಮದ್ ಅವರ ಸಾರ್ವಕಾಲಿಕ ಬೋಧನೆಗಳನ್ನು ಜನತೆಗೆ ತಿಳಿಸಲು ಜಮಾ ಅತೆ ಇಸ್ಲಾಮೀ ಹಿಂದ್ ಕರ್ನಾಟಕ ಸಂಘಟನೆ ವತಿಯಿಂದ ಸೆ.3 ರಿಂದ 14 ರವರೆಗೆ ರಾಜ್ಯಾದ್ಯಂತ ಸೀರತ್ ಅಭಿಯಾನ ಹಮ್ಮಿಕೊಳ್ಳಲಾಗಿದೆ ಎಂದು ಜಮಾ ಅತೆ ಇಸ್ಲಾಮೀ ಹಿಂದ್ ಕಾರ್ಯಕರ್ತ ಅವೇಸ್ ಪಾಷ ಅವರು ತಿಳಿಸಿದರು.

ಮಂಗಳವಾರ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ನಗರದಲ್ಲಿ ಸೆ.17ರಂದು ಸಂಜೆ 7 ಗಂಟೆಗೆ ಎನ್. ಆರ್.ವೃತ್ತದಲ್ಲಿರುವ ಇಸ್ಲಾಮಿಕ್ ಸೆಂಟರ್‌ನಲ್ಲಿ ಸೀರತ್ ಅಭಿಯಾನದ ಅಂಗ ವಾಗಿ ವಿಚಾರಗೋಷ್ಠಿ ಮತ್ತು ಪುಸ್ತಕ ಬಿಡುಗಡೆ ಕಾರ್ಯಕ್ರಮ ನಡೆಯಲಿದೆ. ಮುಖ್ಯ ಅತಿಥಿಗಳಾಗಿ ಮಂಗಳೂರಿನ ಶಾಂತಿ ಪ್ರಕಾಶನದ ವ್ಯವಸ್ಥಾಪ ಮುಹಮ್ಮದ್ ಕುಂಞ ಹಾಗು ಇತರೆ ಗಣ್ಯರು ಭಾಗವಹಿಸಲಿದ್ದಾರೆಂದು ಹೇಳಿದರು.

ಪ್ರವಾದಿ ಮುಹಮ್ಮದ್ ಅವರ ನ್ಯಾಯ, ಮಾನವೀಯತೆ, ಸಹಬಾಳ್ವೆ, ಶಾಂತಿ, ಕರುಣೆ, ನಂಬಿಕೆ, ವಿಶ್ವಾಸ ಸಂದೇಶಗಳನ್ನು ನಾಡಿನ ಜನತೆಗೆ ತಲುಪಿಸುವುದು ಮತ್ತು ಪ್ರವಾದಿ ಅವರ ಬಗೆಗಿನ ತಪ್ಪು ಕಲ್ಪನೆಗಳನ್ನು ಹೋಗಲಾಡಿಸುವುದು, ವಿವಿಧ ಧರ್ಮೀಯರ ನಡುವಿನ ಪರಸ್ಪರ ಸಂಬಂಧಗಳನ್ನು ಬಲಪಡಿಸುವುದು ಅಭಿಯಾನದ ಉದ್ದೇಶವಾಗಿದೆ. ಅಭಿಯಾನ ವೇಳೆ ಶಾಂತಿ ಪ್ರಕಾಶನ ಪ್ರಕಟಿಸಿರುವ ಪ್ರವಾದಿ ಅವರ ಬದುಕು ಮತ್ತು ಸಂದೇಶಗಳ ಬಗ್ಗೆ ಬೆಳಕು ಚೆಲ್ಲುವ 2 ಪುಸ್ತಕಗಳನ್ನು ಬಿಡುಗಡೆಗೊಳಿಸಲಾಗುವುದು. ಜೊತೆಗೆ ರಾಜ್ಯಾದ್ಯಂತ ವಿವಿಧ ಸಾಮಾಜಿಕ ಚಟುವಟಿಕೆ, ಸಂವಾದ, ವಿಚಾರಗೋಷ್ಠಿ, ಸಾರ್ವಜನಿಕ ಸಭೆ, ಪ್ರಬಂಧ ಸ್ಪರ್ಧೆನಡೆಯಲಿದೆ ಎಂದರು.

ಪ್ರಮುಖರಾದ ಅಮ್ಜದ್ ಖಾನ್, ಜ.ಸೈದ್ ತಾಜ್, ಮಾಲಾನ ಅಝುರುಲ್ಲಾ ಖಾನ್ ಖಾಸಿಮಿ, ಡಾ. ಖಲೀಲುಲ್ಲಾಹ್ ಖಾನ್, ಫೈಯಾಜ್ ಪಾಷ, ಮಷೂದ್ ಅಹ್ಮದ್ ಇದ್ದರು.

# ತ್ರಿಭಾಷಾ ಸೂತ್ರದಿಂದ ಮಾತೃಭಾಷೆಗೆ ಅನ್ಯಾಯ

• ಪ್ರಜೋದಯ ವರದಿ

**ಹಾಸನ:** ತಮಿಳುನಾಡು, ಮಹಾರಾಷ್ಟ್ರ, ಗುಜರಾತ್ ಸೇರಿ ಅನೇಕ ರಾಜ್ಯಗಳು ದ್ವಿಭಾಷಾ ಸೂತ್ರ ಅಳವಡಿಸಿಕೊಂಡಿದ್ದರೆ ನಾವು ತ್ರಿಭಾಷಾ ಸೂತ್ರಕ್ಕೆ ಜೋತು ಬಿದ್ದು ಮಾತೃ ಭಾಷೆಗೆ ಅನ್ಯಾಯ ಮಾಡುತ್ತಿದ್ದೇವೆಂದು ಕರ್ನಾಟಕ ರಕ್ಷಣಾ ವೇದಿಕೆ ರಾಜ್ಯಾಧ್ಯಕ್ಷ ಟಿ.ಎ. ನಾರಾಯಣಗೌಡ ಅವರು ಆಕ್ರೋಶ ವ್ಯಕ್ತಪಡಿಸಿದರು.

ನಗರದ ಜ್ಞಾನಾಕ್ಷಿ ಕಲ್ಯಾಣ ಮಂಟಪದಲ್ಲಿ ಕರವೇ ಜಿಲ್ಲಾ ಘಟಕದಿಂದ ಏರ್ಪಡಿಸಿದ್ದ ಜಿಲ್ಲಾ ಕಾರ್ಯಕಾರಿಣಿ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿ, ರಾಷ್ಟ್ರ ಭಾಷೆಯಲ್ಲದ ಹಿಂದಿಯನ್ನು ಬಲವಂತವಾಗಿ ನಮ್ಮ ಮೇಲೆ ಹೇರುತ್ತಿದ್ದಾರೆ. ನಾವು ತ್ರಿಭಾಷಾ ಸೂತ್ರ ಒಪ್ಪಿಕೊಂಡು ಸಾಯ್ತಾ ಇದ್ದೇವೆ. ಹಿಂದಿ ಭಾಷೆಯಿಂದ ನಮಗೆ ಯಾವ ಅನುಕೂಲವಿಲ್ಲ. ಕನ್ನಡ, ಹಿಂದಿ, ಇಂಗ್ಲಿಷ್ ಮೂರು ಭಾಷೆಗಳನ್ನು ಕಡ್ಡಾಯವಾಗಿ ಕಲಿಯಬೇಕಾದ ಸಂದಿಗ್ಧ ಸ್ಥಿತಿಗೆ ನಮ್ಮ ಮಕ್ಕಳು ಸಿಲುಕಿದ್ದಾರೆ. ದ್ವಿಭಾಷಾ ಸೂತ್ರ ಅಳವಡಿಕೆಗಾಗಿ ಕರವೇ ಹೊರತುಪಡಿಸಿದರೆ ಬೇರೆ ಯಾವ ರಾಜಕಾರಣಿಗಳು ಧ್ವನಿ ಎತ್ತಲಿಲ್ಲ. ಸೋನಿಯಾ ಗಾಂಧಿಗೆ ಹೆದರುವ ಕಾಂಗ್ರೆಸ್ ನಾಯಕರು ಹಾಗು ಪ್ರಧಾನಿ ಮೋದಿ, ಸಚಿವ ಅಮಿತ್ ಶಾಗೆ ಹೆದರುವ ಬಿಜೆಪಿಗರಿಂದ ಕನ್ನಡ ಭಾಷೆ ಉಳಿಸಲು ಸಾಧ್ಯವೇ ಎಂದು ಪ್ರಶ್ನಿಸಿದರು. ಕರ್ನಾಟಕವನ್ನು ಗುಜರಾತಿನ ಮಾರ್ವಾಡಿಗಳು, ರಾಜಸ್ತಾನಿ ಯರು, ಆಂಧ್ರದ ರೆಡ್ಡಿ, ನಾಯ್ಡುಗಳು ಆಳುತ್ತಿದ್ದಾರೆ. ರಾಜ್ಯದಲ್ಲಿ ಎಲ್ಲಾ ವ್ಯಾಪಾರ ವಹಿವಾಟು ಗಳಲ್ಲಿ ಅವರದ್ದೇ ಸಿಂಹಪಾಲು ಎನ್ನುವಂತಾಗಿದೆ. ಅತಿಥಿಗಳಂತೆ ಬಂದು ಮಾಲೀಕರಾಗುವ ಮಟ್ಟಕ್ಕೆ ಬೆಳೆದಿದ್ದಾರೆ. ನಾವೇ ಅದಕ್ಕೆ ಅವಕಾಶ ಮಾಡಿಕೊಟ್ಟಿದ್ದೇವೆ. ಈ ವಿಚಾರವಾಗಿ ನಾವೆಲ್ಲರೂ ನಾಚಿಕೆಪಡಬೇಕೆಂದರು.




ಕನ್ನಡಿಗರು ಸಹ ವ್ಯಾಪಾರ ಮಾಡುವಂತಾಗಬೇಕು. ಹೊರ ರಾಜ್ಯದವರು ಕಟ್ಟುವ ಮಾಲ್‌ಗಳನ್ನು ನೋಡುತ್ತಾ ಮರುಗುವುದು ಸರಿಯಲ್ಲ. ಶ್ರಮದ ದುಡಿಮೆ ಮೂಲಕ ಸ್ವಾವಲಂಬಿ ಬದುಕು ಕಟ್ಟಿಕೊಳ್ಳಬೇಕೆಂದರು.

**ನಿಸ್ವಾರ್ಥ ಸೇವೆಗೆ ಕರವೇ ಸಾಕ್ಷಿ**

ಹೆಸರು ಉಳಿಯಬೇಕೆಂದರೆ ನಿಸ್ವಾರ್ಥ, ಪ್ರಾಮಾಣಿಕತೆ, ನಿಷ್ಠೆ, ಬದ್ಧತೆಯಿಂದ ಕೆಲಸ ಮಾಡಬೇಕು. ಸತ್ಕಾರ್ಯಗಳ ಮೂಲಕ 27 ವರ್ಷಗಳ ಹಿಂದೆ ಜನ್ಮ ತಾಳಿದ ಕರ್ನಾಟಕ ರಕ್ಷಣಾ ವೇದಿಕೆ ರಾಜ್ಯದ ಮೂಲೆ ಮೂಲೆಯಲ್ಲಿ ತನ್ನ ಛಾಪು ಮೂಡಿಸಲು ನಿಸ್ವಾರ್ಥ ಸೇವೆ ಕಾರಣ. ಜಾತಿ ಧರ್ಮಗಳನ್ನು ಮೀರಿದ ಅದ್ಭುತ ಸಂಗಮ ಇದಾಗಿದೆ. ಸ್ವಾರ್ಥ ಇಲ್ಲದೆ ಕರವೇ ದೊಡ್ಡ ಮಟ್ಟಕ್ಕೆ ಬೆಳೆದಿದೆಯೆಂದರು. ಉದ್ಯಮಿ ಲಕ್ಷ್ಮಿಕಾಂತ್, ಕರವೇ ರಾಜ್ಯ ಕಾರ್ಯದರ್ಶಿ ಆಸಾ ಹರಿಯಾತ್, ಜಿಲ್ಲಾಧ್ಯಕ್ಷ ಸಿ.ಡಿ.ಮನುಕುಮಾರ್, ಎಲ್ಲಾ ತಾಲ್ಲೂಕು ಅಧ್ಯಕ್ಷರು ಹಾಗು ಪದಾಧಿಕಾರಿಗಳು ಹಾಜರಿದ್ದರು.

# ಭುವನೇಶ್ವರಿ ಒಪ್ಪದವರು ಚಾಮುಂಡೇಶ್ವರಿಯನ್ನು ಹೇಗೆ ಒಪ್ಪುತ್ತೀರಿ

» ಮೊದಲನೇ ಪುಟದಿಂದ

ಯಾರನ್ನೋ ಓಲೈಸಲು ಧರ್ಮವನ್ನು, ಭಾಷೆಯನ್ನು ಹಿಯಾಳಿಸುವವರಿಗೆ ಯಾರೂ ಬೆಂಬಲಿ ಸಬಾರದೆಂದರು.

**ಮಂಜುನಾಥ ಕ್ಷಮಿಸುವುದಿಲ್ಲ**

ಧರ್ಮಸ್ಥಳದಲ್ಲಿ ನಡೆಯುತ್ತಿರುವ ಎಸ್‌ಐಟಿ ತನಿಖೆ ವಿಚಾರವಾಗಿ ಮಾತನಾಡಿದ ಅವರು, ಧರ್ಮ ವಿಚಾರಗಳಿಂದ ದೂರವಿರುತ್ತೇನೆ. ಯಾವುದು ಸರಿ–ತಪ್ಪು ಎಂಬು ದನ್ನು ತನಿಖೆ ಬಳಿಕ ಹೇಳಬೇಕಾಗುತ್ತದೆ. ಈ ಹಂತದಲ್ಲಿ ನಾವು ಮಾತನಾಡಿದರೆ ತಪ್ಪಾಗುತ್ತದೆ. ತನಿಖೆ ಪ್ರಾಮಾಣಿ ಕವಾಗಿ ನಡೆದಾಗ ಯಾರೇ ಎಷ್ಟೇ ದೊಡ್ಡ ವ್ಯಕ್ತಿಗಳಾದರೂ ಮಾಡಿದ ಪಾಪಕ್ಕೆ, ಕರ್ಮಕ್ಕೆ ಶಿಕ್ಷೆ ಅನುಭವಿಸುತ್ತಾರೆ. ಷಡ್ಯಂತ್ರ ನಡೆದಿದ್ದರೆ ನಾವೆಲ್ಲಾ ಆರಾಧಿಸುವ ಮಂಜುನಾಥ ಕ್ಷಮಿಸುವುದಿಲ್ಲವೆಂದರು.

# ಪೋಕ್ಸೋ: 14 ಪ್ರಕರಣದಲ್ಲಿ ಅಪರಾಧಿಗಳಿಗೆ ಶಿಕ್ಷೆ

» ಮೊದಲನೇ ಪುಟದಿಂದ

ನ್ಯಾಯಾಲಯದಲ್ಲಿ ನ್ಯಾಯಾಧೀಶರು ಅತ್ಯಾಚಾರಗಳಿಗೆ ಶಿಕ್ಷೆ ನೀಡುವುದರ ಮೂಲಕ ಎಚ್ಚರಿಕೆ ಕೊಟ್ಟಿದ್ದಾರೆ. ಬಾಲಕಿಯ ಮೇಲೆ ಅತ್ಯಾಚಾರ ನಡೆದಿರುವ ಶಿಕ್ಷೆಯಲ್ಲಿ ಸಕಲೇಶಪುರ ಗ್ರಾಮಾಂತರ ಪೊಲೀಸ್ ಠಾಣೆಯಲ್ಲಿ ದಾಖಲಾದ ಪ್ರಕರಣಕ್ಕೆ ಸಂಬಂಧಿಸಿದಂತೆ ಅಪರಾಧಿಗೆ 30 ವರ್ಷಗಳವರೆಗೂ ಜಿಲ್ಲಾ ನ್ಯಾಯಾಲಯ ಜೀವಾವಧಿ ಶಿಕ್ಷೆ ವಿಧಿಸಿದೆ ಎಂದರು.

ಮಕ್ಕಳ ಮೇಲೆ ನಡೆಯುವ ದೌರ್ಜನ್ಯ ತಪ್ಪಿಸಲೆಂದೇ ಸರ್ಕಾರ ಮಕ್ಕಳ ರಕ್ಷಣಾ ಅಧಿಕಾರಿಗಳು, ಸಹಾಯವಾಣಿ, ಮಹಿಳಾ ಮತ್ತು ಮಕ್ಕಳ ಕಲ್ಯಾಣ ಇಲಾಖೆ ತೆರೆದಿದೆ. ಹೀಗಾಗಿ ಮಕ್ಕಳ ಮೇಲೆ ದೌರ್ಜನ್ಯ ನಡೆದಾಗ ತಕ್ಷಣ ತಿಳಿಸುವ ಕೆಲಸ ಮಾಡಬೇಕು. ಸಂಬಂಧಪಟ್ಟ ಅಧಿಕಾರಿಗಳು ಮಕ್ಕಳನ್ನು ರಕ್ಷಣೆ ಮಾಡಿ, ಪೊಲೀಸ್ ಠಾಣೆಯಲ್ಲಿ ಆರೋಪಿಗಳ ವಿರುದ್ಧ ಪ್ರಕರಣ ದಾಖಲಿಸಿದ ನಂತರ ನ್ಯಾಯಾಲಯದಲ್ಲಿ ಸಾಕ್ಷಿ, ಆಧಾರದ ಮೂಲಕ ಶಿಕ್ಷೆ ಮತ್ತು ದಂಡ ವಿಧಿಸುವ ಕೆಲಸ ಮಾಡಲಾಗುವುದು. ಅಪ್ರಾಪ್ತ ಮಕ್ಕಳ ಮೇಲೆ ಯುವಕರಿಂದ ವೃದ್ಧ ರವರೆಗೂ ದೌರ್ಜನ್ಯ ನಡೆಸುವ ಪ್ರಕರಣಗಳು ದಾಖಲಾಗಿದೆ. ಶಾಲಾ ಶಿಕ್ಷಕರು ವಿದ್ಯಾರ್ಥಿಗಳ ಮೇಲೆ ನಡೆಸಿರುವ ದೌರ್ಜನ್ಯ ಪ್ರಕರಣಗಳು ಇವೆ. ಆರೋಪಕ್ಕೆ ಸಂಬಂಧಪಟ್ಟಂತೆ ನ್ಯಾಯಾಲ ಯದಲ್ಲಿ ಸೂಕ್ತ ಸಾಕ್ಷಿಯನ್ನು ಒದಗಿಸಿದರೆ ನ್ಯಾಯಾಲಯ ಕಠಿಣ ಶಿಕ್ಷೆ ವಿಧಿಸಲಿದೆ ಎಂದು ಹೇಳಿದರು.

# ಅತಿಥಿ ಉಪನ್ಯಾಸಕರ ನೇಮಕಕ್ಕೆ ಆಗ್ರಹಿಸಿ ಪ್ರತಿಭಟನೆ




• ಪ್ರಜೋದಯ ವರದಿ

**ಹಾಸನ:** ಪದವಿ ಕಾಲೇಜುಗಳಿಗೆ ಅತಿಥಿ ಉಪನ್ಯಾಸಕರ ನೇಮಕ ಮಾಡಿ ಕಲಿಕೆಗೆ ನೆರವಾಗ ಬೇಕೆಂದು ಆಗ್ರಹಿಸಿ ಎಐಡಿಎಸ್‌ಓ ನೇತೃತ್ವದಲ್ಲಿ ವಿದ್ಯಾರ್ಥಿಗಳು ಮಂಗಳವಾರ ನಗರದ ಹೇಮಾವತಿ ಪ್ರತಿಮೆ ಎದುರು ಪ್ರತಿಭಟನೆ ನಡೆಸಿದರು.

ಎಐಡಿಎಸ್‌ಓ ಜಿಲ್ಲಾ ಸಂಚಾಲಕಿ ಚೈತ್ರ ಅವರು ಮಾತನಾಡಿ, ರಾಜ್ಯಾದ್ಯಂತ ಪದವಿ ತರಗತಿಗಳು ಪ್ರಾರಂಭವಾಗಿ ತಿಂಗಳು ಕಳೆದರೂ ಅತಿಥಿ ಉಪನ್ಯಾಸಕರ ನೇಮಿಸಿಲ್ಲ. ರಾಜ್ಯದ ಎಲ್ಲಾ ಸರ್ಕಾರಿ ಕಾಲೇಜುಗಳು ಅತಿಥಿಗಳನ್ನೇ ಅವಲಂಬಿಸಿವೆ. ಉಪನ್ಯಾಸಕರಿಲ್ಲದೆ ಸರಿಯಾಗಿ ತರಗತಿ ನಡೆಯದೆ ಕಲಿಕೆ ಮೇಲೆ ವ್ಯತಿರಿಕ್ತ ಪರಿಣಾಮ ಬೀರಿದೆಯೆಂದರು.

ಮುಂದಿನ ತಿಂಗಳು ಪದವಿ ವಿದ್ಯಾರ್ಥಿಗಳ ಮೊದಲ ಆಂತರಿಕ ಪರೀಕ್ಷೆಗಳು ನಡೆಯಬೇಕಿದ್ದು ಪಾಠಗಳು ಇನ್ನೂ ಆರಂಭವಾಗಿಲ್ಲ. ಯುಜಿಸಿಯ ಹೊಸ ನಿರ್ದೇಶನ ಹಾಗು ಪ್ರಕರಣ ನ್ಯಾಯಾಲಯದ ಮೆಟ್ಟಿಲೇರಿರುವುದರಿಂದ ಉಪನ್ಯಾಸಕರ ನೇಮಕಾತಿಯು ನನೆಗುದಿಗೆ ಬಿದ್ದಿದೆ. ಶೈಕ್ಷಣಿಕ ವಿಷಯಗಳಲ್ಲಿ ರಾಜ್ಯ ಸರ್ಕಾರವು ಕೇಂದ್ರದ ನಿರ್ಧಾರಗಳನ್ನು ಪಾಲಿಸವುದು ಖಡ್ಡಾಯವಲ್ಲವೆಂದು ಸರ್ವೋಚ್ಚ ನ್ಯಾಯಾಲಯ ಹೇಳಿದೆ. ಅದಕ್ಕೆ ಅನುಗುಣವಾಗಿ ರಾಜ್ಯ ಸರ್ಕಾರವು ವಿದ್ಯಾರ್ಥಿಗಳ ಶೈಕ್ಷಣಿಕ ಹಿತಾಸಕ್ತಿಗೆ ಪೂರಕವಾದ ಸ್ಪಷ್ಟ ನಿಲುವು ತಾಳಬೇಕೆಂದು ಒತ್ತಾಯಿಸಿದರು.

ಶೈಕ್ಷಣಿಕ ಚಟುವಟಿಕೆಗಳು ಸರಾಗವಾಗಿ ನಡೆಯುವ ನಿಟ್ಟಿನಲ್ಲಿ ಸೂಕ್ತ ಕ್ರಮಗಳನ್ನು ತುರ್ತಾಗಿ ಕೈಗೊಂಡು ಗೊಂದಲ ನಿವಾರಿಸಬೇಕೆಂದು ಆಗ್ರಹಿಸಿದರು.

ಜಿಲ್ಲಾಧಿಕಾರಿ ಕೆ.ಎಸ್.ಲತಾ ಕುಮಾರಿ ಅವರ ಮೂಲಕ ರಾಜ್ಯ ಸರ್ಕಾರಕ್ಕೆ ಮನವಿ ಸಲ್ಲಿಸಲಾ ಯಿತು. ಎಐಡಿಎಸ್‌ಓ ಜಿಲ್ಲಾ ಕಾರ್ಯಕರ್ತರಾದ ಸುಷ್ಮಾ, ಯಾಸ್ಮಿನ್, ಮೋಹನ್, ತಿಲಕ್, ಅಭಿಷೇಕ್ ಇತರರಿದ್ದರು.

# ಕಾಲೇಜಿಗೆ ನುಗ್ಗಿ ವಸ್ತುಗಳ ಕಳವು

• ಪ್ರಜೋದಯ ವರದಿ

**ಸಕಲೇಶಪುರ:** ಪಟ್ಟಣದ ಖಾಸಗಿ ಶಾಲೆಗೆ ನುಗ್ಗಿರುವ ಐವರು ಕಳ್ಳರು ಪೀಠೋಪಕರಣಗಳನ್ನು ಧ್ವಂಸಗೊಳಿಸಿ ಎರಡು ಮೊಬೈಲ್, ಪ್ರಿಂಟರ್, ಡಿವಿಆರ್ ಹಾಗು ಕಂಪ್ಯೂಟರ್‌ಗಳನ್ನು ಕಳವು ಮಾಡಿಕೊಂಡು ಪರಾರಿಯಾಗಿದ್ದಾರೆ.

ಪಟ್ಟಣದ ಅಚೀವರ್ಸ್ ಪ್ರಜ್ಞಾ ಕಾಲೇಜಿಗೆ ಮಾಸ್ಕ್ ಹಾಕಿಕೊಂಡು ಒಳ ನುಗ್ಗಿದ ಕಳ್ಳರು, ಸುತ್ತಿಗೆಯಿಂದ ಬೀಗ ಒಡೆದು 45 ನಿಮಿಷಗಳ ಕಾಲ ಕಾಲೇಜಿನೊಳಗೆ ಬೆಲೆಬಾಳುವ ವಸ್ತುಗಳಿಗಾಗಿ ಹುಡುಕಾಟ ನಡೆಸಿದ್ದಾರೆ. ಬಳಿಕ ಕಳ್ಳರು ಕಾಲೇಜಿನಲ್ಲಿ ಅಳವಡಿಸಲಾಗಿದ್ದ ಮೂರು ಡಿವಿಆರ್‌ಗಳಲ್ಲಿ ಒಂದು ಡಿವಿಆರ್ ಕದ್ದೊಯ್ದಿದ್ದಾರೆ. ಕಳ್ಳರ ದಾಂಧಲೆ ಹಾಗು ಕಳ್ಳತನದ ದೃಶ್ಯ ಸಿಸಿಟಿವಿಯಲ್ಲಿ ಸೆರೆಯಾಗಿದ್ದು ಕಾಲೇಜಿನ ಸಿಬ್ಬಂದಿ ಕಳ್ಳತನದಲ್ಲಿ ಭಾಗಿಯಾಗಿರುವ ಶಂಕೆ ವ್ಯಕ್ತ ವಾಗಿದೆ. ಸ್ಥಳಕ್ಕೆ ಪೊಲೀಸರು ಭೇಟಿ ನೀಡಿ ಪರಿಶೀಲನೆ ನಡೆಸಿದ್ದಾರೆ.

# ಚಿನ್ನಾಭರಣ ಕಳವು

• ಪ್ರಜೋದಯ ವರದಿ

**ಹೊಳೆನರಸೀಪುರ:** ಮನೆ ಬಾಗಿಲು ಮುರಿದು ಒಳನುಗ್ಗಿರುವ ಕಳ್ಳರು 1.25 ಲಕ್ಷ ರೂ. ಮೌಲ್ಯದ ಚಿನ್ನಾಭರಣ ಕಳವು ಮಾಡಿರುವ ಘಟನೆ ತಾಲ್ಲೂಕಿನ ತೆರಣ್ಯ ಗ್ರಾಮದಲ್ಲಿ ಇತ್ತೀಚೆಗೆ ನಡೆದಿದೆ. ಗ್ರಾಮದ ಟಿ.ಆರ್.ತ್ರಿಭುವನ್ ಅವರು ಕಾರ್ಯನಿಮಿತ್ತ ಮನೆಗೆ ಬೀಗ ಹಾಕಿ ಕುಟುಂಬ ಸಮೇತ ಆ.30 ರಂದು ಮೈಸೂರಿಗೆ ತೆರಳಿದ್ದರು. ಸೆ.1ರ ಬೆಳಿಗ್ಗೆ 9 ಗಂಟೆಗೆ ವಾಪಾಸ್ ಬಂದು ನೋಡಿದಾಗ ಬಾಗಿಲು ಮುರಿದಿರುವುದು ತಿಳಿದಿದೆ. ಬಲವಾದ ಆಯುಧದಿಂದ ಬೀಗ ಒಡೆದು ಪ್ರವೇಶಿಸಿರುವ ಕಳ್ಳರು ಬೀರುವಿನಲ್ಲಿಟ್ಟಿದ್ದ 2 ಗ್ರಾಂ ತೂಕದ ಚಿನ್ನದ ಎರಡು ಉಂಗುರ, 300 ಗ್ರಾಂ ತೂಕದ ಒಂದು ಬೆಳ್ಳಿ ತಟ್ಟೆ, 120 ಗ್ರಾಂ ತೂಕದ ಒಂದು ಬೆಳ್ಳಿ ಚೊಂಬು, 50 ಗ್ರಾಂ ತೂಕದ ಒಂದು ಜೊತೆ ಬೆಳ್ಳಿ ಕುಂಕುಮ ಬಟ್ಟಲು, 50 ಗ್ರಾಂ ತೂಕದ ಬೆಳ್ಳಿ ಜಾಮೂನು ಬಟ್ಟಲು, 50 ಗ್ರಾಂ ತೂಕದ ಒಂದು ಬೆಳ್ಳಿ ಪಂಚಪತ್ರೆ, 40 ಗ್ರಾಂ ತೂಕದ ಒಂದು ಬೆಳ್ಳಿ ಉದ್ದರಣೆ, 20 ಗ್ರಾಂ ತೂಕದ ಬೆಳ್ಳಿ ಜಾಮೂನು ಬಟ್ಟಲು ಕಳವು ಮಾಡಿದ್ದಾರೆ. ಪಟ್ಟಣ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

# ಸೆ. 21ರ ಬಸವ ಸಂಸ್ಕೃತಿ ಅಭಿಯಾನ ಯಶಸ್ಸಿಗೆ ಕರೆ

• ಪ್ರಜೋದಯ ವರದಿ



**ಹಾಸನ:** ವಿಶ್ವಗುರು ಬಸವಣ್ಣ ಅವರನ್ನು ರಾಜ್ಯ ಸರ್ಕಾರ ಸಾಂಸ್ಕೃತಿಕ ನಾಯಕನೆಂದು ಘೋಷಿಸಿ ಒಂದು ವರ್ಷ ಪೂರೈಸಿರುವ ಹಿನ್ನಲೆ ರಾಜ್ಯಾದ್ಯಂತ ಬಸವ ಸಂಸ್ಕೃತಿ ಅಭಿ ಯಾನ ಹಮ್ಮಿಕೊಂಡಿದ್ದು ಸೆ.21ರಂದು ನಗರಕ್ಕೆ ಬಸವಣ್ಣ ಅವರ ಸ್ತಬ್ಧಚಿತ್ರ ಆಗಮಿಸಲಿದೆಯೆಂದು ಪುಷ್ಪಗಿರಿ ಮಹಾ ಸಂಸ್ಥಾನ ಮಠದ ಶ್ರೀ ಸೋಮಶೇಖರ ಸ್ವಾಮೀಜಿ ಅವರು ಹೇಳಿದರು.

ನಗರದ ತಣ್ಣೀರುಹಳ್ಳ ಮಠದಲ್ಲಿ ಮಂಗಳವಾರ ನಡೆದ ಬಸವ ಸಂಸ್ಕೃತಿ ಅಭಿಯಾನ ಪೂರ್ವಭಾವಿ ಸಭೆಯಲ್ಲಿ ಮಾತನಾಡಿ, ಸೆ.21 ರಂದು ಚಿಕ್ಕಮಗಳೂರಿನಿಂದ ಆಗಮಿಸುವ ಸ್ತಬ್ಧ ಚಿತ್ರಕ್ಕೆ ಬೇಲೂರಿನಲ್ಲಿ ಅದ್ದೂರಿ ಸ್ವಾಗತ ಕೋರಲಾಗುವುದು. ಅಂದು ಬೆಳಿಗ್ಗೆ 11 ಗಂಟೆಗೆ ಹಾಸನಾಂಬ ಕಲಾಕ್ಷೇತ್ರದಲ್ಲಿ ಸಂವಾದ ಕಾರ್ಯ ಕ್ರಮ ಇರಲಿದ್ದು ಹೆಚ್ಚಿನ ಸಂಖ್ಯೆಯಲ್ಲಿ ವಿದ್ಯಾರ್ಥಿಗಳನ್ನು ಕರೆತರಬೇಕು. ಮಧ್ಯಾಹ್ನ 3 ಗಂಟೆಗೆ ನಗರದ ಪ್ರಮುಖ ರಸ್ತೆಯಲ್ಲಿ ಮೆರವಣಿಗೆ ಸಾಗಲಿದೆ. ಸಾರ್ವಜನಿಕರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿ ಕಾರ್ಯಕ್ರಮ ಯಶಸ್ವಿಗೊಳಿಸಬೇಕೆಂದು ಹೇಳಿದರು.

ತಣ್ಣೀರುಹಳ್ಳ ಮಠದ ಶ್ರೀ ವಿಜಯಕುಮಾರ ಸ್ವಾಮೀಜಿ ಅವರು ಮಾತನಾಡಿ, ಈ ಹಿಂದೆ ಧಾರವಾಡದಲ್ಲಿ ನಡೆದ ಬಸವ ಮಠಾಧೀಶರ ಸಭೆಯಲ್ಲಿ ರಾಜ್ಯಾದ್ಯಂತ ಬಸವ ಸಂಸ್ಕೃತಿ ಅಭಿಯಾನ ನಡೆಸಲು ತೀರ್ಮಾನಿಸಲಾಗಿತ್ತು. ಶ್ರೀ ಮಠದಿಂದ ಅಭಿಯಾನಕ್ಕೆ ಹೆಚ್ಚಿನ ಸಹಕಾರ ನೀಡಲಾಗು ತ್ತದೆಂದರು.

ಅರಕಲಗೂಡು ದೊಡ್ಡಮಠದ ಶ್ರೀ ಮಲ್ಲಿಕಾರ್ಜುನ ಸ್ವಾಮೀಜಿ ಮಾತನಾಡಿ, ಸೆ.1 ರಿಂದ ಅ.1ರವರೆಗೆ ಅಭಿಯಾನ ಹಮ್ಮಿಕೊಳ್ಳಲಾಗಿದೆ. ಸಮ, ವ್ಯಸನಮುಕ್ತ, ಸದೃಢ ಸಮಾಜ ಕಟ್ಟುವುದು, ಮಕ್ಕಳಲ್ಲಿ ಆಧ್ಯಾತ್ಮಿಕ ಭಾವನೆ ಮೂಡಿಸುವುದು ತುರ್ತು ಅಗತ್ಯವಾಗಿದೆ ಎಂದರು.

ಸಭೆಯಲ್ಲಿ ವಿವಿಧ ಮಠಾಧೀಶರು, ಅಖಿಲ ಭಾರತ ವೀರಶೈವ ಮಹಾಸಭಾ ಜಿಲ್ಲಾಧ್ಯಕ್ಷ ನವಿಲೆ ಪರಮೇಶ್, ಪುಷ್ಪಗಿರಿ ಮಠದ ಕಾರ್ಯದರ್ಶಿ ಗ್ರಾನೈಟ್ ರಾಜಶೇಖರ, ತಾಲ್ಲೂಕು ವೀರಶೈವ ಲಿಂಗಾಯತ ಮಹಾಸಭಾ ಅಧ್ಯಕ್ಷ ಕಟ್ಟಾಯ ಶಿವಕುಮಾರ್, ಎಂ.ಎನ್. ಕುಮಾರಸ್ವಾಮಿ, ಬೇಲೂರು ತಾಲ್ಲೂಕು ಶರಣ ಸಾಹಿತ್ಯ ಪರಿಷತ್ ಅಧ್ಯಕ್ಷ ಹೆಬ್ಬಾಳು ಹಾಲಪ್ಪ, ಆನಂದ್ ಪಟೇಲ್, ರವಿಕುಮಾರ್, ಬಿ.ಕೆ.ಚಂದ್ರಕಲಾ, ಗೀತಾ ಶಿವರಾಜ್ ಇತರರಿದ್ದರು.



**ಹಾಸನ: ಈ ಬಾರಿಯ ಮೈಸೂರು ದಸರಾ ಉದ್ಘಾಟನೆಗೆ ಆಯ್ಕೆಯಾಗಿರುವ ಅಂತರ ರಾಷ್ಟ್ರೀಯ ಬೂಕರ್ ಪ್ರಶಸ್ತಿ ಪುರಸ್ಕೃತ ಹಿರಿಯ ಸಾಹಿತಿ ಬಾನು ಮುಷ್ತಾಕ್ ಅವರನ್ನು ಅಖಿಲ ಕರ್ನಾಟಕ ಅಂತರ ಧರ್ಮಿಯ ಮತ್ತು ಅಂತರ ಜಾತಿಯವರ ವಿವಾಹಿತರ ವೇದಿಕೆಯಿಂದ ಅಭಿನಂದಿಸಲಾಯಿತು. ವೇದಿಕೆ ಸಂಸ್ಥಾಪಕ ಅಧ್ಯಕ್ಷ ಬಿ.ಎಸ್.ಮನೋಜ್ ಕುಮಾರ್, ಉಪಾಧ್ಯಕ್ಷ ಹೆಚ್.ಎಸ್. ಹಸೀನಾ ಬೇಗಂ, ಗಂಡಸಿ ಮಂಜೇಗೌಡ, ಹೆಚ್.ದೇವರಾಜು ಉಪಸ್ಥಿತರಿದ್ದರು.**

# ಇಂದು ಬಾನು ಮುಷ್ತಾಕ್‌ಗೆ ಅಧಿಕೃತ ಆಹ್ವಾನ

**ಹಾಸನ:** ನಾಡಹಬ್ಬ ಮೈಸೂರು ದಸರಾ ಮಹೋತ್ಸವ ಉದ್ಘಾಟಕರಾಗಿ ಆಯ್ಕೆಯಾಗಿರುವ ಸಾಹಿತಿ ಬಾನು ಮುಷ್ತಾಕ್ ಅವರಿಗೆ ಬುಧವಾರ ಮೈಸೂರು ಜಿಲ್ಲಾಡಳಿತ ಅಧಿಕೃತ ಆಹ್ವಾನ ನೀಡಲಿದೆ. ಬುಧವಾರ ಸಂಜೆ 4 ಗಂಟೆಗೆ ನಗರಕ್ಕೆ ಆಗಮಿ ಸಲಿರುವ ಮೈಸೂರು ಜಿಲ್ಲಾಡಳಿತದ ಅಧಿಕಾರಿಗಳು, ಬಾನು ಮುಷ್ತಾಕ್ ಅವರ ಸ್ವಗೃಹಕ್ಕೆ ತೆರಳಿ ಸರ್ಕಾರದ ಪರವಾಗಿ ಅಧಿಕೃತ ಆಹ್ವಾನ ನೀಡಲಿದೆ. ಸೆ.22ರಂದು ಮೈಸೂರಿನ ಚಾಮುಂಡಿ ಬೆಟ್ಟದಲ್ಲಿ ದಸರಾ ಮಹೋತ್ಸವವನ್ನು ಸಾಹಿತಿ ಬಾನು ಮುಷ್ತಾಕ್ ಅವರು ಉದ್ಘಾಟಿಸಲಿದ್ದಾರೆ.

# ದಿವ್ಯ ಆಂಗ್ಲ ಮಾಧ್ಯಮ ಶಾಲೆಗೆ ಸಮಗ್ರ ಪ್ರಶಸ್ತಿ

**ಬೇಲೂರು:** ಇತ್ತೀಚೆಗೆ ನಡೆದ ವಲಯ ಮಟ್ಟದ ಹಿರಿಯ ಪ್ರಾಥಮಿಕ ಶಾಲಾ ಮಟ್ಟದ ಕ್ರೀಡಾಕೂಟದಲ್ಲಿ ಪಟ್ಟಣದ ದಿವ್ಯ ಆಂಗ್ಲ ಮಾಧ್ಯಮ ಶಾಲೆ ಸಮಗ್ರ ಪ್ರಶಸ್ತಿ ಪಡೆದಿದೆ.

ಬಾಲಕಿಯರ ವಿಭಾಗದಲ್ಲಿ 100 ಮತ್ತು 200 ಮೀ. ಓಟ, ಉದ್ದ ಜಿಗಿತದಲ್ಲಿ ಚಿನ್ಮಯ ಪ್ರಥಮ, ಚಕ್ರ ಎಸೆತದಲ್ಲಿ ಲಿಖಿತ್ ಪ್ರಥಮ, ಅಲಿಜ್ಞಾ ಫಾತಿಮಾ ಗುಂಡು ಎಸೆತದಲ್ಲಿ ದ್ವಿತೀಯ, ಉದ್ದ ಜಿಗಿತದಲ್ಲಿ ನಮ್ರತಾ ದ್ವಿತೀಯ, ಬಾಲಕಿಯರ ಖೋ ಖೋ ಪ್ರಥಮ, ಥ್ರೋ ಬಾಲ್ ಪ್ರಥಮ, ವಾಲಿಬಾಲ್ ಪಂದ್ಯದಲ್ಲಿ ಪ್ರಥಮ ಸ್ಥಾನ ಪಡೆದಿದ್ದಾರೆ. ವೈಯಕ್ತಿಕ ಪ್ರಶಸ್ತಿಗೆ ಚಿನ್ಮಯ ಭಾಜನರಾಗಿದ್ದಾರೆ. ಬಾಲಕರ ವಿಭಾಗದಲ್ಲಿ ಚಕ್ರ ಎಸೆತ ಮತ್ತು ಎತ್ತರ ಜಿಗಿತದಲ್ಲಿ ಯಶ್ವಂತ್ ಪ್ರಥಮ, 400 ಮೀ.



ಓಟ ಮತ್ತು ಎತ್ತರ ಜಿಗಿತದಲ್ಲಿ ಪ್ರಣವ್ ಪ್ರಥಮ ಹಾಗು ದ್ವಿತೀಯ, ಉದ್ದ ಜಿಗಿತದಲ್ಲಿ ಅರ್ಮಾನ್ ಪ್ರಥಮ, ಶೈಜಾನ್ ದ್ವಿತೀಯ ಸ್ಥಾನ ಪಡೆದರೆ, ಥ್ರೋ ಬಾಲ್ ಮತ್ತು ಕಬಡ್ಡಿಯಲ್ಲಿ ಪ್ರಥಮ ಸ್ಥಾನ ಗಳಿಸಿ ತಾಲ್ಲೂಕು ಮಟ್ಟಕ್ಕೆ ಆಯ್ಕೆಯಾಗಿದ್ದಾರೆ. ಯಶ್ವಂತ್ ವೈಯಕ್ತಿಕ ಪ್ರಶಸ್ತಿ ಪಡೆದಿದ್ದಾರೆ.

## ಸೆಪ್ಟೆಂಬರ್ ಕ್ರಾಂತಿ ರಹಸ್ಯ ಬಿಚ್ಚಿಟ್ಟ ಆರ್.ರಾಜೇಂದ್ರ | ಬಾಲಕೃಷ್ಣ ಮಂಪರು ಪರೀಕ್ಷೆಗೆ ಆಗ್ರಹ

# ಸಿಎಂ ಮಾಡ್ತಾರೆಂದರೆ ಇವರೆಲ್ಲ ಬಿಜೆಪಿಗೆ ಹೋಗಬಹುದು

• ಪ್ರಜೋದಯ ವರದಿ



**ಬೆಂಗಳೂರು:** ವಾಲ್ಮೀಕಿ ಸಮಾಜ ನಾಯಕ, ಮುಖ್ಯ ಮಂತ್ರಿ ಸಿದ್ದರಾಮಯ್ಯ ಅವರ ಆಪ್ತ ಬಳಗದ ಕೆ.ಎನ್.ರಾಜಣ್ಣ ಅವರನ್ನು ಸಚಿವ ಸ್ಥಾನದಿಂದ ವಜಾಗೊಳಿಸಿದ ಬಳಿಕ ಕಾಂಗ್ರೆಸ್‌ನಲ್ಲಿ ಬಣ ರಾಜ ಕೀಯ ತಾರಕಕ್ಕೇರಿದ್ದು ಮಂಗಳವಾರ ಮಾಗಡಿ ಶಾಸಕ ಹೆಚ್.ಸಿ.ಬಾಲಕೃಷ್ಣ ಹಾಗು ವಿಧಾನ ಪರಿಷತ್ ಸದಸ್ಯ ಆರ್.ರಾಜೇಂದ್ರ ಅವರು ಪರಸ್ಪರ ವಾಗ್ದಾಳಿ ನಡೆಸಿದ್ದಾರೆ.

ಮುಖ್ಯಮಂತ್ರಿ ಮಾಡುತ್ತೇವೆ ಅಂದರೆ, ಇವರೆಲ್ಲ ಬಿಜೆಪಿಗೆ ಹೋಗಬಹುದು. ಇದೇ ಕೆ. ಎನ್.ರಾಜಣ್ಣ ಅವರು ಹೇಳಿದ್ದ ಸೆಪ್ಟೆಂಬರ್ ಕ್ರಾಂತಿಯೆಂದು ಆರ್.ರಾಜೇಂದ್ರ ಹರಿಹಾಯ್ದರು. ಶಾಸಕ ಹೆಚ್.ಸಿ. ಬಾಲಕೃಷ್ಣ ನೀಡಿದ ಹೇಳಿಕೆಗೆ ತಿರುಗೇಟು ನೀಡಿದ ರಾಜೇಂದ್ರ, ಸೆಪ್ಟೆಂಬರ್ ಕ್ರಾಂತಿ ಬಾಲಕೃಷ್ಣ ಅವ ರಿಂದಲೇ ಆರಂಭ ಆಗಲಿದೆ. ಸಿದ್ದರಾಮಯ್ಯ ಅವರ ಪರವಾಗಿ ಇದ್ದೇವೆಂಬ ಕಾರಣಕ್ಕಾಗಿ ನಮಗೆ ಅನ್ಯಾಯ ಆಗಿದೆ. ನಾವು ಇನ್ನು 10 ವರ್ಷ ಬಿಟ್ಟರೂ ಸಿದ್ದರಾಮಯ್ಯನವರ ಪರವೇ ಇರುತ್ತೇವೆ. ಬೇರೆ ಯಾರನ್ನೊ ತೋರಿಸಿ ನಾವು ಮತ ಪಡೆಯುವುದು ಅಷ್ಟರಲ್ಲೇ ಇದೆ ಎಂದು ವಾಗ್ದಾಳಿ ನಡೆಸಿದರು.

ಸಂಚು, ಪಿತೂರಿಯಿಂದ ರಾಜಣ್ಣ ಅವರ ರಾಜೀನಾಮೆ ಪಡೆದಿದ್ದಾರೆ. ಭ್ರಷ್ಟಾಚಾರ ಮಾಡಿ ಸಚಿವ ಸ್ಥಾನ ಬಿಟ್ಟಿಲ್ಲ. ರಾಜಣ್ಣ ಯಾವತ್ತೂ ಪಕ್ಷದ ವಿರುದ್ಧ ಮಾತನಾಡಿಲ್ಲ ಎಂದರು.

ಡಿ.ಕೆ.ಶಿವಕುಮಾರ್ ಜೊತೆಗೆ ಕೆಲವರು ಕಾಲು ಹೊರಗಡೆ ಇಟ್ಟಿದ್ದಾರೆ ಎಂಬುದು ನಿಜವೇ ಎಂಬ ಪ್ರಶ್ನೆಗೆ, ಹೌದು ಎಂದ ರಾಜೇಂದ್ರ, ನಾವು ಸಿದ್ದರಾಮಯ್ಯ ಪರ ಇದ್ದೇವೆ ಎಂದೇ ಇಷ್ಟೆಲ್ಲ ಮಾಡಿದ್ದಾರೆ. ನಮಗೆ ಆಗಿರುವ ಅನ್ಯಾಯದ ಪ್ರಕಾರ ಮತ್ತೆ ಸಚಿವ ಸ್ಥಾನ ಕೊಡಬೇಕು. ಪರಿಶಿಷ್ಟ ವರ್ಗಕ್ಕೆ ಸೇರಿದ 15 ಶಾಸಕರಿದ್ದಾರೆ. ಹೀಗಾಗಿ, ವಾಲ್ಮೀಕಿ ಸಮುದಾಯಕ್ಕೆ ಸಚಿವ ಸ್ಥಾನ ಕೊಡ ಬೇಕೆಂದು ಆಗ್ರಹಿಸಿದರು. ವಿಧಾನಸಭೆಯಲ್ಲಿ ರಾಜಣ್ಣ ಆರ್ ಎಸ್ಎಸ್ ಗೀತೆ ಹಾಡಲಿಲ್ಲ. ಬಾಲ್ಯದಿಂದ ಚಡ್ಡಿ ಹಾಕಿಕೊಂಡು ಶಾಖೆಗೆ ಹೋಗಲಿಲ್ಲ ಎಂದು ಹೇಳುವ ಮೂಲಕ ಡಿ.ಕೆ.ಶಿವಕುಮಾರ್ ವಿರುದ್ಧ ಪರೋಕ್ಷವಾಗಿ ರಾಜೇಂದ್ರ ವಾಗ್ದಾಳಿ ನಡೆಸಿದರು. ಸಿದ್ದರಾಮಯ್ಯ ಅವರ ಪರ ಇರುವುದರಿಂದ ನಾವು ಇಷ್ಟು ಧೈರ್ಯವಾಗಿದ್ದೇವೆ. ಸೆಪ್ಟೆಂಬರ್‌ನಲ್ಲಿ ಇವರ (ಬಾಲಕೃಷ್ಣ) ಬ್ರೈನ್ ಮ್ಯಾಪ್ ಮಾಡಿ. ಆಗ ಯಾರ್‍ಯಾರು ಯಾರ್‍ಯಾರ ಸಂಪರ್ಕದಲ್ಲಿದ್ದಾರೆಂದು ಗೊತ್ತಾಗಲಿದೆ ಎಂದೂ ಕಿಡಿಕಾರಿದರು.

# ರಾಜಣ್ಣ ಬಿಜೆಪಿಗೆ ಅರ್ಜಿ ಹಾಕಿದ್ದಾರೆ



**ಬೆಂಗಳೂರು:** ಸಚಿವ ಸಂಪುಟದಿಂದ ವಜಾ ಗೊಂಡಿರುವ ಮಾಜಿ ಸಚಿವ ಕೆ.ಎನ್.ರಾಜಣ್ಣ ಬಿಜೆಪಿಗೆ ಅರ್ಜಿ ಹಾಕಿದ್ದಾರೆ. ಅವರು ನೂರಕ್ಕೆ ನೂರರಷ್ಟು ಬಿಜೆಪಿ ಸೇರುತ್ತಾರೆ. ಅವರು ಸಚಿವ ಸ್ಥಾನ ಕಳೆದುಕೊಂಡಿದ್ದರ ಹಿಂದೆ ಯಾರ ಷಡ್ಯಂತ್ರವೂ ಇಲ್ಲ. ತಮ್ಮ ಮಾತಿನಿಂದಲೇ ಕೆಟ್ಟಿದ್ದಾರೆ. ಬೇರೆ ಪಕ್ಷಕ್ಕೆ ಹೋಗುವ ಮುನ್ನ ನಮ್ಮ ಮೇಲೆ ಗೂಬೆ ಕೂರಿಸುವ ಕೆಲಸ ಮಾಡುತ್ತಿದ್ದಾರೆ ಎಂದು ಮಾಗಡಿ ಶಾಸಕ ಹೆಚ್.ಸಿ.ಬಾಲಕೃಷ್ಣ ವಾಗ್ದಾಳಿ ನಡೆಸಿದರು.

ರಾಮನಗರದಲ್ಲಿ ಸುದ್ದಿಗಾರರಿಗೆ ಪ್ರತಿಕ್ರಿಯಿಸಿದ ಅವರು, ಸಚಿವರಾಗಿದ್ದಾಗ ರಾಜಣ್ಣ ಹೇಗೆ ನಡೆದುಕೊಂಡರೆಂಬುದು ಎಲ್ಲರಿಗೂ ಗೊತ್ತಿದೆ. ಅವರ ಮಾತುಗಳು, ಮಾತು ಮನೆ ಕೆಡಿಸಿತು, ತೂತು ಒಲೆ ಕೆಡಿಸಿತು ಎಂಬಂತಿದ್ದವು ಎಂದು ಟೀಕಿಸಿದರು. ಹೈಕಮಾಂಡ್ ವಿರುದ್ಧ ಮಾತನಾಡಿದ್ದಕ್ಕೆ ರಾಜಣ್ಣ ವಜಾಗೊಂಡಿದ್ದಾರೆ. ಈಗ ಪಕ್ಷ ತ್ಯಜಿಸಲು ಬೇಕೆಂದೇ ಕಾಂಗ್ರೆಸ್ ಮೇಲೆ ಗೂಬೆ ಕೂರಿಸುತ್ತಿದ್ದಾರೆ. ದೆಹಲಿಯಲ್ಲಿ ಸಮಾವೇಶ ಮಾಡಲು ಮುಂದಾಗಿರುವ ಅವರು, ಅದೇನು ಮಾಡುತ್ತಾರೊ ಮಾಡಲಿ. ಅವರು ಬಿಜೆಪಿಗೆ ಹೋಗುತ್ತಿದ್ದಾರೊ ಇಲ್ಲವೊ ಎಂಬುದನ್ನು ಅವರನ್ನೇ ಕೇಳಿ. ಅವರ ಬ್ರೈನ್ ಮ್ಯಾಪಿಂಗ್ ಮಾಡಿಸಿದ್ರೆ ಎಲ್ಲವೂ ಗೊತ್ತಾಗುತ್ತ ದೆಂದು ಹೇಳಿದರು.

ಇಷ್ಟಕ್ಕೂ ರಾಜಣ್ಣ ಅವರನ್ನು ಸ್ವಾಗತ ಮಾಡು ತ್ತಿರುವುದು ಬಿಜೆಪಿ ನಾಯಕರೇ. ನನಗೆ ಯಾವ ಪಕ್ಷದ ಅವಶ್ಯಕತೆಯೂ ಇಲ್ಲ ಎಂದು ಹಿಂದೆ ರಾಜಣ್ಣ ಅವರೇ ಹೇಳಿದ್ದರು. ಈಗ ಅವರು ಯಾರ ಸಂಪರ್ಕದಲ್ಲಿದ್ದಾರೆ ಎಂದು ಗೊತ್ತಾಗ ಬೇಕು. ನಮ್ಮ ಸರ್ಕಾರ ಇಲ್ಲದಿದ್ದರೆ ಇಷ್ಟೊತ್ತಿ ಗಾಗಲೇ ಬಿಜೆಪಿಯಲ್ಲಿ ಇರುತ್ತಿದ್ದರು. ಈಗ ಒಂದು ಕಾಲನ್ನು ಬಿಜೆಪಿಯಲ್ಲಿಟ್ಟಿರುವ ರಾಜಣ್ಣ, ಆ ಪಕ್ಷದ ಕೇಂದ್ರ ಮತ್ತು ರಾಜ್ಯ ನಾಯಕರ ಜೊತೆ ಸಂಪರ್ಕದಲ್ಲಿದ್ದಾರೆ ಎಂದು ತಿಳಿಸಿದರು.

ನಮ್ಮ ನಾಯಕರ ಬಗ್ಗೆ ಮಾತನಾಡಿದರೆ ಮಾತ್ರ ಬಿಜೆಪಿಯಿಂದ ಉಚ್ಚಾಟನೆಗೊಂಡಿರುವ ಶಾಸಕ ಬಸನಗೌಡ ಪಾಟೀಲ್ ಯತ್ನಾಳ್ ಅವರ ರಾಜಕೀಯ ಜೀವನ ಮುಂದುವರಿಯುತ್ತದೆ. ಅವರ ಹೊಟ್ಟೆ ತುಂಬುವುದಾದಾರೆ ಮಾತನಾಡಲಿ ಎಂದರು.

ಪ್ರಜೋದಯ ದಿನಪತ್ರಿಕೆ, ಸಂಪಾದಕ, ಪ್ರಕಾಶಕ ಮತ್ತು ಮುದ್ರಕರು, ಜೆ.ಆರ್.ಕೆಂಚೇಗೌಡ, ಗಂಧದ ಕೋಠಿ ಹಿಂಭಾಗ, ಕೆ.ಆರ್.ಪುರಂ.ಹಾಸನ. ದೂರವಾಣಿ : 08172-231188, ಮೊ: 9449203019